ಸಂಪುಟ: 21, ಸಂಚಿಕೆ: 344, ಪುಟಗಳು: 8, ಶನಿವಾರ, 21 ಸೆಪ್ಟೆಂಬರ್ 2024 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3

ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of Newspapers | Tabloids | Magazines

### ಸುಭಾಷಿತ

ಯಾವುದೇ ಫಲಾಪೇಕ್ಷೆಯಿಲ್ಲದೆ ಎಲ್ಲರಿಗೂ ಒಳ್ಳೆಯದನ್ನು ಬಯಸಿ. ಸಾಧ್ಯವಾದಷ್ಟು ಒಳ್ಳೆಯದನ್ನು ಮಾಡಿ. ಏಕೆಂದರೆ ಹೂ ಮಾರುವವರ ಕೈಯಲ್ಲಿ ಯಾವಾಗಲೂ ಹೂವಿನ ಸುವಾಸನೆ ಇರುತ್ತದೆ.

### ಪಂಚಾಂಗ

(ಶನಿವಾರ 21, ಸೆಪ್ಟೆಂಬರ್-2024)

- ಶ್ರೀಕ್ರೋಧಿನಾಮ ಸಂವತ್ಸರ,
- ದಕ್ಷಿಣಾಯಣ, ವರ್ಷ ಋತು,
- ಭಾದ್ರಪದ ಮಾಸ, ಕೃಷ್ಣ ಪಕ್ಷ,
- ಚತುರ್ಥಿ, ಶನಿವಾರ, ಭರಣಿ ನಕ್ಷತ್ರ
- ರಾಹುಕಾಲ: 09:14 ರಿಂದ 10:45
- ಗುಳಿಕಕಾಲ: 06:12 ರಿಂದ 07:43
- ಯಮಗಂಡ ಕಾಲ: 01:47 ರಿಂದ 03:18

## ಸಂಕ್ಷಿಪ್ತ ಸುದ್ದಿ

### ಗಂಗಾರತಿ ಮಾದರಿಯಲ್ಲಿ ಕಾವೇರಿ ಆರತಿ

**ಬೆಂಗಳೂರು:** ಉತ್ತರ ಭಾರತದಲ್ಲಿ ನಡೆಯುವ ಗಂಗಾರತಿ ಮಾದರಿಯಲ್ಲಿಯೇ ರಾಜ್ಯದಲ್ಲಿ ಕಾವೇರಿ ಆರತಿ ನಡೆಸಲು ತಯಾರಿ ಆರಂಭವಾಗಿದೆ. ಸಂಬಂಧ ಅಧ್ಯಯನ ನಡೆಸಲು ಸಚಿವ ಚಲುವರಾಯಸ್ವಾಮಿ ನೇತೃತ್ವದ ನಿಯೋಗ ಹರಿದ್ವಾರ ಮತ್ತು ವಾರಾಣಾಸಿಗೆ ತೆರಳಿದೆ. ನಿನ್ನೆ ಹರಿದ್ವಾರಕ್ಕೆ ತೆರಳಿರುವ ನಿಯೋಗ ವಿಶೇಷ ಗಂಗಾರತಿಯಲ್ಲಿ ಭಾಗಿಯಾಗಿ ಪೂಜೆ ನಡೆಸಿತು ಮತ್ತು ಆರತಿ ಮೇಲುಸ್ತುವಾರಿ ನೋಡಿಕೊಳ್ಳುವ ಹಿಂದೂ ಸಭಾ ಜೊತೆ ಸಭೆ ನಡೆಸಿದ್ದು, ಹಲವು ಅನುಮಾನಗಳಿಗೆ ಸ್ಪಷ್ಟನೆ ಪಡೆದುಕೊಂಡಿದೆ. ಗಂಗೆಯಷ್ಟೇ ಪವಿತ್ರ ನದಿ ಕಾವೇರಿ ಎಂಬ ನಿಟ್ಟಿನಲ್ಲಿ ಕಾವೇರಿ ಆರತಿ ಮಾಡಲು ರಾಜ್ಯ ಸರ್ಕಾರ ಮುಂದಾಗಿದೆ. ಹಾಗಾಗಿ ಸಚಿವ ಚಲುವರಾಯಸ್ವಾಮಿ ನೇತೃತ್ವದ ನಿಯೋಗ ಕಾವೇರಿ ಆರತಿಯ ರೂಪುರೇಷೆ ತಯಾರಿಸಲಿದೆ.

ಪುಟ 2



### ಕಂಟೇನರ್ ಡಿಕ್ಕಿ ಹೊಡೆದು ಈರುಳ್ಳಿ ಟೆಂಪೋ ಪಲ್ಟಿ
## ಓರ್ವ ಸಾವು



**ನೆಲಮಂಗಲ:** ಹಿಂಬದಿಯಿಂದ ಕಂಟೇನರ್ ಡಿಕ್ಕಿ ಹೊಡೆದ ಪರಿಣಾಮ ಈರುಳ್ಳಿ ತುಂಬಿದ್ದ ಟೆಂಪೋ ಪಲ್ಟಿಯಾಗಿ ಓರ್ವ ಸಾವನ್ನಪ್ಪಿದ ಘಟನೆ ಬೆಂಗಳೂರು ಹೊರವಲಯದ ನೆಲಮಂಗಲದ ಅಂಚೆಪಾಳ್ಯದ ಬಳಿ ನಡೆದಿದೆ. ತುಮಕೂರು ಮಾರ್ಗವಾಗಿ ಯಶವಂತಪುರ ಮಾರುಕಟ್ಟೆಗೆ ಬರುತ್ತಿದ್ದ ಈರುಳ್ಳಿ ತುಂಬಿದ ಟೆಂಪೋಗೆ ಹಿಂಬದಿಯಿಂದ ವೇಗವಾಗಿ ಬಂದ ಮತ್ತೊಂದು ಕಂಟೇನರ್ ಲಾರಿ ಡಿಕ್ಕಿ ಹೊಡೆದಿದೆ. ಕಂಟೇನರ್ ಗುದ್ದಿದ ರಭಸಕ್ಕೆ ಟೆಂಪೋ ಪಲ್ಟಿಯಾಗಿದೆ. ಘಟನೆಯಲ್ಲಿ ಈರುಳ್ಳಿ ಟೆಂಪೋದಲ್ಲಿದ್ದ ಗಂಗಾಧರಪ್ಪ (55) ಗಂಭೀರ ಗಾಯಗೊಂಡಿದ್ದು, ಆಸ್ಪತ್ರೆಗೆ ಸಾಗಿಸುವ ದಾರಿ ಮಧ್ಯೆ ಸಾವನ್ನಪ್ಪಿದ್ದಾರೆ. ಮತ್ತೊಂದು ವಾಹನದ ಚಾಲಕ ಓಬಣ್ಣರಿಗೆ ಗಂಭೀರ ಗಾಯವಾಗಿದ್ದು, ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಟೆಂಪೋ ಪಲ್ಟಿಯಾಗಿದ್ದರಿಂದ ಕೆಲ ಜನರು ಈರುಳ್ಳಿ ತುಂಬಲು ಮುಗಿಬಿದ್ದ ಘಟನೆ ಕೂಡ ನಡೆದಿದೆ.

ಪುಟ 2

## ದಸರಾ ಆನೆಗಳ ಫೈಟಿಂಗ್; ದಿಕ್ಕಾಪಾಲಾಗಿ ಓಡಿದ ಜನ



### ದಸರಾ ಗಜಪಡೆ ಗುದ್ದಾಟ

**ಮೈಸೂರು:** ವಿಶ್ವವಿಖ್ಯಾತ ದಸರಾ ಗಜಪಡೆಯ ಆನೆ ಧನಂಜಯ ಮತ್ತೊಂದು ಆನೆ ಕಂಜನ್ ಮೇಲೆ ಏಕಾಏಕಿ ದಾಳಿ ಮಾಡಿರುವ ಘಟನೆ ಶುಕ್ರವಾರ ರಾತ್ರಿ ನಡೆದಿದೆ. ದಾಳಿಗೆ ತತ್ತರಿಸಿದ ಕಂಜನ್ ಆನೆ ದಿಕ್ಕೆ ಕಾಣದಂತೆ ಅರಮನೆ ಆವರಣದಿಂದ ಹೊರ ಓಡಿದ್ದಾನೆ.

ಕಂಜನ್ ಕಾಲಿಗೆ ಕಟ್ಟಿದ್ದ ಸರಪಳಿಯನ್ನು ಬಿಡಿಸಿಕೊಂಡು ಅರಮನೆಯಾಚೆಗೆ ಬಂದಿರುವ ಹಾಗೂ ಅವನನ್ನು ಹಿಡಿದು ತರಲು ಅರಣ್ಯ ಇಲಾಖೆ ಸಿಬ್ಬಂದಿ ಹಾಗೂ ಮಾವುತರು ಹರಸಾಹಸ ಪಡುತ್ತಿರುವ ದೃಶ್ಯಗಳೂ ಸೆರೆಯಾಗಿವೆ. 'ಮಹೇಂದ್ರ' ಆನೆಯು ಕಂಜನ್‌ನನ್ನು ನಿಯಂತ್ರಿಸಲು ಹಿಂದಿನಿಂದ ಓಡಿತು. ಜನರು ಆನೆ ಓಡಿಬರುವುದನ್ನು ನೋಡಿ ದಿಕ್ಕಾಪಾಲಾಗಿ ಓಡಿದರು. ದೊಡ್ಡಕೆರೆ ಮೈದಾನದ ಬೆಂಗಳೂರು- ನೀಲಗಿರಿ ರಸ್ತೆಯಲ್ಲಿನ ವಾಹನಗಳನ್ನು ನೋಡುತ್ತಿದ್ದಂತೆ ಕಂಜನ್ ಬೆದರಿ ನಿಂತನು. ಮಾವುತರು ಕಾವಾಡಿಗರು ಸಮಾಧಾನ ಪಡಿಸಿದರು. ಯಾವುದೇ ಅನಾಹುತ ಸಂಭವಿಸಿಲ್ಲ. ಘಟನೆಯು ರಾತ್ರಿ 8ರ ಸುಮಾರು ನಡೆದಿದೆ ಎಂದು ಮೂಲಗಳು ತಿಳಿಸಿವೆ. ಅರಮನೆ ಆವರಣದ ಒಳಗೆ ಇದ್ದ ದಸರಾ ಆನೆ ಧನಂಜಯ ಏಕಾಏಕಿ ಮತ್ತೊಂದು ಆನೆ ಕಂಜನ್ ಮೇಲೆ ದಾಳಿ ಮಾಡಿ ಅಟ್ಟಾಡಿಸುವ ವೀಡಿಯೋ ತೆಗೆದಿದ್ದು ಅರಮನೆಯ ಗೈಡ್ ಯೋಗೇಶ್. ಈ ಬಾರಿ ದಸರಾದಲ್ಲಿ 14 ಆನೆಗಳು ಸಕ್ರಿಯವಾಗಿ ಭಾಗಿಯಾಗುತ್ತಿವೆ. ಇನ್ನು ನಾಲ್ಕು ಆನೆಗಳನ್ನು ಮೀಸಲು ಆನೆಗಳನ್ನಾಗಿ ಆಯ್ಕೆ ಮಾಡಲಾಗಿದೆ. ಒಂದು ವೇಳೆ ಈ 14 ಆನೆಗಳ ಆರೋಗ್ಯದಲ್ಲಿ ಏನಾದರೂ ವ್ಯತ್ಯಯ, ವ್ಯತ್ಯಾಸಗಳಾದರೆ ಮೀಸಲು ಆನೆಗಳನ್ನು ಬಳಸಲು ತೀರ್ಮಾನಿಸಲಾಗಿದೆ.

### ಕರ್ನಾಟಕದ ಎಲ್ಲ ಮುಜರಾಯಿ ದೇಗುಲಗಳಲ್ಲಿ
# ಪ್ರಸಾದ ಪರೀಕ್ಷೆ






**ಬೆಂಗಳೂರು:** ತಿರುಪತಿ ತಿರುಮಲ ದೇಗುಲದ ಲಡ್ಡುವಿನಲ್ಲಿ ಪ್ರಾಣಿಗಳ ಕೊಬ್ಬು ಬಳಕೆಯಾಗಿರುವ ಪ್ರಕರಣ ಗಂಭೀರ ಸ್ವರೂಪ ಪಡೆದುಕೊಂಡ ಬೆನ್ನಲ್ಲೇ ಎಚ್ಚೆತ್ತುಕೊಂಡಿರುವ ಕರ್ನಾಟಕ ಸರ್ಕಾರ, ರಾಜ್ಯದ ಮುಜರಾಯಿ ವ್ಯಾಪ್ತಿಯ ಎಲ್ಲ ದೇಗುಲಗಳಲ್ಲಿ ಪ್ರಸಾದ ತಯಾರಿಗೆ ನಂದಿನಿ ತುಪ್ಪವನ್ನೇ ಬಳಸುವಂತೆ ಶುಕ್ರವಶರ ಸುತ್ತೋಲೆ ಹೊರಡಿಸಿತ್ತು. ಇದೀಗ ಮುಜರಾಯಿ ವ್ಯಾಪ್ತಿಯ ಎಲ್ಲ ದೇಗುಲಗಳ ಪ್ರಸಾದವನ್ನು ಪ್ರಯೋಗಾಲಯದಲ್ಲಿ ಪರಿಶೀಲನೆಗೆ ಒಳಪಡಿಸುವಂತೆ ಆದೇಶಿಸಿದೆ.

ಮುಜರಾಯಿ ಇಲಾಖೆ ಅಡಿಯಲ್ಲಿ ರಾಜ್ಯದಲ್ಲಿ 34,000 ಕ್ಕೂ ಹೆಚ್ಚು ದೇವಾಲಯಗಳಿವೆ. ಅವುಗಳಲ್ಲಿ, 205 ದೇಗುಲಗಳ ವಾರ್ಷಿಕ ಆದಾಯ 25 ಲಕ್ಷ ರೂ.ಗಿಂತ ಹೆಚ್ಚಿದ್ದು, ವರ್ಗ-ಎ ಎಂದು ವರ್ಗೀಕರಿಸಲ್ಪಟ್ಟಿವೆ. 193 ದೇಗುಲಗಳನ್ನು 5 ಲಕ್ಷದಿಂದ ರೂ. 25 ಆದಾಯದೊಂದಿಗೆ ವರ್ಗ-ಬಿ ಎಂದು ಗುರುತಿಸಲಾಗಿದೆ. ಉಳಿದವುಗಳನ್ನು 5 ಲಕ್ಷ ರೂ. ಆದಾಯದೊಂದಿಗೆ ವರ್ಗ-ಸಿ ಎಂದು ವರ್ಗೀಕರಿಸಲಾಗಿದೆ. ಇವುಗಳಲ್ಲಿ ಹೆಚ್ಚಿನ ದೇವಾಲಯಗಳು ಭಕ್ತರಿಗೆ ಪ್ರಸಾದವನ್ನು ನೀಡುತ್ತವೆ.

**ಪ್ರಸಾದಗಳ ಪರೀಕ್ಷೆ ಯಾಕೆ? ಸಚಿವರು ಹೇಳಿದ್ದೇನು?**

ರಾಜ್ಯದ ದೇವಾಲಯಗಳು ಭಕ್ತರಿಗೆ ಸುರಕ್ಷಿತ ಮತ್ತು ಆರೋಗ್ಯಕರ ಪ್ರಸಾದ ಮತ್ತು ಆಹಾರವನ್ನು ನೀಡುತ್ತವೆ ಎಂದು ಮುಜರಾಯಿ ಸಚಿವ ರಾಮಲಿಂಗಾ ರೆಡ್ಡಿ ತಿಳಿಸಿದ್ದಾರೆ. ಮುಜರಾಯಿ ವ್ಯಾಪ್ತಿಯ ದೇಗುಲಗಳ ಪ್ರಸಾದದ ವಿಚಾರದಲ್ಲಿ ಜನರಿಗೆ ಯಾವುದೇ ಅನುಮಾನ ಇರಬಾರದು. ಹೀಗಾಗಿ ಪ್ರಸಾದಗಳ ಪರೀಕ್ಷೆ ನಡೆಸುವಂತೆ ಸುತ್ತೋಲೆ ಹೊರಡಿಸಿದ್ದೇವೆ ಎಂದು ಅವರು ತಿಳಿಸಿದ್ದಾರೆ.

ಪುಟ 2

### ದೇವಾಲಯಗಳಲ್ಲಿ ನಂದಿನಿ ತುಪ್ಪ ಕಡ್ಡಾಯ

ಪುಟ 8

## ರಾಜ್ಯೋತ್ಸವ ಪ್ರಶಸ್ತಿಗೆ ಡಿಮ್ಯಾಂಡ್

**ಬೆಂಗಳೂರು:** ಕನ್ನಡ ರಾಜ್ಯೋತ್ಸವ ಪ್ರಶಸ್ತಿಗೆ ಡಿಮ್ಯಾಂಡ್ ಹೆಚ್ಚಾದಂತೆ ಕಾಣ್ತಿದೆ. ಈ ಬಾರಿ ರಾಜ್ಯೋತ್ಸವ ಪ್ರಶಸ್ತಿ ಪಡೆಯಲು ಸಾವಿರಾರು ಅರ್ಜಿಗಳು ಸಂದಾಯವಾಗಿವೆ.

ಈ ಬಾರಿ 69 ಪ್ರಶಸ್ತಿಗಳನ್ನು ಕೊಡಲಾಗುತ್ತಿದೆ. 69 ಪ್ರಶಸ್ತಿಗಳಿಗೆ 1,200ಕ್ಕೂ ಹೆಚ್ಚು ಅರ್ಜಿಗಳು ಸಂದಾಯವಾಗಿದೆ. ಆನ್ ಲೈನ್ ಸೇವಾಸಿಂಧು ಪೋರ್ಟಲ್ ಮೂಲಕ ಬರೋಬ್ಬರಿ 1,135ಕ್ಕೂ ಹೆಚ್ಚು ಹಾಗೂ ಭೌತಿಕವಾಗಿ 85ಕ್ಕೂ ಹೆಚ್ಚು ಅರ್ಜಿಗಳು ಸಂದಾಯವಾಗಿವೆ. ರಾಜಕೀಯ ನಾಯಕರು, ಸಂಘ-ಸಂಸ್ಥೆಗಳು, ಪಕ್ಷದ ಪ್ರಮುಖರಿಂದಲೂ ಪ್ರಶಸ್ತಿಗೆ ಹೆಸರುಗಳು ಶಿಫಾರಸು ಬಂದಿದೆ. ಜೊತೆಗೆ ಮಾಜಿ ಸಚಿವರು, ವಿವಿಧ ಕ್ಷೇತ್ರದ ಗಣ್ಯರು, ವಿವಿಧ ಕ್ಷೇತ್ರದ ಸಾಧಕರಿಗೆ ಪ್ರಶಸ್ತಿ ಕೊಡುವಂತೆ ಮನವಿಗಳು ಬಂದಿವೆ ಎಂದು ಉನ್ನತ ಮೂಲಗಳು ತಿಳಿಸಿವೆ. ಸರ್ಕಾರದಿಂದ ಪ್ರಶಸ್ತಿಗೆ ಮಾನದಂಡ ಇದ್ದರೂ ಲಾಬಿಗೆ ಮಣೆ ಹಾಕೋದು ಅನ್ನೋ ಮಾತುಗಳು ಸಹ ಕೇಳಿಬರ್ತಿವೆ.




69 ಪ್ರಶಸ್ತಿಗೆ 2,000ಕ್ಕೂ ಹೆಚ್ಚು ಅರ್ಜಿ ಸಲ್ಲಿಕೆ

### ಸಿಖ್ಖರ ವಿರುದ್ಧ ಹೇಳಿಕೆಗೆ ತೀವ್ರ ಆಕ್ಷೇಪ
## ರಾಹುಲ್ ಗಾಂಧಿ ವಿರುದ್ಧ 3 ಎಫ್‌ಐಆರ್

**ರಾಯ್ಪುರ:** ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ಇತ್ತೀಚೆಗೆ ಅಮೆರಿಕಕ್ಕೆ ಭೇಟಿ ನೀಡಿದ್ದ ವೇಳೆ ಸಿಖ್ಖರ ಕುರಿತು ನೀಡಿದ ಹೇಳಿಕೆ ಖಂಡಿಸಿ ಛತ್ತೀಸ್‌ಗಢದ ಬಿಜೆಪಿ ನಾಯಕರು ಮೂರು ಪ್ರತ್ಯೇಕ ಎಫ್‌ಐಆರ್ ದಾಖಲಿಸಿದ್ದಾರೆ.



ರಾಯ್ಪುರ ಸಿವಿಲ್ ಲೈನ್ಸ್ ಪೊಲೀಸ್ ಠಾಣೆಯಲ್ಲಿ ಒಂದು, ಬಿಲಾಸ್‌ಪುರ ಜಿಲ್ಲಾ ಸಿವಿಲ್ ಲೈನ್ಸ್ ಠಾಣೆಯಲ್ಲಿ ಹಾಗೂ ದುರ್ಗ್ ಜಿಲ್ಲೆಯ ಕೋಟ್ವಾಲಿ ಪೊಲೀಸ್ ಠಾಣೆಯಲ್ಲಿ ಒಂದು ಎಫ್‌ಐಆರ್ ದಾಖಲಿಸಲಾಗಿದೆ. ಬಿಜೆಪಿ ನಾಯಕರು ನೀಡಿದ ದೂರಿನ ಮೇರೆಗೆ ರಾಹುಲ್ ಗಾಂಧಿ ವಿರುದ್ಧ ಬಿಎನ್ ಎಸ್ ಸೆಕ್ಷನ್ 299 ಮತ್ತು 302ರ ಅಡಿಯಲ್ಲಿ ಪ್ರಕರಣ ದಾಖಲಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಛತ್ತೀಸ್‌ಗಢದ ಬಿಜೆಪಿ ವಕ್ತಾರ ಅಮರ್‌ಜೀತ್ ಸಿಂಗ್ ಛಾಬ್ರಾ, ರಾಹುಲ್ ಹೇಳಿಕೆಯೂ ಸಿಖ್ ಸಮುದಾಯದ ಧಾರ್ಮಿಕ ಭಾವನೆಗೆ ಧಕ್ಕೆಯಾಗಿದೆ ಎಂದು ಆರೋಪಿಸಿ ರಾಯ್ಪುರದಲ್ಲಿ ದೂರು ದಾಖಲಿಸಿದ್ದಾರೆ.

ಪುಟ 2

### ಇಡೀ ವಿಶ್ವದಲ್ಲಿ ಜನರ ಖಾತೆಗೆ ಹಣ ಹಾಕುತ್ತಿರುವ ಏಕೈಕ ಸರ್ಕಾರ ನಮ್ಮದು



**ಮೈಸೂರು:** ವಿಶ್ವದಲ್ಲೇ ಜನರ ಖಾತೆಗಳಿಗೆ ಹಣ ಹಾಕುತ್ತಿರುವ ಏಕೈಕ ಸರ್ಕಾರ ನಮ್ಮದು ಎಂದು ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ ಹೇಳಿದ್ದಾರೆ. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಡಾ ವ್ಯಾಪ್ತಿಯ ಪ್ರದೇಶಗಳ ಅಭಿವೃದ್ಧಿಗೆ ಮಾತ್ರ ಮುಡಾ ಹಣ ಬಳಕೆಯಾಗಿದೆ. ಅದರಲ್ಲಿ ತಪ್ಪೇನಿದೆ? ಜನರ ಒಳತಿಗೆ ಬಳಸುವುದಕ್ಕಾಗಿಯೇ ಆ ಹಣವಿದೆ. ಬಳಕೆ ಮಾಡುವುದರಲ್ಲಿ ಯಾವ ತಪ್ಪುಗಳು ಆಗಿಲ್ಲ. ವಿಪಕ್ಷಗಳು ಇಲ್ಲಸಲ್ಲದ ಆರೋಪ ಮಾಡುತ್ತಿದ್ದಾರೆ ಅಷ್ಟೇ. ವಿಶ್ವದಲ್ಲೇ ಜನರ ಖಾತೆಗಳಿಗೆ ಹಣ ಹಾಕುತ್ತಿರುವ ಏಕೈಕ ಸರ್ಕಾರ ನಮ್ಮದು.

ಪುಟ 2

### ದುಷ್ಕರ್ಮಿಗಳ ಗುಂಪಿಗೆ ತೀವ್ರ ಶೋಧ
## ಸಚಿವರ ಆಪ್ತ ಸಹಾಯಕ ಕಿಡ್ನ್ಯಾಪ್



**ಇಂಫಾಲ್:** ಮಣಿಪುರದ ಗ್ರಾಹಕ ವ್ಯವಹಾರಗಳ ಸಚಿವ ಎಲ್. ಸುಸಿಂದ್ರೋ ಅವರ ಆಪ್ತ ಸಹಾಯಕರನ್ನು ಇಂಫಾಲ್ ಪೂರ್ವ ಜಿಲ್ಲೆಯ ಅವರ ನಿವಾಸದ ಬಳಿಯೇ ದುಷ್ಕರ್ಮಿಗಳ ಗುಂಪೊಂದು ಅಪಹರಿಸಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಎಸ್. ಸೊಮೊರೆಂಡ್ರೊ, (43) ಅಪಹರಣವಾಗಿರುವ ವ್ಯಕ್ತಿ, ಘಟನೆ ಹಿಂದಿನ ಉದ್ದೇಶವು ಅಸ್ಪಷ್ಟವಾಗಿದೆ. ಘಟನೆಯ ಹೊಣೆಯನ್ನು ಯಾವುದೇ ಗುಂಪು ಹೊತ್ತುಕೊಂಡಿಲ್ಲ. ದುಷ್ಕರ್ಮಿಗಳ ಗುಂಪಿಗಾಗಿ ಪೊಲೀಸರು ತೀವ್ರ ಶೋಧ ನಡೆಸಿದ್ದಾರೆ ಎಂದು ವರದಿಗಳು ತಿಳಿಸಿವೆ.

ಪುಟ 2

## ಸೆಕ್ಯೂರಿಟಿ ಸಿಬ್ಬಂದಿ ಮೇಲೆ ಹಲ್ಲೆ

**ಬೆಂಗಳೂರು:** ನಾನು ಡಿಸಿಪಿ ಮಗ, ಮುಖ್ಯಮಂತ್ರಿ ನನ್ನ ಸಂಬಂಧಿ ಅಂತಾ ಹೇಳಿ ಯುವಕನೋರ್ವ ಅಪಾರ್ಟ್‌ಮೆಂಟ್ ಸೆಕ್ಯೂರಿಟಿ ಸಿಬ್ಬಂದಿ ಮೇಲೆ ಹಲ್ಲೆ ನಡೆಸಿರುವ ಘಟನೆ ಬೆಂಗಳೂರಿನ ಕುಂಬಳಗೋಡು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಸೆಕ್ಯೂರಿಟಿ ಗಾರ್ಡ್ ಪುನೀತ್ ಮೇಲೆ ಯುವಕ ವರುಣ್ (21) ಹಲ್ಲೆ ನಡೆಸಿದ್ದಾನೆ.

ಹಲ್ಲೆಗೊಳಗಾದ ಪುನೀತ್ ಅವರು ಕುಂಬಳಗೋಡು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಬರುವ ದೊಡ್ಡಬೆಲೆಯ ಪ್ರಾವಿಡೆಂಟ್ ಸನ್‌ವರ್ತ್ ಅಪಾರ್ಟ್‌ಮೆಂಟ್‌ಗೆ ಸೆಕ್ಯೂರಿಟಿ ಗಾರ್ಡ್ ಆಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ನಿನ್ನೆ ತಡರಾತ್ರಿ 12 ಗಂಟೆ ಸುಮಾರಿಗೆ ಯುವಕ ವರುಣ್ ಅಪಾರ್ಟ್ಮೆಂಟ್‌ಗೆ ಇಬ್ಬರು ಯುವತಿಯರು ಹಾಗೂ ಓರ್ವ ಯುವಕನನ್ನು ಕರೆತಂದಿದ್ದ. ಯುವತಿಯರನ್ನು ಕರೆದುಕೊಂಡು ಬಂದ ಹಿನ್ನೆಲೆ ಅನುಮಾನಗೊಂಡ ಸೆಕ್ಯೂರಿಟಿ ಗಾರ್ಡ್ ಪುನೀತ್, ರಾತ್ರಿ 12 ಗಂಟೆ ನಂತರ ಅಪರಿಚಿತರಿಗೆ ಪ್ರವೇಶವಿಲ್ಲ ಎಂದು ಯುವಕನಿಗೆ ಖಡಕ್ ಆಗಿ ಹೇಳಿದ್ದಾರೆ.

ಇದರಿಂದ ಕೋಪಗೊಂಡ ವರುಣ್, ಹಲ್ಲೆ ನಡೆಸಿದ್ದಾನೆ. ನಾನು ಯಾರ್ ಗೊತ್ತಾ? ಡಿಸಿಪಿ ಮಗ. ಸಿಎಂ ಸಿದ್ದರಾಮಯ್ಯ ನನ್ನ ಸಂಬಂಧಿ ಎಂದು ಹೇಳಿ ವರುಣ್, ಪುನೀತ್ ಮೇಲೆ ಹಲ್ಲೆ ನಡೆಸಿದ್ದಾನೆ. ಇನ್ನು ಮತ್ತೊಂದೆಡೆ ಅಪಾರ್ಟ್ಮೆಂಟ್ ರೂಲ್ಸ್ ಪ್ರಕಾರ ನಡೆದರೂ ಹಲ್ಲೆ ಮಾಡಿದ್ದಾರೆ. ಕಿವಿ ಪರದೆ ಹರಿದು ಹೋಗುವ ಹಾಗೆ ಹಲ್ಲೆ ಮಾಡಲಾಗಿದೆ. ನನ್ನ ಕಿವಿ ಕೇಳಿಸುತ್ತಿಲ್ಲ ಎಂದು ಪುನೀತ್ ಅವರು ಪೊಲೀಸರಿಗೆ ದೂರು ನೀಡಿದ್ದಾರೆ. ಸೆಕ್ಯೂರಿಟಿ ಗಾರ್ಡ್ ಮೇಲೆ ಕಪಾಳ ಮೋಕ್ಷ ಮಾಡುವ ವಿಡಿಯೋ ರಿಕಾರ್ಡ್ ಆಗಿದೆ. ಅಲ್ಲೇ ಇದ್ದ ಸ್ಥಳೀಯರು ಹಲ್ಲೆ ವಿಡಿಯೋ ರಿಕಾರ್ಡ್ ಮಾಡಿದ್ದಾರೆ. ಅಲ್ಲದೆ ವರುಣ್ ಯುವತಿಯರನ್ನು ಕರೆದುಕೊಂಡು ಬಂದ ದೃಶ್ಯಗಳು ಕೂಡ ಸಿಸಿಟಿವಿ ಕ್ಯಾಮಾರದಲ್ಲಿ ಸೆರೆಯಾಗಿವೆ.



### ಗನ್ ಸಪ್ಲೈ ಮಾಡುತ್ತಿದ್ದ ಆರೋಪಿ ಮೇಲೆ
## ಪೋಲಿಸರ ಫೈರಿಂಗ್

**ಕಲಬುರಗಿ:** ಕಳೆದ ಶುಕ್ರವಾರ ಆಳಂದ ತಾಲೂಕಿನ ಜಿಡಗಾ ಕ್ರಾಸ್ ಬಳಿ ಗ್ರಾಮ ಪಂಚಾಯಿತು ಮಾಜಿ ಸದಸ್ಯ ವಿಶ್ವನಾಥ ಜಮಾದಾರ್ ಅವರನ್ನು ಗುಂಡಿಕ್ಕಿ ಕೊಲೆ ಮಾಡಲಾಗಿತ್ತು. ಈ ಕೊಲೆ ಪ್ರಕರಣದ ಆರೋಪಿ ಕಾಲಿಗೆ ಪೊಲೀಸರು ಗುಂಡು ಹೊಡೆದಿದ್ದಾರೆ. ಲಕ್ಷ್ಮಣ ಗುಂಡೇಟು ತಿಂದ ಆರೋಪಿ. ಅಫಜಲಪುರ ಠಾಣೆ ಪಿಎಸ್‌ಐ ಸೋಮಲಿಂಗ ಒಡೆಯರ್ ನೇತೃತ್ವದ ತಂಡ ಖಚಿತ ಮಾಹಿತಿ ಮೇರೆಗೆ ಆಳಂದ ತಾಲೂಕಿನ ಮಾಡ್ಯಾಳ ಗ್ರಾಮದಲ್ಲಿದ್ದ ಆರೋಪಿ ಲಕ್ಷ್ಮಣನನ್ನು ಬಂಧಿಸಲು ಹೋಗಿದ್ದಾರೆ. ಈ ವೇಳೆ ಆರೋಪಿ ಲಕ್ಷ್ಮಣ ಪೊಲೀಸರ ಮೇಲೆ ಹಲ್ಲೆ ಮಾಡಲು ಮುಂದಾದನು. ಆತ್ಮರಕ್ಷಣೆಗಾಗಿ ಅಫಜಲಪುರ ಠಾಣೆ ಪಿಎಸ್‌ಐ ಸೋಮಲಿಂಗ ಆರೋಪಿ ಲಕ್ಷ್ಮಣ ಬಲಗಾಲಿಗೆ ಗುಂಡು ಹೊಡೆದಿದ್ದಾರೆ. ಆರೋಪಿ ಲಕ್ಷ್ಮಣ ಬೆಂಗಳೂರು ಮತ್ತು ಕಲಬುರಗಿ ಜಿಲ್ಲೆಯ ವಿವಿಧೆಡೆ ಬಂದೂಕು ಸರಬರಾಜು ಮಾಡುತ್ತಿದ್ದನು. ಈ ಹಿನ್ನೆಲೆಯಲ್ಲಿ ಅಕ್ರಮ ಶಸ್ತ್ರಾಸ್ತ್ರ ಪೂರೈಕೆ ಸೇರಿದಂತೆ ಕೊಲೆ ಆರೋಪಿ ಲಕ್ಷ್ಮಣ ಪೂಜಾರಿ ವಿರುದ್ಧ 11 ಕೇಸ್‌ಗಳಿವೆ. ವಿಶ್ವನಾಥ್ ಜಮಾದಾರ್ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿ ಲಕ್ಷ್ಮಣ ವಿರುದ್ಧ ಆಳಂದ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ಪುಟ 2

# ಸಾಹಿತಿ ಹಂ.ಪ.ನಾಗರಾಜಯ್ಯ ಅವರಿಂದ ದಸರಾ ಉದ್ಘಾಟನೆ

**ಮೈಸೂರು:** ಈ ಬಾರಿಯ ವಿಶ್ವವಿಖ್ಯಾತ ಮೈಸೂರು ದಸರಾ ಉದ್ಘಾಟಕರಾಗಿ ಸಾಹಿತಿ ಹಂ.ಪ.ನಾಗರಾಜಯ್ಯ ಅವರಿಗೆ ಆಹ್ವಾನ ನೀಡಲಾಗಿದೆ. ಮೈಸೂರು ದಸರಾ 2024 ಉದ್ಘಾಟನೆಗೆ ಹಿರಿಯ ಸಾಹಿತಿ ಹಂ.ಪ.ನಾಗರಾಜಯ್ಯರನ್ನು ಆಹ್ವಾನಿಸಲಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಘೋಷಿಸಿದ್ದಾರೆ. ಕನ್ನಡ ಸಾಹಿತ್ಯ ಪರಿಷತ್ತಿನ ಮಾಜಿ ಅಧ್ಯಕ್ಷ ಹಂ.ಪ.ನಾಗರಾಜಯ್ಯ ಅವರು ಕನ್ನಡದ ಪ್ರಮುಖ ಭಾಷಾ ವಿಜ್ಞಾನಿ, ಸಂಶೋಧಕ. 'ಹಂಪನಾ' ಕಾವ್ಯನಾಮದಿಂದ ಬರೆಯುವ ನಾಗರಾಜಯ್ಯ ಮೂಲತಃ ಗೌರಿಬಿದನೂರು ತಾಲೂಕಿನ ಹಂಪಸಂದ್ರದವರು.



ಮೈಸೂರಿನ ಮಹಾರಾಣಿ ಕಾಲೇಜಿನಲ್ಲಿ ಅಧ್ಯಾಪಕರಾಗಿ ವೃತ್ತಿಜೀವನ ಆರಂಭಿಸಿದ ಅವರು ನಂತರ ಮಂಡ್ಯ, ದಾವಣಗೆರೆ, ಶಿವಮೊಗ್ಗ ಸರ್ಕಾರಿ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸಿದರು. ಸೆಂಟ್ರಲ್ ಕಾಲೇಜಿಗೆ ಸೇರಿದ ಅವರು ನಂತರ ಬೆಂಗಳೂರು ವಿಶ್ವವಿದ್ಯಾಲಯದ ಕನ್ನಡ ಪ್ರಾಧ್ಯಾಪಕರಾಗಿ, ಕನ್ನಡ ಅಧ್ಯಯನ ಕೇಂದ್ರದ ನಿರ್ದೇಶಕರಾಗಿ ಕಾರ್ಯನಿರ್ವಹಿಸಿ ನಿವೃತ್ತರಾದರು. ಕನ್ನಡ ಸಾಹಿತ್ಯ ಲೋಕಕ್ಕೆ ಹಲವು ಮೌಲಿಕ ಕೃತಿಗಳನ್ನು ಕೊಡುಗೆಯಾಗಿ ಕೊಟ್ಟಿದ್ದಾರೆ. ಹಂಪನಾ ಅವರ ಸಾಹಿತ್ಯ ಸೇವೆಗೆ ಕರ್ನಾಟಕ ಸಾಹಿತ್ಯ ಅಕಾಡಮಿ ಪ್ರಶಸ್ತಿ, ಚಾವುಂಡರಾಯ ಪ್ರಶಸ್ತಿ, ಕಾವ್ಯಾನಂದ ಪುರಸ್ಕಾರ, ತಮ್ಮಣರಾವ ಅಮ್ಮಿನಭಾವಿ ಸ್ಮಾರಕ ಪ್ರಶಸ್ತಿ, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ, ಶಂಬಾ ಜೋಶಿ ಪ್ರಶಸ್ತಿ, ಆಚಾರ್ಯ ಸುಮತಿ ಸಾಗರ ಶ್ರುತ ಸಂವರ್ಧನ ಪುರಸ್ಕಾರಗಳು ಸಂದಿವೆ.

## ಅರ್ಜಿ ಆಹ್ವಾನ

**ಮಂಡ್ಯ:** 2024 ಅಕ್ಟೋಬರ್ 4 ರಿಂದ 7 ರವರೆಗೆ ಮಂಡ್ಯ ಜಿಲ್ಲೆ ಶ್ರೀರಂಗಪಟ್ಟಣ ತಾಲ್ಲೂಕಿನಲ್ಲಿ ನಡೆಯಲಿರುವ ಐತಿಹಾಸಿಕ ನಾಡಹಬ್ಬ ಶ್ರೀರಂಗಪಟ್ಟಣ ದಸರಾ ಆಹಾರ ಮೇಳಕ್ಕೆ ಮಳಿಗೆ ತೆರೆಯಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸುವವರು ಕರ್ನಾಟಕ ರಾಜ್ಯದ ವಿವಿಧ ಜಿಲ್ಲೆಗಳ ಸೊಬಗನ್ನು ಸೂಚಿಸುವ ವಿವಿಧ ಬಗೆಯ ಖಾದ್ಯ ತಯಾರಕರಿಗೆ ಅಂಗಡಿ ಮಳಿಗೆಗಳನ್ನು ತೆರೆಯಲು ಅವಕಾಶ ಕಲ್ಪಿಸಲಾಗಿದೆ, ಕಮರ್ಶಿಯಲ್ ಗ್ಯಾಸ್ ಸಿಲಿಂಡರ್ ಗಳನ್ನು ಹಣ ಪಾವತಿಸಿದ್ದಲ್ಲಿ ಒದಗಿಸಲಾಗುವುದು, ಎಫ್.ಎಸ್.ಎಸ್.ಎ.ಐ ಲೈಸನ್ಸ್ ದೃಢೀಕೃತ ಪ್ರತಿಯನ್ನು ಹಾಜರುಪಡಿಸುವುದು, ಅಂಗಡಿ ಮಳಿಗೆಯು 10★10 ಅಥವಾ 10★8 ವಿಸ್ತೀರ್ಣದ ಮಳಿಗೆ ಉಚಿತವಾಗಿ ನೀಡಲಾಗುವುದು, ಸ್ವಚ್ಛತೆ ನೈರ್ಮಲ್ಯ ಹಾಗೂ ಸಾಗಾಣಿಕೆ ವೆಚ್ಚವನ್ನು ಮಳಿಗೆಯವರೇ ಸ್ವತ: ಭರಿಸುವುದು, ಕೇವಲ ಸಸ್ಯಾಹಾರ ಖಾದ್ಯಗಳಿಗೆ ಮಾತ್ರ ಅವಕಾಶ ಕಲ್ಪಿಸಲಾಗಿದೆ. ಆಹಾರ ಉತ್ಪನ್ನಗಳ ಪ್ರದರ್ಶಕ/ ಮಾರಾಟಗಾರರು ಕಡ್ಡಾಯವಾಗಿ ಶುಚಿತ್ವ/ರುಚಿಯನ್ನು ಕಾಪಾಡುವುದು. ಆಸಕ್ತರು ಮೇಲ್ಕಂಡ ದಾಖಲಾತಿಗಳೊಡನೆ ಅರ್ಜಿಯನ್ನು ಶ್ರೀರಂಗಪಟ್ಟಣ ತಾಲ್ಲೂಕು ತಹಸೀಲ್ದಾರ್ ಅಥವಾ ಮಂಡ್ಯ ಜಿಲ್ಲಾಧಿಕಾರಿಗಳ ಕಟ್ಟಡ ಆಹಾರ ಶಾಖೆ ಅಥವಾ ಜಂಟಿನಿರ್ದೇಶಕರ ಕಚೇರಿಗೆ ಸಲ್ಲಿಸತಕ್ಕದ್ದು. ಹೆಚ್ಚಿನ ಮಾಹಿತಿ ಹಾಗೂ ಅನುಮತಿಗಾಗಿ ದೂ.ಸಂ: 9036529129/ 9845652579/ 9738815115 ಅನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಜಿಲ್ಲೆ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯಾವಹರಗಳ ಇಲಾಖೆಯ ಜಂಟಿ ನಿರ್ದೇಕರು ಹಾಗೂ ಆಹಾರ ಸಮಿತಿ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ರಹಸ್ಯ ಮಾಹಿತಿ ಸೋರಿಕೆ ಬಗ್ಗೆ ಮಾಹಿತಿ ಕೊಡಿ

# ಸರ್ಕಾರಕ್ಕೆ ರಾಜ್ಯಪಾಲರ ಪತ್ರ

**ಬೆಂಗಳೂರು:** ಲೋಕಾಯುಕ್ತದವರು ರಾಜ್ಯಪಾಲರಿಗೆ ಬರೆದ ರಹಸ್ಯ ಪತ್ರ ಸೋರಿಕೆಯಾದ ಬಗ್ಗೆ ಮಾಹಿತಿ ಕೊಡಿ ಎಂದು ಸರ್ಕಾರಕ್ಕೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಪತ್ರ ಬರೆದಿದ್ದಾರೆ.

ರಾಜ್ಯ ಸರ್ಕಾರಕ್ಕೆ ಮತ್ತೊಂದು ಪತ್ರ ಬರೆಯಲಾಗಿದ್ದು, ಆ.28 ರಂದು ಸರ್ಕಾರದಿಂದ ಸ್ಪಷ್ಟನೆಕೇಳಿ ರಾಜ್ಯಪಾಲರು ಪತ್ರ ಬರೆದಿದ್ದಾರೆ. ವಿಪಕ್ಷ ನಾಯಕರ ವಿರುದ್ಧ ಪ್ರಾಸಿಕ್ಯೂಷನ್ ಅನುಮತಿ ಕೇಳಿ ಲೋಕಾಯುಕ್ತದಿಂದ ರಾಜ್ಯಪಾಲರಿಗೆ ಪತ್ರ ಬರೆಯಲಾಗಿದೆ. ಈ ಪತ್ರದ ಬಗ್ಗೆ ಕ್ಯಾಬಿನೆಟ್ ಸಭೆಯಲ್ಲಿ ನಿರ್ಣಯ ಕೈಗೊಂಡು ರಾಜ್ಯಪಾಲರಿಗೆ ಕ್ಯಾಬಿನೆಟ್ ನಿರ್ಣಯ ಕಳುಹಿಸಿಕೊಡಲಾಗಿದೆ. ಆದರೆ ಲೋಕಾಯಕ್ತದವರು ರಾಜ್ಯಪಾಲರಿಗೆ ಬರೆದ ರಹಸ್ಯ ಪತ್ರದ ಬಗ್ಗೆ ಸರ್ಕಾರಕ್ಕೆ ಹೇಗೆ ಮಾಹಿತಿ ಬಂತು? ಅದರ ಬಗ್ಗೆ ಸ್ಪಷ್ಟನೆ ನೀಡಿ ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಪತ್ರ ಬರೆದಿದ್ದಾರೆ.

ಕ್ಯಾಬಿನೆಟ್ ನಿರ್ಣಯ ಹಾಗೂ ಪ್ರಾಸಿಕ್ಯೂಷನ್ ಕೇಳಿ ಲೋಕಾಯುಕ್ತ ಬರೆದ ಪತ್ರದ ಬಗೆಗಿನ ನಿರ್ಣಯಕ್ಕೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಹಾಗೂ ಲೋಕಾಯುಕ್ತ, ಎಸ್‌ಐಟಿಗೂ ಪತ್ರ ಬರೆದಿರುವ ಗವರ್ನರ್ ರಹಸ್ಯ ಮಾಹಿತಿ ಸೋರಿಕೆ ಬಗ್ಗೆ ಮಾಹಿತಿ ಕೇಳಿದ್ದಾರೆ. ತನಿಖೆ ನಡೆಸಿ ವರದಿ ನೀಡಲು ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಸೂಚನೆ ನೀಡಿದ್ದಾರೆ.

### ರಾಜ್ಯಪಾಲರ ಪತ್ರದಲ್ಲಿ ಏನಿದೆ?

**ಆ.26ನೇ ತಾರೀಕು ಸಂಜೆ 5 ಕ್ಕೆ ರಾಜಭವನಕ್ಕೆ ಸರ್ಕಾರದಿಂದ ಪತ್ರ ಬಂದಿದೆ. ಕ್ಯಾಬಿನೆಟ್ ನಿರ್ಣಯದ ದಾಖಲೆಗಳ ಕುರಿತು ಮುಚ್ಚಿದ ಲಕೋಟೆ ಬಂದಿದೆ. ಆದರೆ ಆ ಲಕೋಟೆಯೊಳಗೆ 16ನೇ ಸಚಿವ ಸಂಪುಟ ಸಭೆಯ ಅಜೆಂಡಾ ಹಾಗೂ 17ನೇ ಸಚಿವ ಸಂಪುಟದ ಹೆಚ್ಚುವರಿ ಅಜೆಂಡಾ ಕಾಪಿ ಮಾತ್ರ ಇತ್ತು. ಸಭೆಯಲ್ಲಿ ಕೈಗೊಂಡಿರುವ ನಿರ್ಣಯದ ಬಗ್ಗೆ ದಾಖಲೆಗಳು ಇರಲಿಲ್ಲ. ಕ್ಯಾಬಿನೆಟ್ ವಿಭಾಗಕ್ಕೆ ದೂರವಾಣಿ ಮೂಲಕ ಕರೆ ಮಾಡಿ ಮಾಹಿತಿ ತಿಳಿಸಲಾಗಿದೆ.**



**ಮಾಹಿತಿ ನೀಡಿದ ಬಳಿಕ 27 ರಂದು ಡಿಸಿಎಂ ಡಿಕೆ ಶಿವಕುಮಾರ್ ಅಧ್ಯಕ್ಷತೆಯಲ್ಲಿ ಕ್ಯಾಬಿನೆಟ್ ಕೈಗೊಂಡ ನಿರ್ಣಯಗಳ ದಾಖಲೆ ರಾಜಭವನಕ್ಕೆ ಸಲ್ಲಿಸಲಾಗಿದೆ. ಆ ಮಾಹಿತಿಯಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್ ಅಧ್ಯಕ್ಷತೆಯಲ್ಲಿ ನಡೆದ ಕ್ಯಾಬಿನೆಟ್ ಮೀಟಿಂಗ್ ಹೆಚ್ಚುವರಿ ಅಜೆಂಡಾದ ನಿರ್ಣಯಗಳು ನಮಗೆ ಲಭ್ಯವಾಗಿಲ್ಲ. ಆದರೆ 23 ರಂದು ಮಾಧ್ಯಮಗಳಲ್ಲಿ ಹೆಚ್.ಡಿ.ಕುಮಾರಸ್ವಾಮಿ, ಜನಾರ್ದನ ರೆಡ್ಡಿ, ಮುರುಗೇಶ್ ನಿರಾಣಿ, ಶಶಿಕಲಾ ಜೊಲ್ಲೆ ವಿರುದ್ಧ ಪ್ರಾಸಿಕ್ಯೂಷನ್ ಅನುಮತಿ ನೀಡಲು ಕ್ಯಾಬಿನೆಟ್ ರಾಜ್ಯಪಾಲರಿಗೆ ಸಲಹೆ ನೀಡಿದೆ ಎಂದು ವರದಿ ಆಗಿದೆ. ಗೌಪ್ಯವಾದ ಮಾಹಿತಿ ಸಚಿವ ಸಂಪುಟ ಸಭೆಯಲ್ಲಿ ಹೇಗೆ ಚರ್ಚಿಸಲಾಯಿತು? ಕ್ಯಾಬಿನೆಟ್ ನೋಟ್‌ನಲ್ಲಿ ಯಾವ ದಿನಾಂಕದಂದು ಲೋಕಾಯುಕ್ತ ಸಂಸ್ಥೆ ರಾಜ್ಯಪಾಲರಿಗೆ ಪ್ರಾಸಿಕ್ಯೂಷನ್ ಅನುಮತಿ ಕೇಳಿದೆ ಎಂಬುದನ್ನ ಉಲ್ಲೇಖಿಸಲಾಗಿದೆ. ನನಗೆ ಈಗ ಕುತೂಹಲ ಹೆಚ್ಚಾಗಿದೆ. ಹೇಗೆ ಲೋಕಾಯುಕ್ತ ವಿಶೇಷ ತನಿಖಾ ತಂಡ ರಾಜ್ಯಪಾಲರಿಗೆ ಬರೆದ ಪತ್ರ ಬಹಿರಂಗವಾಯಿತು? ಲೋಕಾಯುಕ್ತ ಎಂಬುದು ಸ್ವಾಯತ್ತ ತನಿಖಾ ಸಂಸ್ಥೆ, ಲೋಕಾಯುಕ್ತ ಎಸ್‌ಐಟಿ ಗೌಪ್ಯವಾಗಿ ಅಭಿಯೋಜನಾ ಮಂಜೂರಾತಿಯನ್ನ ಕೇಳಿದ ಪತ್ರ ಸರ್ಕಾರ ಹಾಗೂ ಕ್ಯಾಬಿನೆಟ್‌ಗೆ ತಲುಪಿದ್ದು ಹೇಗೆ? ಹೀಗಾಗಿ ಈ ಪತ್ರ ತಲುಪಿದ ಕೂಡಲೇ ಪ್ರಾಮಾಣಿಕವಾಗಿ ರಾಜಭವನಕ್ಕೆ ವರದಿ ನೀಡಿ ಎಂದು ರಾಜ್ಯಪಾಲರು ಸೂಚಿಸಿದ್ದಾರೆ.**

# 80% ಹಿಂದೂಗಳಿದ್ರೂ ನೆಮ್ಮದಿಯಾಗಿ ಗಣೇಶೋತ್ಸವ ಆಚರಿಸೋಕಾಗ್ತಿಲ್ಲ

**ಚಿಕ್ಕಮಗಳೂರು:** 80% ಹಿಂದೂಗಳೇ ಇದ್ದರೂ ನೆಮ್ಮದಿಯಿಂದ ಗಣೇಶೋತ್ಸವ ಆಚರಿಸೋಕೆ ಆಗ್ತಿಲ್ಲ. ನಾಗಮಂಗಲ, ದಾವಣಗೆರೆಯಲ್ಲಿ ಕಲ್ಲು ತೂರಾಟ, ಬೆಳಗಾವಿಯಲ್ಲಿ ಚಾಕು ಇರಿತ, ಇಂತಹ ಕೆಟ್ಟ ಪರಿಸ್ಥಿತಿಗೆ ರಾಜ್ಯವನ್ನು ಕಾಂಗ್ರೆಸ್ ಸರ್ಕಾರ ತಂದಿದೆ ಎಂದು ಎಂಎಲ್‌ಸಿ ಸಿ.ಟಿ ರವಿ ಆತಂಕ ವ್ಯಕ್ತಪಡಿಸಿದ್ದಾರೆ.



ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಹಲವಡೆ ಗಣಪತಿ ಮೆರವಣಿಗೆ ವೇಳೆ ನಡೆದ ಗಲಭೆ ವಿಚಾರಕ್ಕೆ ಪ್ರತಿಕ್ರಿಯಿಸಿದ್ದಾರೆ. ಈ ವೇಳೆ ಮತಾಂದರಿಗೆ ಬೆಂಬಲ ಕೊಟ್ಟು ರಾಜಕಾರಣ ಮಾಡುವುದರಿಂದ ಮತಾಂದರು ಕೊಬ್ಬಿದ್ದಾರೆ. ಸಿದ್ದರಾಮಯ್ಯನವರೇ, ನಿಮ್ಮ ಸೆಕ್ಯುಲರ್ ಅಂದ್ರೆ ಇದೇನಾ? ಗಣೇಶೋತ್ಸವದ ಮೇಲೆ ಕಲ್ಲು, ಪೆಟ್ರೋಲ್ ಬಾಂಬ್ ಹಾಕಿಸೋದು ನಿಮ್ಮ ಸೆಕ್ಯುಲರ್ ನೀತಿನಾ? ನಿಮ್ಮ ಸರ್ಕಾರ ಬಂದಾಗ ಏಕೆ ಇವರೆಲ್ಲ ಬಾಲ ಬಿಚ್ಚುತ್ತಾರೆ? ಎಂದು ಪ್ರಶ್ನಿಸಿದ್ದಾರೆ.

ಮತಾಂದರ ಇಂತಹ ಸೊಕ್ಕಿಗೆ ನಿಮ್ಮ ಸರ್ಕಾರವೇ ಕಾರಣ. ಅವರ ಹಡೆಮುರಿ ಕಟ್ಟದಿದ್ರೆ ಕರ್ನಾಟಕ ನಾಡಗೀತೆಗೆ ಆಶಯದಂತೆ ಇರುವುದಿಲ್ಲ ಎಂದು ಅವರು ತಿರುಗೇಟು ಕೊಟ್ಟಿದ್ದಾರೆ.

ಜಮೀರ್ ಅಹ್ಮದ್, ಪ್ಯಾಲೆಸ್ತೀನ್ ಧ್ವಜ ಹಾರಿಸಿದರೆ ತಪ್ಪೇನು ಎಂದು ಕೇಳಿದ್ದಾರೆ. ಜಮೀರ್ ಸಾಹೇಬ್ರೆ, ಇಲ್ಲಿರುವವರಿಗೂ ಪ್ಯಾಲೆಸ್ತೀನ್ ಗೂ ಏನು ಸಂಬಂಧ? ಏಕೆ ಹಾರಿಸಬೇಕು? ನಿಮಗೆ ಭಾರತದ ಧ್ವಜ ಹಾರಿಸಬೇಕಾದ್ರೆ ಕಷ್ಟವಾಗುತ್ತದೆ. ಒಂದೇ ಮಾತರಂ ಹೇಳಲು ಷರಿಯಾ ಅಡ್ಡಿಯಾಗುತ್ತೆ. ಅವರಿಗೆ ಬೆಂಬಲಿಸಿ ಮಾತನಾಡುವುದ ನೋಡಿದಾಗ ನಿಮ್ಮ ಬಗ್ಗೆಯೂ ಅನುಮಾನ ಬರುತ್ತದೆ. ಸರ್ಕಾರ ಹಾಗೂ ನಿಮ್ಮ ನಡವಳಿಕೆ ಜಿನ್ನಾಗಿಂತ ಕಡಿಮೆ ಇಲ್ಲ ಎಂದು ಅವರು ಕಿಡಿಕಾರಿದ್ದಾರೆ. ಗುಪ್ತಚರ ಇಲಾಖೆಗೆ ಮಾಹಿತಿ ಗೊತ್ತಿರುತ್ತದೆ. ಆದರೆ ಮೌಖಿಕ ಆದೇಶ ಇದೆ, ಬಾಂಧವರು ಏನು ಮಾಡಿದರು ಸುಮ್ಮನಿರಬೇಕು ಎಂದು, ಅದಕ್ಕೆ ಬಾಂಧವರ ಮೇಲೆ ಕ್ರಮ ತೆಗೆದುಕೊಂಡರೆ, ಪೊಲೀಸರ ಮೇಲೆ ಕ್ರಮ ಆಗುತ್ತೆ. ಈ ಕಾರಣಕ್ಕೆ ಪೊಲೀಸರು ಅಸಾಹಯಕರಾಗಿದ್ದಾರೆ. ತಾಲಿಬಾನ್ ಸರ್ಕಾರವಿದ್ದರೂ ಇಷ್ಟೊಂದು ಸ್ವೇಚ್ಛಾಚಾರ ಇರುತ್ತಿರಲಿಲ್ಲ ಎಂದು ವಾಗ್ದಾಳಿ ನಡೆಸಿದ್ದಾರೆ.

# ತಪ್ಪುಗಳನ್ನು ಮುಚ್ಚಿಹಾಕಲು ವಿಪಕ್ಷ ನಾಯಕರನ್ನು ಟಾರ್ಗೆಟ್ ಮಾಡಿದ್ದಾರೆ

**ಮಂಡ್ಯ:** ಮುಡಾ ಹಗರಣ, ವಾಲ್ಮೀಕಿ ಹಗರಣ ಆಗಿದೆ. ತಮ್ಮ ತಪ್ಪುಗಳನ್ನ ಮುಚ್ಚಿಕೊಳ್ಳಲು, ವಿಷಯ ಡೈವರ್ಟ್ ಮಾಡಲು ವಿಪಕ್ಷ ನಾಯಕರನ್ನ ಟಾರ್ಗೆಟ್ ಮಾಡಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಕಿಡಿಕಾರಿದ್ದಾರೆ.

ಬಿಜೆಪಿ ಕಚೇರಿಯಲ್ಲಿ ಸತ್ಯಶೋಧನಾ ಸಮಿತಿ ವರದಿ ಸ್ವೀಕಾರ ಹಿನ್ನೆಲೆ ಆಗಮಿಸಿದ್ದ ಬಿವೈ ವಿಜಯೇಂದ್ರ ಮಾತನಾಡಿದರು. ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿಎಂ ಸಿದ್ದರಾಮಯ್ಯ ಅವರಿಗೆ ಅಭದ್ರತೆ ಕಾಡುತ್ತಿದೆ. ಮುಡಾ ಹಗರಣ, ವಾಲ್ಮೀಕಿ ಹಗರಣ ಆಗಿದೆ. ಸರ್ಕಾರದ ಮೇಲೆ ಭ್ರಷ್ಟಾಚಾರ ಆರೋಪಗಳು ಕೇಳಿಬರ್ತಿವೆ. ಭ್ರಷ್ಟಾಚಾರ ಮುಕ್ತ ಆಡಳಿತ ಕೊಡಲು ಈ ಸರ್ಕಾರ ವಿಫಲವಾಗಿದೆ. ರಾಜ್ಯದ ಜನರಿಗೆ ಗೊತ್ತಿದೆ. ಯಾವುದೇ ಅಭಿವೃದ್ಧಿ ಕೆಲಸ ಆಗಿಲ್ಲ. ತಮ್ಮ ತಪ್ಪುಗಳನ್ನ ಮುಚ್ಚಿಕೊಳ್ಳಲು, ವಿಷಯ ಡೈವರ್ಟ್ ಮಾಡಲು ವಿಪಕ್ಷ ನಾಯಕರನ್ನ ಟಾರ್ಗೆಟ್ ಮಾಡಿದ್ದಾರೆ. ಕಾಂಗ್ರೆಸ್ ಸರ್ಕಾರ ಸಮಾಜ ವಿರೋಧಿ ಚಟುವಟಿಕೆಗಳಿಗೆ ಬೆಂಬಲ ಕೊಡ್ತಿದ್ದಾರೆ ಎಂದರು.

**ನಾಗಮಂಗಲ-ದಾವಣಗೆರೆ ಪ್ರಕರಣ:** ಕೆಲವು ತಿಂಗಳಿನಿಂದ ರಾಜ್ಯದಲ್ಲಿ ಒಂದಾದ ಮೇಲೆ ಒಂದು ಘಟನೆ ನಡೆಯುತ್ತಿದೆ. ನಾಗಮಂಗಲ ಕೇಸ್ ಭಯದಿಂದ ಜನರು ಊರು ಬಿಟ್ಟಿದ್ದಾರೆ. ನಿರಪರಾಧಿಗಳ ಮೇಲೆ ಕೇಸ್ ಹಾಕಲಾಗಿದೆ. ಕೃತ್ಯ ಮಾಡಿರೋರ



ಮೇಲೆ ಕೇಸ್ ಹಾಕಿಲ್ಲ. ಇದರಲ್ಲಿ ಪೊಲೀಸರ ವೈಫಲ್ಯ ಇದೆ. ಸರ್ಕಾರದ ವೈಫಲ್ಯವೂ ಇದೆ. ಇಂತಹ ಕೇಸ್ ಬಂದಾಗ ದರ್ಶನ್ ಪ್ರಕರಣ ತಂದು ಬಿಡುತ್ತಿದ್ದರು. ಈಗ ಮುನಿರತ್ನ ಹಿಡಿದುಕೊಂಡು ಕೂತಿದ್ದಾರೆ. ಸಿಎಂ ಪರಿಹಾರ ಕೊಡೋದಾಗಿ ಹೇಳಿದ್ದಾರೆ. ಈ ಬಗ್ಗೆಯೂ ವರದಿಯಲ್ಲಿ ಉಲ್ಲೇಖ ಮಾಡಿದ್ದೇವೆ ಎಂದು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ನಾಗಮಂಗಲದಲ್ಲಿ ಇತ್ತೀಚೆಗೆ ಕೋಮುಗಲಭೆ ನಡೆದಿತ್ತು. ಹಿಂದೂ ಯುವಕರು ಗಣೇಶ ವಿಸರ್ಜನೆ ಮಾಡುವ ಸಮಯದಲ್ಲಿ ಏಕಾಏಕಿ ಮೆರವಣಿಗೆ ಮೇಲೆ ಒಂದು ಕೋಮಿನ ಜನರು ದಾಳಿ ಮಾಡಿದ್ದರು. ಅವರೆಲ್ಲ ದೇಶದ್ರೋಹಿಗಳು. ಕತ್ತಿ, ತಲವಾರ್, ಪೆಟ್ರೋಲ್ ಬಾಂಬ್ ಎಸೆದಿದ್ದರು. ಹಿಂದೂಗಳ ಅಂಗಡಿಗಳಿಗೆ ಬೆಂಕಿ ಹಚ್ಚಿದ್ದರು. ಇವೆಲ್ಲ ಪೊಲೀಸರ ಕಣ್ಣ ಮುಂದೆಯೇ ನಡೆದಿದೆ. ಘಟನೆಯಾದ ಮರು ದಿನ ನಾನು, ವಿಪಕ್ಷ ನಾಯಕರು ಭೇಟಿ ನೀಡಿದ್ದೇವೆ. ನಾವು ಎಲ್ಲರನ್ನು ಮಾತಾಡಿಸಿದ್ದೆವು. ಬಳಿಕ ಸತ್ಯಶೋಧನಾ ಸಮಿತಿಯನ್ನು ಅಶ್ವಥ್ ನಾರಾಯಣ ನೇತೃತ್ವದಲ್ಲಿ ಸಮಿತಿ ರಚನೆ ಮಾಡಿದ್ದೇವೆ. ಸಮಿತಿ ಭೇಟಿ ಮಾಡಿ ಸತ್ಯಾಸತ್ಯತೆ ಬಗ್ಗೆ ವರದಿ ಕೊಟ್ಟಿದ್ದಾರೆ. ಇದು ವ್ಯವಸ್ಥಿತವಾದ ಪಿತೂರಿ. ಹೇಗೆ ಘಟನೆ ಆಯ್ತು ಅಂತಾ ವರದಿ ಕೊಟ್ಟಿದ್ದಾರೆ ಎಂದು ತಿಳಿಸಿದರು.

ನಾಗಮಂಗಲ, ದಾವಣಗೆರೆ ಘಟನೆ ಸರಿಯಾಗಿ ತನಿಖೆ ಆಗಬೇಕು. ಅಲ್ಪಸಂಖ್ಯಾತ ತುಷ್ಟೀಕರಣ ಬಿಡಿ. ಅಲ್ಪಸಂಖ್ಯಾತ ಒಲೈಕೆ ರಾಜಕೀಯ ಬಿಡಿ. ಎರಡು ಘಟನೆಗಳನ್ನು ಎನ್ ಐಎಯಿಂದ ತನಿಖೆ ಮಾಡಿಸಿ. ಪೊಲೀಸರು ಮುಗ್ಧ ಹಿಂದೂಗಳನ್ನು ಟಾರ್ಗೆಟ್ ಮಾಡಿ, ಕೇಸ್ ಹಾಕ್ತಿದ್ದಾರೆ. ಹೀಗಾಗಿ ಕೂಡಲೇ ಸರ್ಕಾರ ನಾಗಮಂಗಲ, ದಾವಣಗೆರೆ ಕೇಸ್ ಎನ್‌ಐಎ ತನಿಖೆಗೆ ವಹಿಸಬೇಕು. ಇಂತಹ ಸರ್ಕಾರದ ವಿರುದ್ಧ ನಾವು ಸುಮ್ಮನೆ ಕುಳಿತರೆ ದೇವರು ನಮ್ಮನ್ನ ಮೆಚ್ಚುವುದಿಲ್ಲ. ಮುಂದೆ ಏನು ಮಾಡಬೇಕು ಎಂದು ಹಿರಿಯರು ಕೂತು ಮುಂದಿನ ತೀರ್ಮಾನ ಮಾಡುತ್ತೇವೆ ಎಂದು ಸಿಎಂಗೆ ವಿಜಯೇಂದ್ರ ಆಗ್ರಹಿಸಿದರು.

ತಿರುಪತಿ ಲಡ್ಡಿನಲ್ಲಿ ಪ್ರಾಣಿಗಳ ಕೊಬ್ಬು ಬಳಕೆ ಪ್ರಕರಣ: ಫೊರೆನ್ಸಿಕ್ ರಿಪೋರ್ಟ್, ಮಾಧ್ಯಮಗಳ ವರದಿ ನೋಡಿದ್ರೆ ಇದು ಹಿಂದೂಗಳ ಭಾವನೆಗಳಿಗೆ ಧಕ್ಕೆ ತಂದಿರುವ ವಿಷಯವಾಗಿದೆ. ಅಂಧ್ರ ರಾಜ್ಯ ಸರ್ಕಾರ ಈ ಬಗ್ಗೆ ಸೂಕ್ತ ತನಿಖೆ ಮಾಡಿ ಕ್ರಮ ತೆಗೆದುಕೊಳ್ಳಬೇಕು. ಸತ್ಯ ಹೊರಗೆ ಬರಬೇಕು ಎಂದು ಹೇಳಿದ್ದಾರೆ.

### ಏಕೆ ರಾಜೀನಾಮೆ ಕೊಡ್ಬೇಕು?

**ಮಂಡ್ಯ:** ತನಿಖೆ ಮಾಡಲಿ ಮುಡಾ ಹಗರಣಕ್ಕೂ ನನಗೂ ಸಂಬಂಧವೇ ಇಲ್ಲ. ನಾನು ಯಾಕೆ ರಾಜೀನಾಮೆ ಕೊಡಬೇಕು ಎಂದು ಕಾಂಗ್ರೆಸ್ ನಾಯಕರ ವಿರುದ್ಧ ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ ಕಿಡಿಕಾರಿದ್ದಾರೆ. ಜಿಲ್ಲೆಯ ಉರಮಾರಕಸಲಗೆರೆ ಗ್ರಾಮದಲ್ಲಿ ಮಾತನಾಡಿದ ಅವರು, ಡಿನೋಟಿಫಿಕೇಷನ್ ವಿಚಾರವಾಗಿ ಕಾಂಗ್ರೆಸ್ ಸಚಿವರು ರಾಜೀನಾಮೆಗೆ ಒತ್ತಾಯ ಮಾಡುತ್ತಿದ್ದಾರೆ. ನನಗೂ ಮುಡಾ ಹಗರಣಕ್ಕೂ ಏನು ಸಂಬಂಧ? ಕನ್ನಡ ಓದೋಕೊ ಬರುತ್ತೋ, ಇಂಗ್ಲಿಷ್ ಓದೋಕೊ ಬರುತ್ತೋ ಕೇಳಿ. ಮೊದಲು ಆ ಪೇಪರ್‌ನಲ್ಲಿ ಏನಿದೆ ಎಂದು ಸರಿಯಾಗಿ ಕುಳಿತು ನೋಡಲು ಹೇಳಿ ಎಂದರು. ಆ ಪೇಪರ್ ನಲ್ಲಿ ಏನಿದೆ? ಅವರೇನೂ ಹುಚ್ಚರಾ ರಾಜೀನಾಮೆ ಕೇಳವುದಕ್ಕೆ. ಅವರು ಕೇಳಿದರೂ ಅಂತಾ ನಾನು ರಾಜೀನಾಮೆ ಕೊಡಬೇಕು? ಯಾಕೆ ರಾಜೀನಾಮೆ ಕೊಡಬೇಕು? ಏನು ತಪ್ಪು ಮಾಡಿದ್ದೇನೆ? ದಾಖಲೆಗಳನ್ನು ಅವರು ಸರಿಯಾಗಿ ನೋಡಿದ್ದರಾ? ಯಾವನೋ ಬರೆದುಕೊಟ್ಟಿದ್ದಾನೆ ಅದನ್ನು ಬಂದು ತುತ್ತೂರಿ ಊದಿದ್ದಾರೆ. ತನಿಖೆ ಮಾಡಲಿ ಮುಡಾ ಹಗರಣಕ್ಕೂ ನನಗೂ ಸಂಬಂಧವೇ ಇಲ್ಲ. 2015ರಿಂದ ಬಿಟ್ಟುಕೊಂಡು ಇದ್ದಾರೆ. ನಾಲ್ಕು ವರ್ಷ ಏನು ಮಾಡುತ್ತಿದ್ದರು? ಅದರಲ್ಲಿ ನನ್ನ ಪಾತ್ರ ಏನಿದೆ ಹೇಳಲಿ. ಉತ್ತರ ಕೊಡುವ ವಿಚಾರವಿಲ್ಲ ಎಂದು ವಾಗ್ದಾಳಿ ನಡೆಸಿದ್ದಾರೆ.

## ಗಂಗಾರತಿ ಮಾದರಿಯಲ್ಲಿ ಕಾವೇರಿ ಆರತಿ

ಇದಕ್ಕಾಗಿ ನಿಯೋಗ ಹರಿದ್ವಾರ ಹಾಗೂ ವಾರಣಾಸಿಯಲ್ಲಿ ಅಧ್ಯಯನ ನಡೆಸಿ ವರದಿ ತಯಾರಿಸಲಿದ್ದು, ಇದರ ಭಾಗವಾಗಿ ಮೊದಲು ಹರಿದ್ವಾರಕ್ಕೆ ಭೇಟಿ ನೀಡಿತು. ಹರ ಗಂಗಾರತಿ ಮಾದರಿಯಲ್ಲಿ ಕಾವೇರಿ ಆರತ್ ಕೀ ಪೌಡಿ ಘಾಟ್‌ನಲ್ಲಿ ನಡೆಯುವ ಆರತಿ ಕಾರ್ಯಕ್ರಮದಲ್ಲಿ ನಿಯೋಗ ಭಾಗಿಯಾಯಿತು. ಸಚಿವ ಚಲುವರಾಯಸ್ವಾಮಿ ಆದಿಯಾಗಿ ಎಲ್ಲ ಸದಸ್ಯರು ವಿಶೇಷ ಆರತಿ ಮಾಡಿ, ಧಾರ್ಮಿಕ ವಿಧಿ ವಿಧಾನಗಳನ್ನು ಪೂರೈಸಿದರು. ಬಳಿಕ ಆರತಿ ನಡೆಯುವ ರೀತಿ ರಿವಾಜುಗಳನ್ನು ಪರಿಶೀಲಿಸಿದರು.

ಬಳಿಕ ಆರತಿ ಮೇಲುಸ್ತುವಾರಿ ನೋಡಿಕೊಳ್ಳುವ ಹಿಂದೂ ಸಭಾ ಆಡಳಿತ ಸಮಿತಿ ಜೊತೆಗೆ ಮಾತುಕತೆ ನಡೆಸಿದ ನಿಯೋಗ ಕರ್ನಾಟಕ ಸರ್ಕಾರದ ಪ್ರಸ್ತಾವನೆ ಬಗ್ಗೆ ತಿಳಿಸಿದರು. ಇದಕ್ಕೆ ಖುಷಿ ವ್ಯಕ್ತಪಡಿಸಿದ ಆಡಳಿತ ಸಮಿತಿ ಕಾರ್ಯದರ್ಶಿ ತನ್ಮಯ ವಶಿಷ್ಠ, ಗಂಗಾರತಿ ರೀತಿಯಲ್ಲಿ ಕಾವೇರಿ ಆರತಿ ಮಾಡುವುದು ಖುಷಿಯ ಸಂಗತಿ ಎಂದರು.

ಗಂಗಾರತಿ ಬಳಿಕ ಮಾತನಾಡಿದ ಸಚಿವ ಚಲುವರಾಯಸ್ವಾಮಿ, ಗಂಗಾನದಿಯಂತೆ ಕಾವೇರಿ ನದಿ ಕೂಡಾ ಜೀವ ನದಿಯಾಗಿದೆ. ಅದಕ್ಕಾಗಿ ಇಲ್ಲಿಯೂ ಆರತಿ ಮಾಡಲು ನಿರ್ಧರಿಸಿದ್ದು, ಡಿಸಿಎಂ ಡಿ.ಕೆ ಶಿವಕುಮಾರ್ ನಿರ್ದೇಶನದ ಮೇರೆಗೆ ಈ ಬಗ್ಗೆ ನಮ್ಮ ಅಧಿಕಾರಿಗಳು ಜನಪ್ರತಿನಿಧಿಗಳೊಂದಿಗೆ ಅಧ್ಯಯನಕ್ಕೆ ಬಂದಿದ್ದೇವೆ. ಸಾಧ್ಯವಾದಷ್ಟು ಬೇಗ ಆರತಿ ಶುರು ಮಾಡಬೇಕು ಅಂದುಕೊಂಡಿದ್ದು, ದಸರಾದೊಳಗೆ ನಾವು ಶುರು ಮಾಡುವ ಪ್ರಯತ್ನ ಮಾಡಲಾಗುತ್ತಿದೆ. ಒಮ್ಮೆ ಆರತಿಯನ್ನು ಶುರು ಮಾಡಿದರೆ ನಿಲ್ಲಿಸುವ ಮಾತಿಲ್ಲ ಎಂದಿದ್ದಾರೆ.

ಇನ್ನು ಸಮಿತಿಯೂ ಶನಿವಾರ ವಾರಣಾಸಿಗೆ ತೆರಳಲಿದ್ದು, ಅಲ್ಲೂ ಗಂಗಾರತಿಯನ್ನು ನೋಡಿಕೊಂಡು ಬೆಂಗಳೂರಿಗೆ ವಾಪಸ್ ಬರಲಿದ್ದಾರೆ. ಬಳಿಕ ಈ ಬಗ್ಗೆ ವಿಸ್ತೃತ ವರದಿಯನ್ನು ಸರ್ಕಾರಕ್ಕೆ ನೀಡಲಿದೆ.

## ಸಚಿವರ ಆಪ್ತ ಸಹಾಯಕ ಕಿಡ್ನ್ಯಾಪ್

ಇದಕ್ಕೂ ಮುನ್ನ ಗುರುವಾರ ರಾತ್ರಿ ಬಿಷ್ಣುಪುರ ಜಿಲ್ಲೆಯ ಮಾಜಿ ಮುಖ್ಯ ಕಾರ್ಯದರ್ಶಿ ಓಯಿನಮ್ ನಬಕಿಶೋರ್ ಅವರ ನಿವಾಸದ ಮೇಲೂ ಶಸ್ತ್ರಸಜ್ಜಿತ ದಾಳಿಕೋರರು ಕನಿಷ್ಠ 5 ಸುತ್ತು ಗುಂಡು ಹಾರಿಸಿದ್ದ ಘಟನೆ ನಡೆದಿತ್ತು. ಅದೃಷ್ಟವಶಾತ್ ಯಾರಿಗೂ ಪ್ರಾಣಾಪಾಯ ಸಂಭವಿಸಿರಲಿಲ್ಲ. ಇದಾದ ಮರುದಿನವೇ ಸಚಿವರ ಆಪ್ತರನ್ನು ಕಿಡ್ನ್ಯಾಪ್ ಮಾಡಿರುವ ಘಟನೆ ನಡೆದಿದೆ.

ಘಟನಾ ಸ್ಥಳದಿಂದ ಖಾಲಿ ಕಾಟ್ರಿಡ್ಜ್‌ಗಳನ್ನ ಪೊಲೀಸರು ವಶಪಡಿಸಿಕೊಂಡಿದ್ದಾರೆ, ಬಿಷ್ಣುಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಮೊದಲನೇ ಪುಟದಿಂದ...

ಎನ್‌ಐಎ ಹೆಗಲಿಗೆ ಕೇಸ್:

ಇನ್ನೂ ಇಲ್ಲಿನ ಥಾಡೌ ಬುಡಕಟ್ಟು ಜನಾಂಗದ ಪ್ರಮುಖ ನಾಯಕ ಹಾಗೂ ಬಿಜೆಪಿ ವಕ್ತಾರನ ಪೂರ್ವಿಕರ ಮನೆ ಮೇಲಿನ ದಾಳಿ ಪ್ರಕರಣವನ್ನು ರಾಷ್ಟ್ರೀಯ ತನಿಖಾ ಸಂಸ್ಥೆಗೆ ಹಸ್ತಾಂತರಿಸುವಂತೆ ಮಣಿಪುರ ಸರ್ಕಾರ ಪೊಲೀಸರಿಗೆ ಸೂಚಿಸಿದೆ.

ಚುರಾಚಂದ್‌ಪುರ ಜಿಲ್ಲೆಯ ಟಿ ಮೈಕೆಲ್ ಲಮ್ ಜತಾಂಗ್ ಹಾಕಿಪ್ ಅವರ ಪೋಷಕರು ಹಾಗೂ ಇತರರು ವಾಸಿಸುವ ಅವರ ಮನೆಯ ಮೇಲೆ ನಡೆದ ದಾಳಿಯ ಕುರಿತು ದಾಖಲಿಸಲಾದ ಪ್ರಕರಣವನ್ನು ಆದಷ್ಟು ಬೇಗ ಎನ್‌ಐಎಗೆ ರವಾನಿಸಬೇಕು ಎಂದು ರಾಜ್ಯ ಸರ್ಕಾರ ಪೊಲೀಸ್ ಮುಖ್ಯಸ್ಥರಿಗೆ ಪತ್ರ ಬರೆದಿದೆ. ವಿಷಯದ ಗಂಭೀರ ಸ್ವರೂಪವನ್ನು ಗಮನದಲ್ಲಿಟ್ಟುಕೊಂಡು ತನಿಖೆಯನ್ನು ಎನ್‌ಐಎ ಹೆಗಲಿಗೆ ವಹಿಸುವಂತೆ ಪತ್ರದಲ್ಲಿ ತಿಳಿಸಿದೆ.

2023ರ ಮೇ ತಿಂಗಳಲ್ಲಿ ಮೈತೆ-ಕುಕಿ ಜನಾಂಗೀಯ ಹಿಂಸಾಚಾರ ಪ್ರಾರಂಭವಾದಾಗಿನಿಂದ ಅವರ ಮನೆ ಮೇಲೆ ನಡೆದಿರುವ 3ನೇ ದಾಳಿ ಇದಾಗಿದೆ. ಕಳೆದ ಆಗಸ್ಟ್ 31ರಂದು ಕುಕಿ ಸಮುದಾಯದ ಪ್ರಾಬಲ್ಯವಿರುವ ಚುರಾಚಂದ್‌ಪುರದಲ್ಲಿರುವ ಹಾಕಿಪ್ ಅವರ ಮನೆಯನ್ನು ಧ್ವಂಸಗೊಳಿಸಿ, ಬೆಂಕಿ ಹಚ್ಚಲಾಗಿತ್ತು. ಇದಕ್ಕೂ ಮುನ್ನ ಆಗಸ್ಟ್ 25ರಂದು ಸಹ ಶಸ್ತ್ರ ಸಜ್ಜಿತ ಗುಂಪೊಂದು ಹಾಕಿಪ್ ಅವರ ನಿವಾಸದ ಮೇಲೆ ಗುಂಡಿನ ದಾಳಿ ನಡೆಸಿತ್ತು.

## ಪೊಲೀಸರ ಫೈರಿಂಗ್

ಗ್ರಾ.ಪಂ ಮಾಜಿ ಸದಸ್ಯ ವಿಶ್ವನಾಥ ಜಮಾದಾರ್ ಕೊಲೆ: ವಿಶ್ವನಾಥ್ ಜಮಾದಾರ್ ಕಳೆದ ಶುಕ್ರವಾರ ಬೆಳಿಗ್ಗೆ ಮಗನನ್ನು ಶಾಲೆಗೆ ಬಿಟ್ಟು ಬರುತ್ತೇನೆ ಅಂತ ಬೈಕ್ ಮೇಲೆ ಹೋಗಿದ್ದರು. ಮಗನನ್ನು ಶಾಲೆಗೆ ಬಿಟ್ಟು ಜಿಡಗಾ ಕ್ರಾಸ್ ಬಳಿ ಬೈಕ್ ಮೇಲೆ ಬರುತ್ತಿದ್ದರು. ಈ ವೇಳೆ ಬೈಕ್‌ನಲ್ಲಿ ಬಂದ ಇಬ್ಬರು ಅಪರಿಚಿತ ದುಷ್ಕರ್ಮಿಗಳು ವಿಶ್ವನಾಥ್ ಅವರ ಮೇಲೆ ಏಕಾಏಕಿ ಗುಂಡಿನ ದಾಳಿ ಮಾಡಿದ್ದರು.

ವಿಶ್ವನಾಥ್ ಅವರ ತಲೆಗೆ ಮೂರು ಗುಂಡು ಹೊಡೆದಿದ್ದರು. ಪರಿಣಾಮ ತೀವ್ರ ರಕ್ತಸ್ರಾವವಾಗಿ ವಿಶ್ವನಾಥ್ ಸ್ಥಳದಲ್ಲೇ ಮೃತಪಟ್ಟಿದ್ದರು. ನಿರ್ಜನ ಪ್ರದೇಶದಲ್ಲಿ ವಿಶ್ವನಾಥ್ ಅವರನ್ನು ಕೊಂದು ದುಷ್ಕರ್ಮಿಗಳು ಸ್ಥಳದಿಂದ ಪರಾರಿಯಾಗಿದ್ದರು. ವಿಶ್ವಾನಾಥ್ ಮೃತದೇಹ ಕಂಡ ದಾರಿಹೋಕರು ಪೊಲೀಸರಿಗೆ ವಿಚಾರ ತಿಳಿಸಿದ್ದರು. ಕೂಡಲೇ ಆಳಂದ ಪೊಲೀಸರು ಸ್ಥಳಕ್ಕೆ ಬಂದು, ಮಾಹಿತಿ ಕಲೆ ಹಾಕಿದರು. ಆಳಂದ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಿದ್ದು, ಕೊಲೆ ಪ್ರಕರಣದ ಪ್ರಮುಖ ಆರೋಪಿ ಲಕ್ಷ್ಮಣನನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

## ಕರ್ನಾಟಕದ ಎಲ್ಲ ಮುಜರಾಯಿ ದೇಗುಲಗಳಲ್ಲಿ ಪ್ರಸಾದ

## ಪರೀಕ್ಷೆ

ಪ್ರಸ್ತುತ ತಿರುಪತಿ ದೇವಸ್ಥಾನಕ್ಕೆ ಲಡ್ಡು ಪ್ರಸಾದ ತಯಾರಿಲು ನಂದಿನಿ ತುಪ್ಪವನ್ನು ಕರ್ನಾಟಕ ಪೂರೈಸುತ್ತಿದೆ. ಕಳೆದ ವರ್ಷ, ತಿರುಪತಿ ತಿರುಮಲ ದೇವಸ್ಥಾನವು ಕೆಎಂಎಫ್‌ನ ನಂದಿನಿ ತುಪ್ಪ ಮತ್ತು ಇತರ ಉತ್ಪನ್ನಗಳ ಖರೀದಿಯನ್ನು ಬೆಲೆಯ ಕಾರಣವೊಡ್ಡಿ ನಿಲ್ಲಿಸಿತ್ತು. ಕೆಎಂಎಫ್ ಉಲ್ಲೇಖಿಸಿದ ಬೆಲೆಗಳನ್ನು ಟಿಟಿಡಿ ಅನುಮೋದಿಸದೆ ಇತರ ಕಂಪನಿಗಳಿಂದ ತುಪ್ಪವನ್ನು ಖರೀದಿಸಲು ಪ್ರಾರಂಭಿಸಿತ್ತು ಎಂದು ಕೆಎಂಎಫ್ ಅಧ್ಯಕ್ಷ ಭೀಮಾ ನಾಯಕ್ ತಿಳಿಸಿದ್ದರು. ಇದೀಗ ಮತ್ತೆ ನಂದಿನಿ ತುಪ್ಪ ಮತ್ತಿತರ ಉತ್ಪನ್ನಗಳನ್ನು ಖರೀದಿಸುತ್ತಿದೆ.

## ರಾಹುಲ್ ಗಾಂಧಿ ವಿರುದ್ಧ 3 ಎಫ್‌ಐಆರ್

ಭಾರತದಲ್ಲಿ ಸಿಖ್ಖರಿಗೆ ಪಗಡಿ ಅಥವಾ ಕಡಾ ಧರಿಸಲು ಹಾಗೂ ಗುರುದ್ವಾರಕ್ಕೆ ಹೋಗಲು ಅನುಮತಿ ನೀಡುತ್ತಾರೆಯೇ? ಎಂದು ರಾಹುಲ್ ಗಾಂಧಿ ಅಮೆರಿಕದಲ್ಲಿ ಹೇಳಿಕೆ ನೀಡಿರುವುದಾಗಿ ವಿವರಿಸಿದ್ದಾರೆ. ಭಾರತ ಸೇರಿದಂತೆ ಇಡೀ ಪ್ರಪಂಚದಲ್ಲೇ ಸಿಖ್ ಸಮುದಾಯದವರು ಪಗಡಿ ಮತ್ತು ಕಡಾ ಧರಿಸಿ ಗುರುದ್ವಾರ ಪ್ರವೇಶಿಸುತ್ತಾರೆ. ಪ್ರಧಾನಿ ಕೂಡ ಪಗಡಿ ಮತ್ತು ಕಡಾ ಧರಿಸಿಯೇ ಗುರುದ್ವಾರಕ್ಕೆ ಭೇಟಿ ನೀಡುತ್ತಾರೆ ಎಂದು ಛಾಬ್ರಾ ಹೇಳಿದ್ದಾರೆ.

ರಾಹುಲ್ ಹೇಳಿಕೆಯು ಶಾಂತಿಪ್ರಿಯ ಸಿಖ್ ಸಮುದಾಯದ ಭಾವನೆಗಳಿಗೆ ನೋವುಂಟು ಮಾಡಿದೆ. ಇದು ಸಮಾಜದ ಇತರ ಧರ್ಮಗಳೊಂದಿಗೆ ತಾರತಮ್ಯ ಮತ್ತು ದ್ವೇಷವನ್ನು ಉಂಟು ಮಾಡುತ್ತದೆ ಎಂದು ಆರೋಪಿಸಿದ್ದಾರೆ.

## ಇಡೀ ವಿಶ್ವದಲ್ಲಿ ಜನರ ಖಾತೆಗೆ ಹಣ ಹಾಕುತ್ತಿರುವ ಏಕೈಕ ಸರ್ಕಾರ ನಮ್ಮದು

ಇಂತಹ ಯೋಜನೆಗಳನ್ನ ಸಹಿಸಕೊಳ್ಳಲು ಆಗದೇ ವಿನಾಕಾರಣ ಆರೋಪಗಳನ್ನ ಮಾಡುತ್ತಿದ್ದಾರೆ ಎಂದು ಕಿಡಿಕಾರಿದ್ದಾರೆ.

ಸರ್ಕಾರದ ಮೇಲೆ ಮಾತನಾಡಲು ಯಾರಿಗೂ ಯಾವ ವಿಚಾರಗಳು ಸಿಗುತ್ತಿಲ್ಲ, ನಮ್ಮ ತಂದೆಯ ಮೇಲೆ ಮಾಡುತ್ತಿರುವ ಎಲ್ಲಾ ಆರೋಪಗಳು ಬೋಗಸ್. ಎಲ್ಲವುದಕ್ಕೂ ಸುಖಾಸುಮ್ಮನೆ ಆರೋಪಮಾಡುತ್ತಾ ಹೋದರೆ ಹೇಗೆ? ನಮ್ಮ ತಂದೆಯ ರಾಜೀನಾಮೆಯನ್ನ ಸುಖಾ ಸುಮ್ಮನೆ ಕೇಳುತ್ತಿದ್ದಾರೆ. ಅವರು ಯಾಕೆ ರಾಜೀನಾಮೆ ಕೊಡಬೇಕು? ಹೀಗೆ ಸಿಕ್ಕ ಸಿಕ್ಕ ಆರೋಪಗಳಿಗೆಲ್ಲಾ ರಾಜೀನಾಮೆ ಕೊಡುತ್ತಾ ಹೋದರೆ ಅದರಲ್ಲಿ ಅರ್ಥ ಇರುತ್ತಾ? ಎಂದು ಪ್ರಶ್ನೆ ಮಾಡಿದ್ದಾರೆ.

ಇದೇ ವೇಳೆ ಮುನಿರತ್ನ ಪ್ರಕರಣದ ಬಗ್ಗೆ ಮಾತನಾಡಿ, ನನಗೆ ಆ ಪ್ರಕರಣದ ಕುರಿತು ಅಷ್ಟಾಗಿ ಗೊತ್ತಿಲ್ಲ ಎಂದಿದ್ದಾರೆ.

# ಬೆಂಗಳೂರಿನಲ್ಲಿ 21 ಲಕ್ಷ ಖಾತೆಗಳ ಡಿಜಿಟಲೀಕರಣ ಮಾಡಿದ ಬಿಬಿಎಂಪಿ

**ಬೆಂಗಳೂರು:** ಆಸ್ತಿ ಮಾಲೀಕರಿಗೆ, ಖಾತಾದಾರರಿಗೆ ಬಿಬಿಎಂಪಿ ಗುಡ್‌ನ್ಯೂಸ್ ಕೊಟ್ಟಿದೆ. 21 ಲಕ್ಷ ಖಾತೆಗಳನ್ನ ಡಿಜಿಟಲೀಕರಣ ಮಾಡಿ, ಫೇಸ್‌ಲೆಸ್ ಮಾಡಿದೆ. ಪಾಲಿಕೆ ಶೀಘ್ರದಲ್ಲೇ ರೂಲ್ ಔಟ್ ಬಿಡುಗಡೆ ಆಗಲಿದ್ದು, ಖಾತೆಗಳಿಗೆ ಜಿಪಿಎಸ್ ಆಡ್ ಮಾಡಲಿದೆ.





ಜನ ಖಾತೆ ಮಾಡಿಸಬೇಕು, ಖಾತೆ ಪಡೆಯುಬೇಕು, ಖಾತೆ ಬಗ್ಗೆ ಮಾಹಿತಿ ಬೇಕು ಎಂದರೆ ಕಂದಾಯ ಕಚೇರಿಗಳಿಗೆ ಹೋಗಿ ಮಾಹಿತಿ ಪಡೆಯಬೇಕಿತ್ತು. ಈಗ ಬಿಬಿಎಂಪಿ ಮತ್ತಷ್ಟು ಸುಲಭ ಮಾಡಿದೆ. ಒಂದೆರಡು ಗ್ರಾಮ ಪಂಚಾಯಿತಿ ವ್ಯಾಪ್ತಿಯ 2,500 ಆಸ್ತಿಗಳನ್ನು ಇ-ಖಾತಾ ಮಾಡಿದ್ದ ಬಿಬಿಎಂಪಿ 21 ಲಕ್ಷ ಆಸ್ತಿ ಖಾತೆಗಳನ್ನು ಈಗ ಡಿಜಿಟಲೀಕರಣ ಮಾಡಿದೆ. ಇದೀಗ ಫೇಸ್ ಲೆಸ್ ಸಂಪರ್ಕ ರಹಿತ ಆನ್‌ಲೈನ್ ಡಿಜಿಟಲ್ ವ್ಯವಸ್ಥೆ ಜಾರಿಗೊಳಿಸಲು ಮುಂದಾಗಿದೆ. ಇನ್ನೇನು ಕೆಲವೇ ದಿನಗಳಲ್ಲಿ ಜಿಪಿಎಸ್ ಆಧಾರಿತ ಮಾಹಿತಿಯನ್ನು ಪಡೆದು ಅದನ್ನು ಡಿಜಿಟಲೀಕರಣಗೊಳಿಸಲಿದೆ.

ಬಿಬಿಎಂಪಿ ರಿಜಿಸ್ಟರ್‌ಗಳಲ್ಲಿನ 21 ಲಕ್ಷ ಖಾತೆಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ. ರೋಲ್-ಔಟ್ ಶೀಘ್ರದಲ್ಲೇ ಬಿಡುಗಡೆ ಮಾಡಲಿದೆ. ಆಗ ಜನ ತಮ್ಮ ಖಾತಾ ಡಿಜಿಟಲೀಕರಣ ಆಗಿರೋದನ್ನ ಸರಿಪಡಿಸಿಕೊಳ್ಳಬಹುದಾಗಿದೆ. ಮುಂದಿನ ದಿನಗಳಲ್ಲಿ ಬಿಬಿಎಂಪಿಯ ಸಿಬ್ಬಂದಿ ನಿಮ್ಮ ಮನೆಗಳಿಗೆ ಭೇಟಿ ನೀಡಿ ನಿಮ್ಮ ಆಸ್ತಿಯ ಜಿಪಿಎಸ್ ಮಾಹಿತಿಯನ್ನು ಸೆರೆಹಿಡಿಯುತ್ತಾರೆ. ಪಾಲಿಕೆಯ ಇ-ಖಾತಾ ಪಡೆಯಲು ಪ್ರತಿ ಆಸ್ತಿಯ ಜಿಪಿಎಸ್ ಕಡ್ಡಾಯವಾಗಿದೆ. ಸದರಿ ಪ್ರಾಪರ್ಟಿ ಜಿಪಿಎಸ್ ನಿಮ್ಮ ಆಸ್ತಿಯ ವಿಶಿಷ್ಟ ಗುರುತು ಆಗಿರುತ್ತದೆ. ಎಲ್ಲಾ ಬಿಬಿಎಂಪಿಯ ಇ-ಖಾತಾ ಸೇವೆಗಳ ಫೇಸ್‌ಲೆಸ್, ಸಂಪರ್ಕ ರಹಿತ ಮತ್ತು ಆನ್‌ಲೈನ್ ವಿತರಣೆಗೆ ಇದು ಬಹಳ ಮುಖ್ಯವಾಗಿರುತ್ತದೆ.

### ಜಿಪಿಎಸ್‌ನಿಂದ ಅನುಕೂಲಗಳೇನು?

**● ಸ್ವತ್ತುಗಳಿಗೆ ಹಾನಿಯಾಗದಂತೆ ಸುರಕ್ಷಿತವಾಗಿಡಲು ಜಿಪಿಎಸ್ ಅಳವಡಿಕೆ ● ಜಿಪಿಎಸ್‌ನ್ನು ಸ್ಥಳಕ್ಕೆ ಅನುಗುಣವಾಗಿ ನಿಯೋಜಿಸುವುದು ಇದರ ಉದ್ದೇಶ ● ಒಂದು ಬಾರಿ ಜಿಪಿಎಸ್ ಮಾಡಿಸಿದ್ರೆ, ಬೇರೆ ಯಾರೂ ಭೂಮಿ ಪಡೆಯಲು ಸಾಧ್ಯವಿಲ್ಲ ● ಬಿಬಿಎಂಪಿ ಬಳಿ ಸ್ವತ್ತುಗಳ ಪಟ್ಟಿಯಿದ್ದು ಸದರಿ ಸ್ವತ್ತುಗಳ ಸ್ಥಳ, ನಕ್ಷೆ ಇರುವುದಿಲ್ಲ ● ಆಸ್ತಿಯ ಜಿಪಿಎಸ್ ಸಂಗ್ರಹಣೆಯಿಂದ ಇತರೆ ದಾಖಲೆ ಬಳಸಿ ಪರಭಾರೆ ಮಾಡುವುದರಿಂದ ರಕ್ಷಣೆ ● ಬಹುಮಹಡಿ ಫ್ಲಾಟ್‌ಗಳು ಒಂದೇ ರೀತಿಯ ಜಿಪಿಎಸ್ ಹೊಂದಿರುತ್ತದೆ ● ಫ್ಲಾಟ್ ಸಂಖ್ಯೆ, ಇತರ ವಿವರಗಳನ್ನ ಪಾಲಿಕೆ ದಾಖಲಿಸೋದ್ರಿಂದ ಆಸ್ತಿಯನ್ನ ಗುರುತಿಸಬಹುದು ● ಇದು ಸುರಕ್ಷಿತ ಮತ್ತು ಸಂರಕ್ಷಿತ ಆಸ್ತಿ, ಭೂ ದಾಖಲೆಗಳ ಮೂಲಭೂತ ಬಿಲ್ಡಿಂಗ್ ಬ್ಲಾಕ್ ಆಗಿದೆ ಬಿಬಿಎಂಪಿ 21 ಲಕ್ಷ ಆಸ್ತಿ ಖಾತಾಗಳಿಗೆ ಡಿಜಿಟಲೀಕರಣ ಮಾಡಿ ಜಿಪಿಎಸ್ ಅಳವಡಿಕೆ ಮಾಡ್ತಿದೆ. ರೂಲ್ ಔಟ್ ಬಿಡುಗಡೆ ಆದ ಬಳಿಕ ಖಾತಾ ಡಿಜಿಟಲೀಕರಣ ಆಗಿದೆಯಾ ಇಲ್ವ ಅಂತಾ ಜನ ಪರಿಶೀಲನೆ ಮಾಡಿ ಕಂದಾಯ ಕಚೇರಿಗಳಿಗೆ ತೆರಳಿ ಇ-ಖಾತಾ ಮಾಡಿಕೊಳ್ಳಬಹುದು. ಜಿಪಿಎಸ್ ಅಳವಡಿಕೆ ಮಾಡ್ತೇವೆ ಅಂದಿದ್ದು, ಯಾವಾಗ ಅಳವಡಿಕೆ ಕಾರ್ಯ ಆರಂಭ ಆಗುತ್ತೆ ಎಂಬುದನ್ನು ಕಾದುನೋಡಬೇಕಿದೆ.**

# ದಾವಣಗೆರೆಯಲ್ಲಿ ನಿಷೇಧಾಜ್ಞೆ ಅಗತ್ಯವಿಲ್ಲ

**ದಾವಣಗೆರೆ:** ಜಿಲ್ಲೆಯಲ್ಲಿ ಗಣೇಶ ಮೆರವಣಿಗೆ ವೇಳೆ ನಡೆದ ಕಲ್ಲುತೂರಾಟದಿಂದಾಗಿ ನಗರದಲ್ಲಿ ಆತಂಕ ಮನೆಮಾಡಿದ್ದು, ಭಯದ ವಾತಾವರಣ ಸೃಷ್ಟಿಯಾಗಿದೆ. ಈಗಾಗಲೇ ಪೊಲೀಸರು ಕಿಡಿಗೇಡಿಗಳನ್ನು ಬಂಧಿಸಿದ್ದಾರೆ. ಈ ಪ್ರಕರಣ ಸಂಬಂಧ ಜಿಲ್ಲೆಯ ಪೂರ್ವವಲಯ ಐಜಿಪಿ ರಮೇಶ್ ಬಾನೋತ್ ಮಾತನಾಡಿದ್ದಾರೆ.



ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಕಳೆದ ಸೆ.19ರಂದು ಸಂಜೆ ಗಣೇಶ ಮೆರವಣಿಗೆ ವೇಳೆ ಕಿಡಿಗೇಡಿಗಳಿಂದ ಕಲ್ಲುತೂರಾಟ ನಡೆದಿದ್ದು, ದಾವಣಗೆರೆ ಎಸ್ಪಿ ತಕ್ಷಣ ಸ್ಥಳಕ್ಕೆ ಧಾವಿಸಿ ಅಗತ್ಯ ಕ್ರಮ ಕೈಗೊಂಡಿದ್ದಾರೆ. ಶಾಂತಿ, ಸೌಹಾರ್ದತೆಗೆ ಕ್ರಮ ಕೈಗೊಳ್ಳಲಾಗುತ್ತಿದೆ. ಈಗಾಗಲೇ ಪ್ರಕರಣ ಸಂಬಂಧ ಕಿಡಿಗೇಡಿಗಳನ್ನು ಪತ್ತೆಹಚ್ಚಿ 30 ಜನರ ವಶಕ್ಕೆ ಪಡೆಯಲಾಗಿದೆ. ಜೊತೆಗೆ ಮನೆಗಳ ಮೇಲೆ ಕಲ್ಲು ತೂರಾಟ, ಸಾರ್ವಜನಿಕರ ಮೇಲೆ ಕಲ್ಲೆಸೆತ ಸೇರಿ ಒಟ್ಟು ಐದು ಕೇಸನ್ನು ದಾಖಲಿಸಲಾಗಿದೆ ಎಂದರು.

ನಗರದಲ್ಲಿ ಇದೀಗ ವಾತಾವರಣ ಸಾಮಾನ್ಯ ಸಹಜ ಸ್ಥಿತಿಗೆ ಮರಳಿದ್ದು, ಗಣೇಶ ವಿಸರ್ಜನೆ ಸಮಯದಲ್ಲಿ ಠಾಣೆಯ ನಾಲ್ಕು ಸಿಬ್ಬಂದಿ ಮಾತ್ರ ಕರ್ತವ್ಯ ನಿರ್ವಹಿಸುತ್ತಿದ್ದರು. ಆ ವೇಳೆ ಇಬ್ಬರು ಪೊಲೀಸ್ ಸಿಬ್ಬಂದಿಗೆ ಗಾಯಗಳಾಗಿದ್ದು, ಸ್ಥಳೀಯರಲ್ಲಿ ಒಬ್ಬರಿಗೆ ಗಾಯವಾಗಿರುವ ದೂರು ಬಂದಿದ್ದು, ಪ್ರಕರಣ ದಾಖಲಾಗಿದೆ. ಬೇರೆಕಡೆಗಳಲ್ಲಿ ಭದ್ರತಾ ದೃಷ್ಟಿಯಿಂದ ಸಿಬ್ಬಂದಿಯನ್ನ ನಿಯೋಜನೆ ಮಾಡಲಾಗಿದ್ದು, ಕಲ್ಲು ತೂರಾಟ ಮಾಡಿದವರ ಪತ್ತೆಗೆ ಕಾರ್ಯಾಚರಣೆ ಚುರುಕು ಮಾಡಲಾಗಿದೆ ಎಂದು ತಿಳಿಸಿದರು.

ನಗರದಲ್ಲಿ ಶಾಂತಿಸಭೆ ನಡೆಸಲು ಸಿದ್ಧತೆ ನಡೆದಿದ್ದು, ಸಾಮಾಜಿಕ ಜಾಲಾಣತಾಣಗಳಲ್ಲಿ ಪ್ರಚೋದನಾತ್ಮಕ ಆಡಿಯೋ ವೈರಲ್ ಮಾಡಿದವರ ವಿರುದ್ಧ ಕ್ರಮ ತೆಗೆದುಕೊಳ್ಳಲಾಗುವುದು. ಸದ್ಯಕ್ಕೆ 144 ನಿಷೇಧಾಜ್ಞೆ ಅಗತ್ಯವಿಲ್ಲ. ಈ ಘಟನೆ ಬಳಿಕ ಎಲ್ಲರೂ ಸಹಕರಿಸಿ ಶಾಂತವಾಗಿ ಗಣೇಶ ವಿಸರ್ಜನೆ ಆಗಿದೆ. ಕೆಲ ಕಿಡಿಗೇಡಿಗಳ ಅರೆಸ್ಟ್ ಬಳಿಕ ಅಮಾಯಕರೆಂಬ ಹೇಳಿಕೆ ನೀಡುತ್ತಿದ್ದಾರೆ. ಆದರೆ ಪಕ್ಕಾ ಮಾಹಿತಿ ಮೇರೆಗೆ ಕಿಡಿಗೇಡಿಗಳನ್ನು ಗುರುತಿಸಿ ವಶಕ್ಕೆ ಪಡೆದಿದ್ದೇವೆ ಎಂದು ಹೇಳಿದರು.

ಬಿಯರ್ ಬಾಟಲಿ ಸಂಗ್ರಹ ವಿಚಾರ: ಖಾಲಿ ಬಿಯರ್ ಬಾಟಲಿ ಸಂಗ್ರಹಿಸಿದ್ದ ಹತ್ತು ಜನರನ್ನು ಬಂಧಿಸಲಾಗಿದೆ. ತಪ್ಪಿತಸ್ತರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ತೆಗೆದುಕೊಳ್ಳುಲಾಗುವುದು. ಶಾಂತಿ ಕದಡುವ ಕಿಡಿಗೇಡಿಗಳ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

# ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

**ಮಂಡ್ಯ:** ಮೆಟ್ರಿಕ್ - ನಂತರದ ಕೋರ್ಸುಗಳಾದ ಪಿಯುಸಿ ಮತ್ತು ಸಮನಾಂತರ, ಸಾಮಾನ್ಯ ಪದವಿ ಮತ್ತು ಸಂಯೋಜಿತ ಉಭಯ ಪದವಿ ಕೋರ್ಸುಗಳಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1 ರ ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳಿಂದ 2024-25 ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ, ಶುಲ್ಕ ಮರುಪಾವತಿ ಮತ್ತು ವಿದ್ಯಾಸಿರಿ, ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಸೆಪ್ಟೆಂಬರ್ 15 ರಂದು ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು ನಿಗದಿಪಡಿಸಲಾಗಿದ್ದು, ವಿದ್ಯಾರ್ಥಿಗಳು ಮತ್ತು ಶೈಕ್ಷಣಿಕ ಸಂಸ್ಥೆಗಳಿಂದ ಅರ್ಜಿ ಸಲ್ಲಿಕೆಯ ದಿನಾಂಕವನ್ನು ವಿಸ್ತರಿಸಲು ಮನವಿ ಮಾಡಿಕೊಂಡ ಕಾರಣ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು ಅಕ್ಟೋಬರ್ 15 ರವರೆಗೆ ವಿಸ್ತರಿಸಲಾಗಿದೆ ಎಂದು ಮಂಡ್ಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲ್ಲೂಕು ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಕ್ಟೋಬರ್ 2ಕ್ಕೆ ಗಾಂಧಿ ಭವನ ಲೋಕಾರ್ಪಣೆ




**ಚಿಕ್ಕಬಳ್ಳಾಪುರ:** ಜಿಲ್ಲಾ ಕೇಂದ್ರದ ಹೃದಯ ಭಾಗದಲ್ಲಿ ನಿರ್ಮಾಣಗೊಂಡಿರುವ ಗಾಂಧಿ ಭವನವನ್ನು ಇದೇ ಅಕ್ಟೋಬರ್ 2 ರ ಗಾಂಧಿ ಜಯಂತಿ ದಿನದಂದು ಲೋಕಾರ್ಪಣೆ ಮಾಡಲು ಯೋಜಿಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ. ಸಿ ಸುಧಾಕರ್ ಅವರು ತಿಳಿಸಿದರು.

ಚಿಕ್ಕಬಳ್ಳಾಪುರ ನಗರದಲ್ಲಿ ನಿರ್ಮಾಣಗೊಂಡಿರುವ ಗಾಂಧಿ ಭವನಕ್ಕೆ ಶುಕ್ರವಾರ ಭೇಟಿ ನೀಡಿ ಪರಿಶೀಲಿಸಿ ಸುದ್ದಿಗಾರರೊಂದಿಗೆ ಮಾತನಾಡಿದರು. 3 ಕೋಟಿ ವೆಚ್ಚದಲ್ಲಿ ನಿರ್ಮಾಣವಾಗಿರುವ ಗಾಂಧೀ ಭವನವನ್ನು ಲೋಕಾರ್ಪಣೆ ಮಾಡಿ ಗಾಂಧೀಜಿವರ ವಿಚಾರ ದಾರೆಗಳು ಹಾಗೂ ತತ್ವಾದರ್ಶಗಳನ್ನು ಇಂದಿನ ಹಾಗೂ ಮುಂದಿನ ಪೀಳಿಗೆಯವರೆಗೆ ತಲುಪಿಸುವ ಕಾರ್ಯವನ್ನು ಮಾಡಲಾಗುವುದು ಈ ನಿಟ್ಟಿನಲ್ಲಿ ಈ ಭವನ ಉಪಯುಕ್ತವಾಗಲಿದ್ದು, ಗಾಂಧೀಜಿಯವರ ಜೀವನ ಚರಿತ್ರೆಯನ್ನು ಬಿಂಬಿಸುವಂತೆ ಈಗಾಗಲೇ ಇಲ್ಲಿ ನಿರ್ಮಿಸಿರುವ ಛಾಯಾಚಿತ್ರ ಗ್ಯಾಲರಿಯನ್ನು ಪ್ರತಿಯೊಬ್ಬರು ವೀಕ್ಷಿಸಲು ಉತ್ತೇಜಿಸಲಾಗುವುದು. ಖಾದಿ ಉತ್ಪನ್ನಗಳನ್ನು ಮಾರಾಟ ಮಾಡಲು ಮಳಿಗೆಗಳನ್ನು ಮಳಿಗೆಗಳನ್ನು ತೆರೆಯಲು ಯೋಜಿಸಲಾಗಿದೆ. ಖಾದಿ ಉತ್ಪನ್ನ ತಯಾರಿಕರಿಗೆ ತಮ್ಮ ಉತ್ಪನ್ನಗಳನ್ನು ಪ್ರದರ್ಶಿಸಲು ಹಾಗೂ ಮಾರಾಟ ಮಾಡಲು ಅನುಮತಿ ನೀಡಲಾಗುವುದು ಎಂದು ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದರು.

ಎಂ.ಜಿ ರಸ್ತೆಯ ಅಗಲೀಕರಣದ ಕಾರ್ಯಕ್ಕೆ ಸ್ಥಳೀಯ ನಾಗರಿಕರು ಹಾಗೂ ಸಾರ್ವಜನಿಕರು ಸ್ವಯಂ ಪ್ರೇರಿತ ಸಹಕಾರ ನೀಡುತ್ತಿರುವುದಕ್ಕೆ ಜಿಲ್ಲಾಡಳಿತದ ಪರವಾಗಿ ಹಾಗೂ ಜಿಲ್ಲಾ ಉಸ್ತುವಾರಿ ಧನ್ಯವಾದಗಳನ್ನು ತಿಳಿಸಿದರು.

ಜಿಲ್ಲಾಕನ್ನಡಭವನನಿರ್ಮಾಣಕಾಮಗಾರಿಯು ಪ್ರಗತಿಯಲ್ಲಿದ್ದು, ಈಗಾಗಲೇ 6.50 ಕೋಟಿ ವೆಚ್ಚದ ಕಾಮಗಾರಿಗಳು ಪೂರ್ಣಗೊಂಡಿವೆ ಇನ್ನುಳಿದ ಬಾಕಿ ಅನುದಾನವನ್ನು ತಂದು ಈ ವರ್ಷದ ಅಂತ್ಯದೊಳಗೆ ಭವನದ ಲೋಕಾರ್ಪಣೆ ಮಾಡುವ ಕೆಲಸವಾಗುತ್ತದೆ ಎಂದರು. ಶಾಸಕರಾದ ಪ್ರದೀಪ್ ಈಶ್ವರ್, ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರಕಾಶ್ ಜಿ.ಟಿ ನಿಟ್ಟಾಲಿ, ಉಪವಿಭಾಗಾಧಿಕಾರಿ ಡಿ.ಹೆಚ್. ಅಶ್ವಿನ್ ತಹಸಿಲ್ದಾರ್ ಅನಿಲ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ಎಂ.ಜುಂಜಣ್ಣ ಉಪಸ್ಥಿತರಿದ್ದರು.

# ವಿಶ್ವ ಪ್ರವಾಸೋದ್ಯಮ ದಿನಾಚರಣೆ

**ಚಿಕ್ಕಬಳ್ಳಾಪುರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪ್ರವಾಸೋದ್ಯಮ ಇಲಾಖೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಚಿಕ್ಕಬಳ್ಳಾಪುರ ಇವರ ಸಂಯುಕ್ತಾಶ್ರಯದಲ್ಲಿ ವಿಶ್ವ ಪ್ರವಾಸೋದ್ಯಮ ದಿನಾಚರಣೆಯನ್ನು ಸೆಪ್ಟೆಂಬರ್ 27 ರಂದು ಬೆಳಿಗ್ಗೆ 7:30 ಗಂಟೆಗೆ ನಂದಿ ಗಿರಿಧಾಮದ ಮಯೂರ ಪೈನ್ ಟಾಪ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಉನ್ನತ ಶಿಕ್ಷಣ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಂ.ಸಿ. ಸುಧಾಕರ್ ರವರು ನೆರವೇರಿಸಲಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದ ಶಾಸಕರಾದ ಪಿ.ಇ. ಪ್ರದೀಪ್ ಈಶ್ವರ್ ಅವರು ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಪ್ರವಾಸೋದ್ಯಮ ಇಲಾಖೆ ಹಾಗೂ ಕರ್ನಾಟಕ ಕಾನೂನು ಸಂಸದೀಯ ವ್ಯವಹಾರಗಳ ಸಚಿವರಾದ ಹೆಚ್. ಕೆ. ಪಾಟೀಲ್, ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದರಾದ ಡಾ. ಕೆ.ಸುಧಾಕರ್, ಕೋಲಾರ ಲೋಕಸಭಾ ಕ್ಷೇತ್ರದ ಸಂಸದರಾದ ಎಂ. ಮಲ್ಲೇಶ್ ಬಾಬು, ಶಾಸಕರಾದ ಎಸ್. ಎನ್. ಸುಬ್ಬಾರೆಡ್ಡಿ, ಬಿ.ಎನ್. ರವಿಕುಮಾರ್, ಕೆ.ಹೆಚ್. ಪುಟ್ಟಸ್ವಾಮಿಗೌಡ, ವಿಧಾನ ಪರಿಷತ್ತಿನ ಶಾಸಕರಾದ ಚಿದಾನಂದ ಎಂ. ಗೌಡ, ಎಂ.ಎಲ್. ಅನಿಲ್ ಕುಮಾರ್, ಡಿ.ಟಿ. ಶ್ರೀನಿವಾಸ್, ಚಿಕ್ಕಬಳ್ಳಾಪು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕೆ.ಎನ್. ಕೇಶವರೆಡ್ಡಿ, ಕರ್ನಾಟಕ ಜಾನಪದ ಅಕಾಡೆಮಿಯ ಅಧ್ಯಕ್ಷ ಗೊಲ್ಲಹಳ್ಳಿ ಶಿವಪ್ರಸಾದ್ ರವರು ಭಾಗವಹಿಸಲಿದ್ದಾರೆ. ಅತಿಥಿಗಳಾಗಿ ಸರ್ಕಾರದ ಕಾರ್ಯದರ್ಶಿಗಳು ಮೂಲಭೂತ ಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಪಂಚಾಯಿತಿ ಆಡಳಿತಾಧಿಕಾರಿಗಳಾದ ಡಾ. ಎನ್. ಮಂಜುಳ, ಪ್ರವಾಸೋದ್ಯಮ ಇಲಾಖೆಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಸಲ್ಮಾ ಕೆ. ಫಾಹಿಮ್, ಪ್ರವಾಸೋದ್ಯಮ ಇಲಾಖೆಯ ನಿರ್ದೇಶಕರು ಹಾಗೂ ಕೆ.ಎಸ್ .ಟಿ.ಡಿ.ಸಿಯ ವ್ಯವಸ್ಥಾಪಕ ನಿರ್ದೇಶಕರಾದ ಡಾ. ಕೆ.ವಿ.ರಾಜೇಂದ್ರ ಮುಂತಾದವರು ಭಾಗವಹಿಸಲಿದ್ದಾರೆ.

# ಪಹಣಿ ಪಡೆದ ಜೋಡಿ ಗ್ರಾಮಗಳ ರೈತರು




**ಚಿಕ್ಕಬಳ್ಳಾಪುರ:** ಯಾರದ್ದೋ ಆಸ್ತಿ ಇನ್ನಾರಿಗೋ ನೋಂದಣಿಯಾಗುವುದನ್ನು ತಪ್ಪಿಸಲು ಕಂದಾಯ ದಾಖಲೆಗಳೊಂದಿಗೆ ಆಧಾರ್ ಜೋಡಣೆ ಕಾರ್ಯವನ್ನು ಮಾಡಲಾಗುತ್ತಿದ್ದು, ಪ್ರಸ್ತುತ ಶೇ. 80 ರಷ್ಟು ಆಧಾರ್ ಜೋಡಣಾ ಕಾರ್ಯ ಮುಗಿದಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರು ತಿಳಿಸಿದರು.

ಶುಕ್ರವಾರ ಜಿಲ್ಲಾಡಳಿತ ಭವನದ ಆಡಿಟೋರಿಯಂನಲ್ಲಿ ಜಿಲ್ಲಾಡಳಿತ ಮತ್ತು ಕಂದಾಯ ಇಲಾಖೆಯ ಸಹಯೋಗದಲ್ಲಿ ಏರ್ಪಡಿಸಿದ್ದ ''ಜಿಲ್ಲೆಯ 28 ಜೋಡಿ ಗ್ರಾಮಗಳ ರೈತರಿಗೆ ಆರ್.ಟಿ.ಸಿ ಪಹಣಿ ವಿತರಣಾ ಕಾರ್ಯಕ್ರಮ''ಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ರೈತರ ಜಮೀನುಗಳ ಕಬಳಿಕೆಯನ್ನು ತಪ್ಪಿಸಲು ಆರ್ .ಟಿ.ಸಿ ಪಹಣಿಗಳೊಂದಿಗೆ ಆಧಾರ್ ಸಂಖ್ಯೆ ಜೋಡಣೆ ಮಾಡಲಾಗುತ್ತಿದ್ದು, ರಾಜ್ಯದಲ್ಲಿ ಶೇ.80 ರಷ್ಟು ಗುರಿ ಸಾಧನೆ ಆಗಿದೆ. ಶೀಘ್ರದಲ್ಲಿಯೇ ಶೇ.100 ಗುರಿ ಸಾಧನೆ ಆಗುವ ಭರವಸೆ ಇದೆ ಎಂದರು.

ಮಹರಾಜರು ಗ್ರಾಮದಲ್ಲಿ ಉನ್ನತ ಸೇವೆ ಸಲ್ಲಿಸಿದವರಿಗೆ ಉಚಿತವಾಗಿ ಇಡೀ ಗ್ರಾಮಗಳನ್ನೆ ನೀಡುತ್ತಿದ್ದರು. ಇಂತಹ ಇನಾಮ್ ಮೂಲಕ ಪಡೆದಿದ್ದ ಜಮೀನುಗಳಿಗೆ ಸರ್ವೆ ಕಾರ್ಯ ಆಗಿರಲಿಲ್ಲ. ಹಿಂದಿನ ಚಾಲ್ತಾ ನಂಬರ್ ಗಳ ಆಧಾರದ ಮೇಲೆ ದಾಖಲೆಗಳು ಚಾಲ್ತಿಯಲ್ಲಿದ್ದವು. 1954 ಇನಾಮ್ ರದ್ದತಿ ಕಾಯ್ದೆ ಜಾರಿ ನಂತರ ಇನಾಮ್ತಿ ಜಮೀನಿನ ಹಿಂದಿನ ಕಂದಾಯ ದಾಖಲೆಗಳು ಮತ್ತು ಸರ್ವೆ ದಾಖಲೆಗಳು ತಾಳೆಯಾಗದೆ ಜಮೀನಿನ ಮಾಲೀಕರು ಬಹಳ ತೊಂದರೆ ಅನುಭವಿಸುವಂತಾಯ್ತು. ಜಮೀನು ವಿಭಾಗ ಮಾಡಿಕೊಳ್ಳಲು, ಮಾರಾಟ ಮಾಡಲು, ಸಾಲ ಸೌಲಭ್ಯ ಪಡೆಯಲು ಅಭಿವೃದ್ಧಿ ಪಡಿಸಲು ತೊಂದರೆಯಾಯಿತು. ಇಂತಹ ಜಟಿಲ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ದಶಕಗಳಿಂದ ಪ್ರಯತ್ನಗಳು ನಡೆದರೂ ಯಶಸ್ಸು ಕಾಣಲು ಸಾಧ್ಯವಾಗಿರಲಿಲ್ಲ. ಕಂದಾಯ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ, ಭೂ ಮಾಪಕರುಗಳ ಶ್ರಮದಿಂದ ಹಾಗೂ ರೈತರ ಸಹಕಾರದಿಂದ ಇಂದು ಜೋಡಿ ಗ್ರಾಮಗಳ ರೈತರಿಗೆ ಪಹಣಿ ನೀಡಿ ಸಮಸ್ಯೆಗೆ ಶಾಶ್ವತ ಪರಿಹಾರವನ್ನು ನೀಡಲಾಗಿದೆ. 1954 ರಲ್ಲಿ ನಿಂತಿದ್ದ ಇನಾಂ ಜಮೀನು ವಹಿವಾಟುಗಳ ಚಕ್ರ ಇಂದಿನಿಂದ ಪುನರಾರಂಭವಾಗಿದೆ ಎಂದು ಹರ್ಷ ವ್ಯಕ್ತಪಡಿಸಿದರು. ಜೋಡಿಗ್ರಾಮಗಳಿಗೆ ಗೋಲ್ ನಕ್ಷೆ, ಟಿಪ್ಪಣಿ ಪುಸ್ತಕ, ಪ್ರಸ್ತುತ ಚಾಲ್ತಿಯಲ್ಲಿನ ಗ್ರಾಮ ನಕಾಶೆ ಸಿದ್ದಪಡಿಸಲು ಗ್ರಾಮಲೆಕ್ಕಾಧಿಕಾರಿಗಳು, ಭೂ ಮಾಪಕರು, ತಹಶೀಲ್ದಾರರು ಬಹಳ ಶ್ರಮವಹಿಸಿದ್ದಾರೆ. ಅವರ ಶ್ರಮದ ಫಲವಾಗಿ ಇಂದು ರೈತರಿಗೆ ಪಹಣಿ ಹಾಗೂ ಇತರ ಕಂದಾಯ ದಾಖಲೆಗಳು ಸಿಕ್ಕಿವೆ. ಜಿಲ್ಲೆಯ ವಿವಿಧ ತಾಲ್ಲೂಕುಗಳ 28 ಗ್ರಾಮಗಳ 12,503 ಎಕರೆ ಜಮೀನಿಗೆ 5,812 ಪಹಣಿಗಳನ್ನು ಸೃಜಿಸಲು ದಾಖಲೆಗಳನ್ನು ಸಿದ್ದಪಡಿಸಲಾಗಿದೆ. ಈ ಪೈಕಿ ಈಗಾಗಲೇ ಸಹಕಾರ ನೀಡಿರುವ 1,830 ರೈತರಿಗೆ ಇಂದು ಪಹಣಿಗಳನ್ನು ಇಂಡೀಕರಿಸಿ ವಿತರಿಸಲಾಗಿದೆ. ಇನ್ನೂಳಿದ 3982 ಪಹಣಿಗಳ ಜಮೀನುಗಳ ಮಾಲೀಕರು ಸಹಕಾರ ನೀಡಿದಲ್ಲಿ ಕೆಲವೇ ತಿಂಗಳುಗಳಲ್ಲಿ ಆ ರೈತರಿಗೂ ಪಹಣಿ ವಿತರಿಸುವ ಕಾರ್ಯ ಆಗಲಿದೆ. ಸಣ್ಣ ಪುಟ್ಟ ವ್ಯತ್ಯಾಸಗಳಿಗೆ ರೈತರು ಆತಂಕ ಪಟ್ಟು ತಕರಾರು ಹಾಕಿಕೊಂಡರೆ ನಿಮಗೂ ಹಾಗೂ ನಿಮ್ಮ ನೆರೆಹೊರೆಯ ಜಮೀನು ಮಾಲೀಕರಿಗೂ ತೊಂದರೆಯಾಗಲಿದೆ. ದಯಮಾಡಿ ಯಾವುದೇ ರೈತರು ತಕರಾರು ಉದ್ಭವ ಆಗಲು ಅವಕಾಶ ನೀಡದೆ ಸಕಾರಾತ್ಮಕವಾಗಿ ಸ್ಪಂದಿಸಬೇಕು. ತಮ್ಮ ದಾಖಲೆಗಳನ್ನುಮಾಡಿಸಿಕೊಳ್ಳಲು ಪ್ರಯತ್ನಿಸಬೇಕು. ಸರ್ಕಾರವೇ ತಮ್ಮ ಮನೆ ಬಾಗಿಲಿಗೆ ಬಂದು ಸೇವೆ ನೀಡಲು ಯತ್ನಿಸುತ್ತಿರುವಾಗ ಆ ಅವಕಾಶವನ್ನು ಉಳಿದ ರೈತರು ಬಳಸಿಕೊಳ್ಳಬೇಕು ಎಂದು ಕಂದಾಯ ಸಚಿವರು ಜೋಡಿಗ್ರಾಮಗಳ ರೈತರಲ್ಲಿ ಮನವಿ ಮಾಡಿದರು. ರಾಜ್ಯದಲ್ಲಿ ಕಂದಾಯ ಇಲಾಖೆ ಎದುರಿಸುತ್ತಿರುವ ಸಿಬ್ಬಂದಿ ಕೊರತೆಯನ್ನು ನೀಗಿಸಲು ಮುಖ್ಯಮಂತ್ರಿಗಳು ಮೊದಲ ಆದ್ಯತೆ ನೀಡಿದ್ದಾರೆ. ಈಗಾಗಲೇ ಒಂದು ಸಾವಿರ ಗ್ರಾಮ ಲೆಕ್ಕಿಗರ ನೇರ ನೇಮಕಾತಿ ಪಕ್ರಿಯೆ ಪ್ರಗತಿಯಲ್ಲಿದೆ. ಈ ವರ್ಷದ ಕೊನೆಯ ವೇಳೆಗೆ ಹೊಸ ಸಿಬ್ಬಂದಿ ಕರ್ತವ್ಯಕ್ಕೆ ಹಾಜರಾಗಲಿದ್ದಾರೆ. ಅಲ್ಲದೇ 357 ಭೂ ಮಾಪಕರ ಭರ್ತಿ ಪ್ರಕ್ರಿಯೆ ಚಾಲನೆಯಲ್ಲಿದೆ. ಇಲಾಖೆಯ ಕಾರ್ಯ ಚಟುವಟಿಕೆಗಳ ವೇಗ ಹೆಚ್ಚಿಸಲು 1,191 ಪರವಾನಗಿ ಹೊಂದಿದ ಭೂ ಮಾಪಕರನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗಿದೆ. ಹೊಸ ಭೂಮಾಪಕರ ಹುದ್ದೆಗಳ ಸೃಷ್ಟಿಗೂ ಸರ್ಕಾರದಲ್ಲಿ ಗಂಭೀರ ಚಿಂತನೆ ನಡೆದಿದೆ ಎಂದರು.ಕಳೆದ ವರ್ಷದಲ್ಲಿ 38 ಲಕ್ಷ ರೈತರಿಗೆ ಯಾವುದೇ ಮಧ್ಯವರ್ತಿಗಳ ಪಾತ್ರವಿಲ್ಲದೆ 4200 ಕೋಟಿ ರೂಪಾಯಿಗಳ ಬರ ಪರಿಹಾರ ಹಣವನ್ನು ನೇರವಾಗಿ ರಾಜ್ಯದ ರೈತರ ಖಾತೆಗಳಿಗೆ ಜಮೆ ಮಾಡಲಾಗಿದೆ ಎಂದು ತಿಳಿಸಿದರು. ಮುಂದಿನ ವರ್ಷ ಚಿಕ್ಕಬಳ್ಳಾಪುರ ಜಿಲ್ಲೆಯ ಹೊಸ ತಾಲ್ಲೂಕುಗಳಾದ ಚೇಳೂರು ಮತ್ತು ಮಂಚೇನಹಳ್ಳಿ ತಾಲ್ಲೂಕುಗಳಿಗೆ ಆಡಳಿತ ಕೇಂದ್ರದ ಕಟ್ಟಡ ಪ್ರಜಾಸೌಧವನ್ನು ಮಂಜೂರು ಮಾಡಲಾಗುವುದು ಎಂದರು. ರಾಜ್ಯದಲ್ಲಿ ಒಟ್ಟು 14 ಲಕ್ಷ ಎಕರೆಗೂ ಹೆಚ್ಚು ಸರ್ಕಾರಿ ಜಮೀನುಗಳನ್ನು ಗುರುತಿಸಲಾಗಿದೆ. ಸರ್ಕಾರಿ ಜಮೀನುಗಳ ಒತ್ತುವರಿ ತೆರವು ಕಾರ್ಯವನ್ನು ಶೀಘ್ರವೇ ಆರಂಭಿಸಲಾಗುವುದು ಎಂದರು. ಮುಂದಿನ ನಾಲ್ಕು ವರ್ಷಗಳಲ್ಲಿ ದರಕಾಸ್ತಿಗೆ ಸಂಬಂಧಿಸಿದ 8 ರಿಂದ 11 ಲಕ್ಷ ರೈತರ ಸರ್ವೆ ನಂಬರುಗಳು ಹಾಗೂ ಖಾಸಗಿ ಹಿಡುವಳಿದಾರರ ಸರ್ವೆ ನಂಬರುಗಳೂ ಸೇರಿದಂತೆ ಒಟ್ಟು 60 ಲಕ್ಷ ಪಹಣಿಗಳನ್ನು ಸೃಜನೆ ಮಾಡಿ ರೈತರಿಗೆ ಅನುಕೂಲ ಮಾಡಿಕೊಡಲು ಸರ್ಕಾರ ನಿರ್ಧರಿಸಿದೆ ಎಂದರು. ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ಮಾತನಾಡಿ, ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ 1954 ರಿಂದ ಜೋಡಿ ಗ್ರಾಮಗಳ ರೈತರಿಗೆ ಪಹಣಿ ಆಗದೆ ಸಮಸ್ಯೆ ಆಗಿತ್ತು. ದಶಕಗಳ ಕನಸು ಇಂದು ನನಸಾಗಿದೆ. ಜಿಲ್ಲೆಯಲ್ಲಿ 28 ಜೋಡಿ ಗ್ರಾಮಗಳ 12,503 ಎಕರೆ ಜಮೀನುಗಳು ಪಹಣಿಗಳ ಸಮಸ್ಯೆಯಲ್ಲಿ ಸಿಲುಕಿದ್ದವು. ಕಳೆದ ಒಂದು ವರ್ಷದಲ್ಲಿ ಈ ಸಮಸ್ಯೆಯನ್ನು ಕೈಗೆತ್ತಿಕೊಂಡು 5,812 ಸರ್ವೆ ನಂಬರುಗಳನ್ನು ಸೃಜಿಸಲಾಗಿದೆ. ಈವರೆಗೆ 1,830 ಸರ್ವೆ ನಂಬರುಗಳನ್ನು ಇಂಡೀಕರಿಸಲಾಗಿದೆ ಎಂದು ತಿಳಿಸಿದರು.

## ಮತ್ತೆ ಫವತಿ ಖಾತೆ ಆಂದೋಲನ

**ಫವತಿ ಖಾತೆಗೆ ಬಾಕಿ ಇರುವ 47 ಲಕ್ಷ ಸರ್ವೆ ನಂಬರುಗಳನ್ನು ಶೀಘ್ರ ವಿಲೇವಾರಿ ಮಾಡಲು ರಾಜ್ಯದಲ್ಲಿ ಮತ್ತೆ ಫವತಿ ಖಾತೆ ಆಂದೋಲನವನ್ನು ಆರಂಭಿಸಲಾಗುವುದು. ರಾಜ್ಯದಲ್ಲಿ ಜಮೀನುಗಳ ದುರಸ್ತಿ ಮಾಡಿ ರೈತರಿಗೆ ಹೊಸ ಆರ್ಟಿಸಿ ಪಹಣಿಗಳನ್ನು ಸೃಜನೆ ಮಾಡಿಕೊಡಲು ಮುಖ್ಯಮಂತ್ರಿಗಳು ಸೂಚನೆ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಕಂದಾಯ ಇಲಾಖೆ ಹೊಸ ಆಪ್ ಮತ್ತಿತರ ತಂತ್ರಾಂಶಗಳನ್ನು ಬಳಸಿಕೊಂಡು ರೈತರು ಮತ್ತು ಸಾರ್ವಜನಿಕರ ಭೂಮಿ ಸಮಸ್ಯೆಗಳ ಅರ್ಜಿಗಳನ್ನು ಶೀಘ್ರ ವಿಲೇವಾರಿ ಮಾಡಲು ನಿರ್ಧರಿಸಲಾಗಿದೆ. ರಾಜ್ಯದಲ್ಲಿ ಫವತಿ ಖಾತೆಗೆ ಬಾಕಿ ಇರುವ 47 ಲಕ್ಷ ಸರ್ವೆ ನಂಬರುಗಳನ್ನು ಮತ್ತೆ ಫವತಿ ಖಾತೆ ಆಂದೋಲನ ಆರಂಭ ಮಾಡುವ ಮೂಲಕ ಶೀಘ್ರ ವಿಲೇವಾರಿ ಮಾಡಲಾಗುವುದು.**

## ಕಂದಾಯ ಪ್ರಕರಣ ಇತ್ಯರ್ಥ

**ರಾಜ್ಯದ ವಿವಿಧ ಜಿಲ್ಲೆಗಳ ಉಪವಿಭಾಗಾಧಿಕಾರಿಗಳ ನ್ಯಾಯಾಲಯಗಳಲ್ಲಿ 69,217 ಪ್ರಕರಣಗಳು ಬಾಕಿ ಇದ್ದವು. ಈ ಪೈಕಿ ಒಂದು ವರ್ಷದ ಮೀರಿದ ಪ್ರಕರಣಗಳು 59800. ಇನ್ನು ಐದು ವರ್ಷಕ್ಕಿಂತ ಹೆಚ್ಚಿನ ಅವಧಿ ದಾಟಿದ್ದ 32,787 ಪ್ರಕರಣಗಳಿದ್ದವು. 5 ವರ್ಷ ಮೀರಿದ ಪ್ರಕರಣಗಳ ಸಂಖ್ಯೆ ಈಗ 7,330 ಕ್ಕೆ ಇಳಿದಿದೆ. ಗರಿಷ್ಠ ಪ್ರಕರಣಗಳು ಅತಿ ಕಡಿಮೆ ಅವಧಿಯಲ್ಲಿ ವಿಲೇವಾರಿಯಾಗಿ ಈಗ ಉಪವಿಭಾಗಾಧಿಕಾರಿಗಳ ನ್ಯಾಯಾಲಯಗಳಲ್ಲಿನ ಪ್ರಕರಣಗಳ ಸಂಖ್ಯೆ 27000 ಆಗಿದೆ ಎಂದರು. ಇನ್ನು ತಾಲ್ಲೂಕು ದಂಡಾಧಿಕಾರಿಗಳ ನ್ಯಾಯಾಲಯಗಳಲ್ಲಿ ಗರಿಷ್ಠ 90 ದಿನಗಳಲ್ಲಿ ವಿಲೇವಾರಿಯಾಗಬೇಕಾದ ಪ್ರಕರಣಗಳು ಈ ಹಿಂದೆ ಸರಾಸರಿ 212 ದಿನ ತೆಗೆದುಕೊಳ್ಳುತ್ತಿದ್ದವು. ಈಗ ಸರಾಸರಿ 82 ದಿನಗಳಲ್ಲಿ ವಿಲೇವಾರಿಯಾಗುತ್ತಿರುವುದು ಸರ್ಕಾರದ ಕ್ರಿಯಾಶೀಲತೆಗೆ ಸಾಕ್ಷಿ ಎಂದರು.**

# ಉಚಿತ ಹೊಲಿಗೆ ತರಬೇತಿ

**ಚಾಮರಾಜನಗರ:** ಎಸ್.ಬಿ.ಐ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯಿಂದ ಉಚಿತವಾಗಿ ಮಹಿಳೆಯರಿಗೆ ಮಹಿಳಾ ಹೊಲಿಗೆ ತರಬೇತಿಯನ್ನು ಸೆಪ್ಟೆಂಬರ್ 25ರಂದು ಪ್ರಾರಂಭಿಸುತ್ತಿದ್ದು ಆಸಕ್ತಿಯುಳ್ಳ ಗ್ರಾಮೀಣ ಭಾಗದ ನಿರುದ್ಯೋಗಿ ಯುವತಿಯರು ಹಾಗೂ ಮಹಿಳೆಯರು ಪ್ರಯೋಜನ ಪಡೆಯಬಹುದಾಗಿದೆ. ಸಂತೇಮರಹಳ್ಳಿ ರಸ್ತೆಯಲ್ಲಿರುವ ಮಾದಾಪುರದ ಸಮಾಜ ಕಲ್ಯಾಣ ಇಲಾಖೆಯ ಹಾಸ್ಟಲ್ ಕಟ್ಟಡದ ಎಸ್.ಬಿ.ಐ ಗ್ರಾಮೀಣ ಸ್ವ-ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ತರಬೇತಿ ನೀಡಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಮೊ.ಸಂ 9606098878, 8722483393, 9739067155, 8088066890 ಅಥವಾ ಇ-ಮೇಲ್ rsetichamarajanagar.ks@gmail.comಅನ್ನು ಸಂಪರ್ಕಿಸುವಂತೆ ಎಸ್.ಬಿ.ಐ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯುತ್ ಸಂಬಂಧ ಜನ ಸಂಪರ್ಕ ಸಭೆ

**ಚಾಮರಾಜನಗರ:** ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದಿಂದ ಚಾಮರಾಜನಗರ, ಹರದನಹಳ್ಳಿ ಮತ್ತು ಸಂತೇಮರಹಳ್ಳಿ ಉಪವಿಭಾಗ ವ್ಯಾಪ್ತಿಯಲ್ಲಿ ಸೆಪ್ಟೆಂಬರ್ 21ರಂದು ವಿದ್ಯುತ್ ಸಂಬಂಧ ಜನ ಸಂಪರ್ಕ ಸಭೆ ನಿಗದಿಪಡಿಸಲಾಗಿದೆ. ಸೆಪ್ಟೆಂಬರ್ 21ರಂದು ಬೆಳಿಗ್ಗೆ 11 ರಿಂದ 12 ಗಂಟೆಯವರೆಗೆ ಚಾಮರಾಜನಗರ ಉಪ-ವಿಭಾಗದ ಕಚೇರಿಯಲ್ಲಿ, ಮಧ್ಯಾಹ್ನ 12.30 ರಿಂದ 1.30 ಗಂಟೆಯವರೆಗೆ ಹರದನಹಳ್ಳಿ ಉಪವಿಭಾಗ ಕಚೇರಿಯಲ್ಲಿ ಹಾಗೂ ಮಧ್ಯಾಹ್ನ 3 ರಿಂದ 4 ಗಂಟೆಯವರೆಗೆ ಸಂತೇಮರಹಳ್ಳಿ ಉಪವಿಭಾಗ ಕಚೇರಿಯಲ್ಲಿ ವಿದ್ಯುತ್ ಸಂಬಂಧ ಜನ ಸಂಪರ್ಕ ಸಭೆ ನಡೆಯಲಿದೆ. ವಿದ್ಯುತ್ ಗ್ರಾಹಕರು ಸಭೆಗೆ ಭಾಗವಹಿಸಿ ವಿದ್ಯುತ್ ಸಂಬಂಧಿತ ಕುಂದು ಕೊರತೆಗಳಿದ್ದಲ್ಲಿ ತಿಳಿಸಿ ಪರಿಹರಿಸಿಕೊಳ್ಳುವಂತೆ ನಿಗಮದ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ಕೋರಿದ್ದಾರೆ.

# ಗ್ರಾಹಕ ಸಂವಾದ ಸಭೆ

**ಬೆಂಗಳೂರು:** ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿಯ ಎಲ್ಲಾ ಕಾರ್ಯ ಮತ್ತು ಪಾಲನಾ ಉಪವಿಭಾಗಗಳಲ್ಲಿ ಪ್ರತಿ ತಿಂಗಳ ಮೂರನೇ ಶನಿವಾರದಂದು ಮಧ್ಯಾಹ್ನ 3 ಗಂಟೆಯಿಂದ ಸಂಜೆ 5.30ರವರೆಗೆ ನಡೆಯುವ ಗ್ರಾಹಕ ಸಂವಾದ ಸಭೆಗಳಲ್ಲಿ, ಗ್ರಾಹಕ ಬಾಂಧವರು ಪಾಲ್ಗೊಂಡು ವಿದ್ಯುತ್ ಸಂಬಂಧಿತ ಸಮಸ್ಯೆಗಳನ್ನು ಬೆಸ್ಕಾಂನ ಅಧಿಕಾರಿಗಳೊಂದಿಗೆ ಮುಖಾಮುಖಿ ಚರ್ಚಿಸಿ ಪರಿಹರಿಸಿಕೊಳ್ಳಬಹುದಾಗಿದೆ ಎಂದು ಬೆಸ್ಕಾಂನ ಪ್ರಧಾನ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿನಿಲಯಗಳಿಗೆ ಅರ್ಜಿ

**ಚಿಕ್ಕಬಳ್ಳಾಪುರ:** ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕ,ಬಾಲಕಿಯರ ವಿದ್ಯಾರ್ಥಿನಿಲಯಗಳು ಚಿಕ್ಕಬಳ್ಳಾಪುರ ಮತ್ತು ಚಿಂತಾಮಣಿ ತಾಲ್ಲೂಕು ಹಾಗೂ ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ವಿದ್ಯಾರ್ಥಿನಿಲಯಗಳು ಗೌರಿಬಿದನೂರು ಮತ್ತು ಬಾಗೇಪಲ್ಲಿ ತಾಲ್ಲೂಕುಗಳ 2024-25ನೇ ಶೈಕ್ಷಣಿಕ ಸಾಲಿನ ಪ್ರವೇಶಕ್ಕೆ ಸಾಮಾನ್ಯ ಪದವಿ ಮಟ್ಟದ ಕೋರ್ಸು, ವೃತ್ತಿಪರ ಕೋರ್ಸು ಮತ್ತು ಸ್ನಾತಕೊತ್ತರ ವಿದ್ಯಾರ್ಥಿಗಳಿಗೆ ಮಾತ್ರ ಅರ್ಹ ವಿದ್ಯಾರ್ಥಿನಿಲಯ ತಂತ್ರಾಂಶದ ಮೂಲಕ ಆನ್ ಲೈನ್ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ವಿದ್ಯಾರ್ಥಿನಿಲಯಗಳಲ್ಲಿ ಶೇ.75% ರಷ್ಟು ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ (ಮುಸ್ಲಿಂ, ಕ್ರೈಸ್ತ, ಜೈನ್, ಪಾರ್ಸಿ,ಬೌದ್ಧ) ಹಾಗೂ ಶೇ25 ರಷ್ಟು ಹಿಂದುಳಿದ ವರ್ಗ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ನೀಡಲಾಗುತ್ತದೆ. ಅರ್ಜಿ ಸಲ್ಲಿಸಲು ಆನ್ ಲೈನ್ ನಲ್ಲಿ ಅಕ್ಟೋಬರ್ 5 ರಂದು ಕೊನೆಯ ದಿನಾಂಕವಾಗಿರುತ್ತದೆ. ಆನ್ ಲೈನ್ ವಿಳಾಸ:htts://shp.karnataka.gov.in ಹಾಗೂ ದೂರವಾಣಿ ಸಂಖ್ಯೆ:08156-277049 ಹೆಚ್ಚಿನ ಮಾಹಿತಿಗಾಗಿ ತಾಲ್ಲೂಕು ವಿಸ್ತರಣಾಧಿಕಾರಿಗಳು, ಸಂಬಂಧಿಸಿದ ನಿಲಯ ಪಾಲಕರನ್ನು ಸಂಪರ್ಕಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯುತ್ ಗ್ರಾಹಕರ ಸಂವಾದ ಸಭೆ

**ಚಿಕ್ಕಬಳ್ಳಾಪುರ:** ಕಾರ್ಯನಿರ್ವಾಹಕ ಅಭಿಯಂತರರರು(ವಿ.) ರವರ ಕಚೇರಿಯ ವತಿಯಿಂದ ಸೆಪ್ಟೆಂಬರ್ 21ರಂದು ಶನಿವಾರ ಮಧ್ಯಾಹ್ನ 3 ಗಂಟೆಗೆ ಚಿಕ್ಕಬಳ್ಳಾಪುರ ವಿಭಾಗ ವ್ಯಾಪ್ತಿಯ ಬೆ.ವಿ.ಕಂ ಉಪವಿಭಾಗ ಕಚೇರಿಗಳಲ್ಲಿ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಹಾಗೂ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ರವರ ಅಧ್ಯಕ್ಷತೆಯಲ್ಲಿ ಗ್ರಾಹಕರ ಸಂವಾದ ಸಭೆಯನ್ನು ಏರ್ಪಡಿಸಲಾಗಿದೆ, ಆಯಾ ವಿಭಾಗ ವ್ಯಾಪ್ತಿಗೆ ಒಳಪಡುವ ಗ್ರಾಹಕರು ಸಭೆಗೆ ಹಾಜರಾಗಿ, ವಿದ್ಯುತ್ ಸರಬರಾಜಿಗೆ ಸಂಬಂಧಪಟ್ಟಂತೆ ಏನಾದರೂ ಕುಂದು ಕೊರತೆಗಳು ಇದ್ದಲ್ಲಿ ಕಾನೂನಾತ್ಮಕವಾಗಿ ಪರಿಹರಿಸಿಕೊಳ್ಳುವಂತೆ ಈ ಮೂಲಕ ಕಾರ್ಯನಿರ್ವಹಾಕ ಇಂಜಿನೀಯರ್(ವಿ) ಬೆ.ವಿ.ಕಂ ಚಿಕ್ಕಬಳ್ಳಾಪುರ ರಮೇಶ್ ಕುಮಾರ್ ತಿಳಿಸಿದ್ದಾರೆ.

# ನೇಕಾರರಿಂದ ಅರ್ಜಿ ಆಹ್ವಾನ

**ಮಂಡ್ಯ:** ಕೈಮಗ್ಗ ಜವಳಿ ಇಲಾಖೆ ವತಿಯಿಂದ 2024-25 ನೇ ಸಾಲಿಗೆ ನೇಕಾರ್ ಸಮ್ಮಾನ್ ಯೋಜನೆಯಡಿ ಕೈಮಗ್ಗ ಮತ್ತು ವಿದ್ಯುತ್ಮಗ್ಗ ನೇಕಾರರಿಗೆ ವಾರ್ಷಿಕ ರೂ.5,000/-ಗಳ ಆರ್ಥಿಕ ನೆರವನ್ನು ನೀಡುವ ಸಲುವಾಗಿ ಸೇವಾ ಸಿಂಧು ಪೋರ್ಟಲ್ನಲ್ಲಿ ಮಾಹಿತಿಯನ್ನು ಅಪ್ಲೋಡ್ ಮಾಡಲು ಆಸಕ್ತ ಅರ್ಹ ಕೈಮಗ್ಗ ಮತ್ತು ವಿದ್ಯುತ್ಮಗ್ಗ ನೇಕಾರರಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ನೇಕಾರರು ಅರ್ಜಿಯನ್ನು ಅಕ್ಟೋಬರ್ 10 ರೊಳಗೆ ಅಗತ್ಯ ದಾಖಲಾತಿಗಳೊಂದಿಗೆ ಮಂಡ್ಯ ಜಿಲ್ಲಾ ಪಂಚಾಯತ್ ಕೈಮಗ್ಗ ಮತ್ತು ಜವಳಿ ಇಲಾಖೆ ಉಪ ನಿರ್ದೇಶಕರ ಕಚೇರಿಗೆ ಅರ್ಜಿ ಸಲ್ಲಿಸತಕ್ಕದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 9972405347 ಅನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಜಿಲ್ಲಾ ಪಂಚಾಯತ್ ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.



**ಚಾಲುಕ್ಯ ಡಾ.ರಾಜಕುರಮಾರ್ ಟ್ರಸ್ಟ್ ವತಿಯಿಂದಡಾ.ರಾಜಕುಮಾರ್ ಪ್ರತಿಮೆ ಮುಂಭಾಗ, ಕುಮಾರವ್ಯಾಸ ವೃತ್ತ, ಕುರುಬರಹಳ್ಳಿ ದಿ ಡಾ.ಎಂ.ನಾಗರಾಜ್ ನಾಲ್ಕನೇ ವರ್ಷದ ಪುಣ್ಯ ಸ್ಮರಣೆ ಕಾರ್ಯಕ್ರಮದಲ್ಲಿ ಸ್ಥಳೀಯ ಶಾಸಕರಾದ ಕೆ ಗೋಪಾಲಯ್ಯ ಮೇಣದ ಬತ್ತಿ ಹಚ್ಚುವ ಮೂಲಕ ಗೌರವ ಸಮರ್ಪಣೆ ಮಾಡಿದರು. ಮಾಜಿ ಶಾಸಕ ನೆ.ಲ.ನರೇಂದ್ರಬಾಬು, ಮಾಜಿ ಬಿಬಿಎಂಪಿ ಉಪಮೇಯರ್ ಎಸ್ ಹರೀಶ್ ಎಮ್.ಶಿವರಾಜು ಎಸ್ ಕೇಶವಮೂರ್ತಿ ರಾಘವೇಂದ್ರ ಶೆಟ್ಟಿ ನಾಗಣ್ಣ ವಿ ಸುರೇಶ ರುದ್ರಮ್ಮನಾಗರಾಜ್ ರಘುನಾಗರಾಜ್ ಇದ್ದರು.**

# ಕೃಷಿ ಡಿಪ್ಲೊಮಾ ಕೋರ್ಸ್‌ಗೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** 2024-25ನೇ ಶೈಕ್ಷಣಿಕ ವರ್ಷದಲ್ಲಿ ಉಡುಪಿ ಜಿಲ್ಲೆಯ ಬ್ರಹ್ಮಾವರದ ಕೃಷಿ ಡಿಪ್ಲೊಮಾ ಕೋರ್ಸ್‌ಗೆ ಪ್ರವೇಶಾತಿ ಅರ್ಜಿ ಆಹ್ವಾನಿಸಲಾಗಿದ್ದು, ಡಿಪ್ಲೊಮಾ ಕೃಷಿ ದಾಖಲಾತಿಗೆ ಈ ಹಿಂದೆ ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಲು ಅಂತಿಮ ದಿನಾಂಕವನ್ನು 14.09.2024 ಎಂದು ಅಧಿಸೂಚನೆ ಹೊರಡಿಸಲಾಗಿತ್ತು. ಮುಂದುವರಿದು, ಅರ್ಜಿ ಸಲ್ಲಿಸಲು ಅಂತಿಮ ದಿನಾಂಕವನ್ನು 30.09.2024ರ ವರೆಗೆ ವಿಸ್ತರಿಸಲಾಗಿದೆ. ಅರ್ಜಿಯನ್ನುwww.uahs.edu.in ವೈಬ್ ಸೈಟ್ನಲ್ಲಿ ಎಲ್ಲಾ ಅಧಿಸೂಚನೆಗಳು ಶೀರ್ಷಿಕೆ ಅಡಿಯಲ್ಲಿ ಡೌನ್ ಲೋಡ್ ಮಾಡಿ ಭರ್ತಿ ಮಾಡಿದ ಅರ್ಜಿಗಳನ್ನು ದಿನಾಂಕ 30.09.2024ರ ಒಳಗೆ ಸಲ್ಲಿಸಬಹುದಾಗಿದೆ. ಎಸ್.ಎಸ್. ಎಲ್.ಸಿ. ಪರೀಕ್ಷೆಯಲ್ಲಿ ತೇರ್ಗಡೆಯಾದ, ಕನಿಷ್ಠ ಶೇ.45% (ಕನಿಷ್ಠ ಶೇ. 40% ಪ.ಜಾ. ಮತ್ತು ಪ.ಪಂ./ಪ್ರವರ್ಗ-1) ಅಂಕಗಳೊಂದಿಗೆ ಉತ್ತೀರ್ಣರಾದ, 19 ವರ್ಷ ವಯಸ್ಸು ಮೀರದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ರೈತರ ಹಾಗೂ ಕೃಷಿ ಕಾರ್ಮಿಕರ ಮಕ್ಕಳಿಗೆ ಶೇ. 50% ರಷ್ಟು ಮೀಸಲಾತಿ ಇರುತ್ತದೆ. ಈ ಎರಡು ವರ್ಷದ ಡಿಪ್ಲೊಮಾ ಕೋರ್ಸ್‌ನಲ್ಲಿ ಕೃಷಿ, ತೋಟಗಾರಿಕೆ, ಪಶುಸಂಗೋಪನೆ, ಮೀನುಗಾರಿಕೆ, ಹೈನುವಿಜ್ಞಾನ, ರೇಷ್ಮೆ ಕೃಷಿ, ಜೇನು ಕೃಷಿ ಹೀಗೆ ಕೃಷಿಗೆ ಸಂಬಂಧಿಸಿದ ಹಲವು ವಿಷಯಗಳ ಬಗ್ಗೆ ನುರಿತ ವಿಜ್ಞಾನಿಗಳಿಂದ ಭೋದನೆ ಇರುತ್ತದೆ. ಹಾಗೂ ಕೃಷಿ ರಂಗದ ಪ್ರಾಯೋಗಿಕ ಪರಿಚಯ/ಅನುಭವ ಆಧಾರಿತ ಕಲಿಕೆಗೆ ಹೆಚ್ಚಿನ ಮಹತ್ವ ನೀಡಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಕುಲಸಚಿವರು, ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಇರುವಕ್ಕಿ, ಶಿವಮೊಗ್ಗ ಹಾಗೂ ಪ್ರಾಂಶುಪಾಲರು, ಡಿಪ್ಲೊಮಾ ಕೃಷಿ ಮಹಾವಿದ್ಯಾಲಯ, ವಲಯ ಕೃಷಿ ಮತ್ತು ತೋಟಗಾರಿಕೆ ಸಂಶೋಧನಾ ಕೇಂದ್ರ, ಬ್ರಹ್ಮಾವರ - 576213, ಉಡುಪಿ ಜಿಲ್ಲೆ ಪ್ರಾಂಶುಪಾಲರು: 9480838208, ಕಛೇರಿ : 9108241342, 9686405090 ಇ-: princi-brahmavar@uahs.edu.in Website: www.uahs.edu.in ಗೆ ಸಂಪರ್ಕಿಸಬಹುದು.

# ನೇಕಾರರ ಸಮ್ಮಾನ್ ಯೋಜನೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಕೈಮಗ್ಗ, ವಿದ್ಯುತ್ ಮಗ್ಗ ಹಾಗೂ ಮಗ್ಗಪೂರ್ವ (ಟ್ವಿಸ್ಟಿಂಗ್, ವೈಡಿಂಗ್, ವಾರ್ಪಿಂಗ್ ಹಾಗೂ ಬಣ್ಣ ಹಾಕುವ ಘಟಕಗಳು) ಚಟುವಟಿಕೆಗಳಲ್ಲಿ ತೊಡಗಿರುವ ನೇಕಾರರು, ಕೆಲಸಗಾರರಿಗೆ ''ನೇಕಾರರ ಸಮ್ಮಾನ್ ಯೋಜನೆ'' ಯಡಿ 2024-25ನೇ ಸಾಲಿಗೆ ವಾರ್ಷಿಕ 5000 ರೂ. ಗಳ ಆರ್ಥಿಕ ನೆರವನ್ನು ಡಿ.ಬಿ.ಟಿ ಮೂಲಕ ನೀಡುವ ಸಲುವಾಗಿ ಸೇವಾಸಿಂದು ಪೋರ್ಟಲ್‌ನಲ್ಲಿ ನೇಕಾರರ, ಕೆಲಸಗಾರರ ಮಾಹಿತಿಯನ್ನು ಅಪ್ ಲೋಡ್ ಮಾಡಲು ಅನುಕೂಲವಾಗುವಂತೆ ಅರ್ಜಿಯನ್ನು ಆಹ್ವಾನಿಸಲಾಗಿದೆ. ಅರ್ಹ ನೇಕಾರರು, ಕೆಲಸಗಾರರು ನಿಗದಿತ ಅರ್ಜಿಯನ್ನು ಉಪ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಕೊಠಡಿ ಸಂಖ್ಯೆ ಎಸ್.ಎ-14, 2ನೇ ಮಹಡಿ, ಜಿಲ್ಲಾಡಳಿತ ಭವನ, ಚಿಕ್ಕಬಳ್ಳಾಪುರ ಈ ಕಚೇರಿಯಿಂದ ಪಡೆದು ಅಕ್ಟೋಬರ್ 30 ರೊಳಗೆ ಸಲ್ಲಿಸಲು ಕೋರಲಾಗಿದೆ. ಆ ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿ / ವಿವರಗಳನ್ನು ಉಪ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಚಿಕ್ಕಬಳ್ಳಾಪುರ ಕಚೇರಿಯ ದೂರವಾಣಿ ಸಂಖ್ಯೆ: 08156-277031, 9945594959, 8971754927, 9986392953 ಗೆ ಸಂಪರ್ಕಿಸಬಹುದು.

# ದಸರಾ ಸಿ.ಎಂ.ಕಪ್ ಕ್ರೀಡಾಕೂಟ

**ಮೈಸೂರು:** ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರುಗಳ ಸಂಯುಕ್ತಾಶ್ರಯದಲ್ಲಿ 2024-2025 ನೇ ಸಾಲಿನ ಮೈಸೂರು ಜಿಲ್ಲೆಯ 09 ತಾಲ್ಲೂಕುಗಳಲ್ಲಿ ತಾಲ್ಲೂಕು ಮಟ್ಟದ ದಸರಾ ಸಿ.ಎಂ. ಕಪ್ ಕ್ರೀಡಾಕೂಟದ ಆಯ್ಕೆ ಪ್ರಕ್ರಿಯೆಯನ್ನು ಸೆಪ್ಟೆಂಬರ್ 23 ರಿಂದ 25 ರವರೆಗೆ ನಡೆಸಲಾಗುತ್ತಿದೆ.

ತಾಲ್ಲೂಕು ಮಟ್ಟದ ಕ್ರೀಡಾಕೂಟದಲ್ಲಿ ಅಥ್ಲೆಟಿಕ್ಸ್ ನಲ್ಲಿ ಪುರುಷರಿಗಾಗಿ 100 ಮೀ, 200 ಮೀ, 400 ಮೀ, 800 ಮೀ, 1500 ಮೀ,5000 ಮೀ ಓಟ, 10000 ಮೀ.ಓಟ, ಉದ್ದ ಜಿಗಿತ, ಎತ್ತರ ಜಿಗಿತ, ಗುಂಡು ಎಸೆತ, ಟ್ರಿಪಲ್ ಜಂಪ್, ಜಾವಲೀನ್ ಥ್ರೋ ಹಾಗೂ ಮಹಿಳೆಯರಿಗಾಗಿ 100 ಮೀ, 200 ಮೀ, 400 ಮೀ, 800 ಮೀ, 1500 ಮೀ, 3000 ಮೀ.ಓಟ, ಉದ್ದ ಜಿಗಿತ, ಎತ್ತರ ಜಿಗಿತ, ಗುಂಡು ಎಸೆತ, ಟ್ರಿಪಲ್ ಜಂಪ್, ಜಾವಲೀನ್ ಥ್ರೋ, ಡಿಸ್ಕಸ್ ಥ್ರೋ, 100 ಮೀ ಹರ್ಡಲ್ಸ್, 4ಥ100 ಮೀ. ರಿಲೇ, 4ಥ400 ಮೀ.ರಿಲೇ ಹಾಗೂ ವಾಲಿಬಾಲ್‌ನಲ್ಲಿ ಫುಟ್‌ಬಾಲ್, ಖೋ-ಖೋ, ಕಬಡ್ಡಿ, ಥ್ರೋಬಾಲ್‌ನಲ್ಲಿ ಯೋಗ(ವೀರಭದ್ರಾಸನ,ಜಾನು,ಶಿರಾಶಾಸನ, ಹಲಾಸನ ಮತ್ತು ಧನುರಾಸನ) ವನ್ನು ಏರ್ಪಡಿಸಲಾಗಿದೆ.

ಸೆಪ್ಟೆಂಬರ್ 23 ರಂದು ನಂಜನಗೂಡಿನ ತಾಲ್ಲೂಕು ಕ್ರೀಡಾಂಗಣದಲ್ಲಿ ಆಯ್ಕೆ ಪ್ರಕ್ರಿಯೆ ನಡೆಯಲಿದ್ದು, ಸಂಚಾಲಕರಾದ ವಾಲಿಬಾಲ್ ತರಬೇತುದಾರ ರವೀಂದ್ರ, ಟಿ.ಬಿ ಅವರ ದೂ.ಸಂ:8277821212 ಮತ್ತು ಸರಗೂರು ತಾಲ್ಲೂಕಿನ ಬಾಲ್ ಫೀಲ್ಡ್ ಸರಗೂರು ಮತ್ತು ಲಯನ್ ಸ್ಕೂಲ್ ಆವರಣದಲ್ಲಿ ಆಯ್ಕೆ ಪ್ರಕ್ರಿಯೆ ನಡೆಯಲಿದ್ದು ಈಮ್ ಇನ್‌ಸ್ಟ್ರಕ್ಟರ್ ರಾದ ವಿಶ್ವ.ಎಂ ಅವರ ದೂ.ಸಂ:981075364, ಸೆಪ್ಟೆಂಬರ್ 24 ರಂದು ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ಆಯ್ಕೆ ಪ್ರಕ್ರಿಯೆ ನಡೆಯಲಿದ್ದು ಸೈಕ್ಲಿಂಗ್ ತರಬೇತುದಾರರಾದ ಫೆರಿಯಾಲ್ ಜಮಾದಾರ್ ಅವರ ದೂ. ಸಂ:8884851538, ಕುಸ್ತಿ ತರಬೇತಿದಾರರಾದ ಮಂಜುನಾಥ್ ಮಾದರ್ ಅವರ ದೂ.ಸಂ:8152904096 ಮತ್ತು ಟಿ.ನರಸೀಪುರ ತಾಲ್ಲೂಕಿನ ತುಂಬಲದ ನವಚೇತನ ಸ್ಪೋರ್ಟ್ಸ್ ಕ್ಲಬ್ ನ ವಾಲಿಬಾಲ್ ತರಬೇತುದಾರರಾದ ರವೀಂದ್ರ ಟಿ.ಬಿ ಅವರ ದೂ.ಸಂ:8277821212, ಪಿರಿಯಾಪಟ್ಟಣ ತಾಲ್ಲೂಕಿನ ಕ್ರೀಡಾಂಗಣದಲ್ಲಿ ಆಯ್ಕೆ ಪ್ರಕ್ರಿಯೆ ನಡೆಯಲಿದ್ದು ಹಾಕಿ ತರಬೇತುದಾರರ ದೂ.ಸಂ:9844487796, ಕೆ.ಆರ್ ತಾಲ್ಲೂಕಿನ ಕ್ರೀಡಾಂಗಣದಲ್ಲಿ ಆಯ್ಕೆ ಪ್ರಕ್ರಿಯೆ ನಡೆಯಲಿದ್ದು ಬಾಸ್ಕೆಟ್ಬಾಲ್ ತರಬೇತುದಾರರಾದ ಗಿರೀಶ್ ಬಿ.ಎಸ್ ಅವರ ದೂ.ಸಂ:9964411709, ಹುಣಸೂರು ತಾಲ್ಲೂಕಿನ ಕ್ರೀಡಾಂಗಣದಲ್ಲಿ ಆಯ್ಕೆ ಪ್ರಕ್ರಿಯೆ ನಡೆಯಲಿದ್ದು ಜಿಮ್ನಾಸ್ಟಿಕ್ಸ್ ತರಬೇತುದಾರರಾದ ಲೋಕೇಶ್.ಬಿ ಅವರ ದೂ.ಸಂ:9449175644, ತಾಲೂಕು ದೈಹಿಕ ಪರಿವೀಕ್ಷಕರಾದ ಲೋಕೇಶ್ ಅವರ ದೂ.ಸಂ:7483626744 ಹಾಗೂ ಸೆಪ್ಟೆಂಬರ್ 25 ರಂದು ಹೆಚ್.ಡಿ ಕೋಟೆ ತಾಲ್ಲೂಕಿನ ಕ್ರೀಡಾಂಗಣದಲ್ಲಿ ಆಯ್ಕೆ ಪ್ರಕ್ರಿಯೆ ನಡೆಯಲಿದ್ದು ಅಥ್ಲೆಟಿಕ್ಸ್ ತರಬೇತುದಾರರಾದ ಕೆ.ಎನ್ ರಾಮಸ್ವಾಮಿ ಅವರ ದೂ.ಸಂ:9449300330, ಸಾಲಿಗ್ರಾಮ ತಾಲ್ಲೂಕಿನ ಚುಂಚನಕಟ್ಟೆಯ ವಿದ್ಯಾಸಂಸ್ಥೆ ಆವರಣದ ಬಿ.ಜಿ.ಎಸ್ ನ ಬಾಸ್ಕೆಟ್‌ಬಾಲ್ ತರಬೇತುದಾರರಾದ ಗಿರೀಶ್ ಬಿ.ಎಸ್ ಅವರ ದೂ.ಸಂ:9964411709 ನ್ನು ಸಂಪರ್ಕಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ನೋಟೀಸ್ ಬೋರ್ಡ್ ಅಥವಾ ದೂ. ಸಂ:0821-2564179 ನ್ನು ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


## ಆನೇಕಲ್ ಯೋಜನಾ ಪ್ರಾಧಿಕಾರ

"ಅಣ್ಣ" ನಂ. 430, ಹೆನ್ನಾಗರ ಗೇಟ್, ಹೊಸೂರು ಮುಖ್ಯ ರಸ್ತೆ, ಬೆಂಗಳೂರು-560 099.
ಫೋನ್: 080-27835122, ಫ್ಯಾಕ್ಸ್: 080-27836569, www.anekal.tpa.gov.in, www.e-vinyasa.kar.nic.in

ಸಂ:ಆಯೋಪ್ರಾ/ಭೂ.ಬ/49/2023-24 ದಿನಾಂಕ: 20.09.2024

### ಪ್ರಕಟಣೆ

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಸೆಕ್ಷನ್ 14(ಎ) ಪ್ರಕಾರ ಅರ್ಜಿದಾರರು ವಸತಿ ಉದ್ದೇಶಕ್ಕೆ ಭೂ ಉಪಯೋಗ ಬದಲಾವಣೆಗೆ ಅರ್ಜಿ ಸಲ್ಲಿಸಿರುತ್ತಾರೆ. ಅರ್ಜಿಯನ್ನು ಪರಿಶೀಲಿಸಲಾಗಿ, ಅಡಕದಲ್ಲಿನ ಮಾಹಿತಿಯನ್ನು ಆಧರಿಸಿ ಕೆಳಕಂಡಂತೆ ವಿವರಗಳನ್ನು ಕೋಷ್ಠಕದಲ್ಲಿ ಅಳವಡಿಸಿದೆ. ಕಾಯ್ದೆಯಲ್ಲಿನ ಅಂಶಗಳನ್ವಯ ಪ್ರಸ್ತುತ ಪ್ರಕರಣಕ್ಕೆ ಸಂಬಂಧಿಸಿದಂತೆ, ಭೂ ಉಪಯೋಗ ಬದಲಾವಣೆಗೆ ಯಾರಿಂದಲಾದರು ಆಕ್ಷೇಪಣೆಗಳಿದ್ದರೆ ಈ ಪ್ರಕಟಣೆ ಪ್ರಕಟವಾದ ದಿನಾಂಕದಿಂದ 15 ದಿನಗಳೊಳಗಾಗಿ ಆಕ್ಷೇಪಣೆಗಳನ್ನು ಲಿಖಿತವಾಗಿ ಸದಸ್ಯ-ಕಾರ್ಯದರ್ಶಿಗಳು, ಆನೇಕಲ್ ಯೋಜನಾ ಪ್ರಾಧಿಕಾರ, ಆನೇಕಲ್ ಕಛೇರಿಗೆ ಸಲ್ಲಿಸಲು ಕೋರಲಾಗಿದೆ. ನಿಗಧಿತ ಅವಧಿಯ ನಂತರ ಬರುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ.

| ಕ್ರ. ಸಂ | ಅರ್ಜಿದಾರರ ಹೆಸರು | ತಾಲ್ಲೂಕು | ಹೋಬಳಿ | ಗ್ರಾಮ | ಸರ್ವೆ ನಂ. | ವಿಸ್ತೀರ್ಣ ಎ-ಗು | ಅನುಮೋದಿತ ಮಹಾ ಯೋಜನೆಯ ಪ್ರಕಾರ ಭೂ ಉಪಯೋಗ | ಬದಲಾವಣೆ ಕೋರಿರುವ ಭೂ ಉಪಯೋಗ |
|---|---|---|---|---|---|---|---|---|
| 1 | ಶ್ರೀ ರಾಮರಾಜು ಶ್ರೀ ಎನ್. ಅಚ್ಯುತರಾಜು ಬಿನ್ ಲೇ. ಎನ್. ನರಸಿಂಹರಾಜು ಮತ್ತು ಇತರರು. | ಆನೇಕಲ್ | ಕಸಬಾ | ಗುಡ್ಡನಹಳ್ಳಿ | 94 | 01-23.08 | ಕೃಷಿ | ವಸತಿ |

ಪ್ರಸ್ತಾವನೆಯಲ್ಲಿನ ಪ್ರಶ್ನಿತ ಜಮೀನನ್ನು ವಸತಿ ಉದ್ದೇಶಕ್ಕೆ ಅಭಿವೃದ್ಧಿಪಡಿಸುವುದರಿಂದ ಸ್ಥಳೀಯ ನಿರುದ್ಯೋಗಿಗಳಿಗೆ ಉದ್ಯೋಗವಕಾಶ ಸೃಷ್ಟಿಯಾಗುತ್ತದೆ. ಆರ್ಥಿಕ ಚಟುವಟಿಕೆಗಳಿಗೆ ಉತ್ತೇಜನ ನೀಡಿದಂತಾಗುತ್ತದೆ ಎಂಬ ಸಾರ್ವಜನಿಕ ಹಿತಾಸಕ್ತಿ ಅಂಶ ಅಡಗಿದೆ ಎಂದು ತಿಳಿಸುತ್ತಾ, ಸದರಿ ಪ್ರದೇಶವನ್ನು **ಕೃಷಿ ವಲಯದಿಂದ ವಸತಿ ವಲಯಕ್ಕೆ** ಭೂ ಉಪಯೋಗ ಬದಲಾವಣೆ ಮಾಡಿಕೊಳ್ಳಲು ಇಚ್ಚಿಸಿರುವುದಾಗಿ ತಿಳಿಸಿರುತ್ತಾರೆ.

ಸಹಿ/- ಸದಸ್ಯ ಕಾರ್ಯದರ್ಶಿ ಹಾಗೂ ನಗರ ಮತ್ತು ಗ್ರಾಮಾಂತರ
ಯೋಜನಾ ಜಂಟಿ ನಿರ್ದೇಶಕರು, ಆನೇಕಲ್ ಯೋಜನಾ ಪ್ರಾಧಿಕಾರ, ಆನೇಕಲ್.

ವಾಸಾಸಂಇ/ವಾಪ್ರ/ಜಿಎ/2100/2024-25

# ಸ್ಮರಣ ಸಂಚಿಕೆಯಲ್ಲಿ ಸ್ಮರಣೆಯಲ್ಲಿ ಉಳಿಯುವ ಲೇಖನಗಳಿರಲಿ



**ಮಂಡ್ಯ:** ಸ್ಮರಣ ಸಂಚಿಕೆಯು ಆಕರ ಗ್ರಂಥದ ರೀತಿಯಲ್ಲಿ ಉಪಯುಕ್ತವಾಗುವಂತೆ ಹಾಗೂ ಸ್ಮರಣ ಸಂಚಿಕೆಯಲ್ಲಿ ಯಾವುದೇ ಕಾಗುಣಿತ,ವ್ಯಾಕರಣ ದೋಷ,ವಾಕ್ಯ ರಚನಾ ದೋಷವಿಲ್ಲದೇ ಮತ್ತು ಗೊಂದಲಗಳಿಗೆ ಆಸ್ಪದ ಇರದಂತೆ ಸ್ಪಷ್ಟವಾಗಿರಬೇಕು. ಸ್ಮರಣೆಯಲ್ಲಿ ಉಳಿಯುವಂತಹ ಉತ್ತಮ ಲೇಖನಗಳಿರಲಿ ಎಂದು ಕೇಂದ್ರ, ಕಸಾಪ ರಾಜ್ಯಾಧ್ಯಕ್ಷ ನಾಡೋಜ ಡಾ.ಮಹೇಶ ಜೋಶಿ ತಿಳಿಸಿದರು.

ಮಂಡ್ಯದ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸಭಾಂಗಣದಲ್ಲಿ ಬುಧವಾರ ನಡೆದ ಸ್ಮರಣ ಸಂಚಿಕೆ ಸಮಿತಿ ಪದಾಧಿಕಾರಿಗಳನ್ನು ಉದ್ದೇಶಿಸಿ ಮಾತನಾಡಿದರು.

ಕನ್ನಡ ಸಾಹಿತ್ಯ ಪರಿಷತ್ತು ತಿಳಿಸುವ ಒಂದು ಚೌಕಟ್ಟಿನೊಳಗಿರುವಂತೆ ಲೇಖನಗಳ ಆಯ್ಕೆ ನಡೆಯಲಿ. ಒಂದೇ ವಿಷಯ ಪನರಾವರ್ತನೆಯಾಗುವುದು ಬೇಡ. ಲೇಖನಗಳನ್ನು ಕೆಲವು ಮಾನದಂಡಗಳ ಮೂಲಕ ಆಯ್ಕೆ ಮಾಡಿಕೊಳ್ಳುವಾಗ ಯಾವುದೇ ಮರ್ಜಿ -ಮಸಲತ್ತುಗಳಿಗೆ ಒಳಗಾಗದೇ ಗುಣಮಟ್ಟ ಹಾಗೂ ವಾಸ್ತವ ವಿಷಯಗಳಿಗೆ ಒತ್ತು ನೀಡುವುದು ಸೂಕ್ತ.ಮೌಲ್ಯಗಳನ್ನು ಉಳಿಸುವ ನಿಟ್ಟಿನಲ್ಲಿ ಮುಂದಿನ ಪೀಳಿಗೆಗೆ ಮಾರ್ಗದರ್ಶಕವಾಗುವಂತಿರಲಿ. ಎಲ್ಲರೂ ಒಪ್ಪುವ ಭಾಷಾ ಶೈಲಿಯಲ್ಲಿ ಇರಲಿ. ಆಕರ್ಷಣೀಯ ಅರ್ಥಗರ್ಭಿತ ಸುಂದರವಾಗಿರಲಿ ಎಂದು ಸೂಚಿಸಿದರು.

ಸಮ್ಮೇಳನದಲ್ಲಿ ಸ್ಮರಣ ಸಂಚಿಕೆಯನ್ನು ಸಾಂಕೇತಿಕವಾಗಿ ಬಿಡುಗಡೆ ಮಾಡಲಾಗುವುದು. ಸಮ್ಮೇಳನ ಮುಗಿದ ನಂತರ ಸಮ್ಮೇಳನ ಅಧ್ಯಕ್ಷರ ಭಾಷಣ, ಛಾಯಾಚಿತ್ರಗಳನ್ನು ಸೇರಿಸಿದ ನಂತರ ಮತ್ತೊಂದು ಸಮಾರಂಭ ಏರ್ಪಡಿಸಿ ಪೂರ್ಣ ಮುದ್ರಿತವಾದ ಸ್ಮರಣ ಸಂಚಿಕೆ ಬಿಡುಗಡೆ ಮಾಡಲಾಗುವುದು ಎಂದರು. ಸ್ಮರಣ ಸಂಚಿಕೆ ಸಂಪಾದಕ ಮಂಡಳಿಯ ಮ. ರಾಮಕೃಷ್ಣ ಸ್ಮರಣ ಸಂಚಿಕೆಗೆ ಬರೆಸುವ ಲೇಖನಗಳ ಬಗ್ಗೆ ಸಂಕ್ಷಿಪ್ತ ಮಾಹಿತಿ ನೀಡಿದರು. ಸಮಿತಿಯ ಡಾ.ಕೆಂಪಮ್ಮ ಸಹ ಲೇಖನಗಳ ಬಗ್ಗೆ ಸಾಕಷ್ಟು ಮಾಹಿತಿಯನ್ನು ಹಂಚಿಕೊಂಡರು.

ಕೇಂದ್ರ, ಕಸಾಪ ಗೌ.ಕಾರ್ಯದರ್ಶಿಗಳಾದ ಡಾ.ಪದ್ಮಿನಿ ನಾಗರಾಜು, ನೇ.ಭ.ರಾಮಲಿಂಗಶೆಟ್ಟಿ, ಸ್ಮರಣ ಸಂಚಿಕೆಯ ಬಗ್ಗೆ ಕೆಲವು ಅಭಿಪ್ರಾಯ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಗೌ.ಕೋಶಾಧ್ಯಕ್ಷ ಪಟೇಲ್ ಪಾಂಡು, ಜಿಲ್ಲಾ ಕಸಾಪ ಸಂಚಾಲಕಿ ಡಾ. ಮೀರಾ ಶಿವಲಿಂಗಯ್ಯ, ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ, ಪುಸ್ತಕ ಸಮಿತಿ ಉಪಾಧ್ಯಕ್ಷ ತೈಲೂರು ವೆಂಕಟಕೃಷ್ಣ, ಜಿಲ್ಲಾ ಗ್ರಂಥಾಲಯಾಧಿಕಾರಿ ಕೃಷ್ಣಮೂರ್ತಿ,ನಂದೀಶ್,ಜಿಲ್ಲಾ ಪದಾಧಿಕಾರಿಗಳಾದ ಡಾ. ಹುಸ್ಕೂರು ಕೃಷ್ಣೇಗೌಡ, ವಿ. ಹರ್ಷ ಪಣ್ಣೆದೊಡ್ಡಿ, ಜೆ.ಧನಂಜಯ ದರಸಗುಪ್ಪೆ, ಹೊಳಲು ಶ್ರೀಧರ್,ಎಲ್. ಕೃಷ್ಣ,ರಂಗಸ್ವಾಮಿ, ಶ್ರೀನಿವಾಸಮೂರ್ತಿ,ಡಾ.ಎಸ್. ಶಿವರಾಮ್,ಅಧಿಕಾರಿಗಳಾದ ಚಂದ್ರಶೇಖರ ಹಾಗೂ ಇತರರು ಉಪಸ್ಥಿತರಿದ್ದರು.

# ಗೊಂಬೆ ನಾಡಿನ ಅಭಿವೃದ್ದಿಗೆ ರಾಜ್ಯ ಸರ್ಕಾರದಿಂದ ಹೊಸ ಭಾಷ್ಯ



**ರಾಮನಗರ:** ಚನ್ನಪಟ್ಟಣ ತಾಲ್ಲೂಕು ಅಭಿವೃದ್ಧಿಗೆ ರಾಜ್ಯ ಸರ್ಕಾರ ಬದ್ಧವಾಗಿದ್ದು, ಅದಕ್ಕೆಪೂರಕವಾಗಿ494 ಕೋಟಿರೂ.ಗಳವಿವಿಧ ಕಾಮಗಾರಿಗಳಿಗೆಭೂಮಿ ಪೂಜೆ ನೆರವೇರಿಸುವ ಮೂಲಕ ಗೊಂಬೆ ನಾಡಿನ ಅಭಿವೃದ್ದಿಗೆ ಹೊಸ ಭಾಷ್ಯಾ ಬರೆಯಲಾಗುತ್ತಿದೆ ಎಂದು ಸಾರಿಗೆ, ಮುಜರಾಯಿ ಹಾಗೂ ಜಿಲ್ಲಾ ಉಸ್ತುವಾರ ಸಚಿವರಾದ ರಾಮಲಿಂಗಾರೆಡ್ಡಿ ಅವರು ತಿಳಿಸಿದರು. ಅವರು ಸೆ. 20ರ ಶುಕ್ರವಾರ ಚನ್ನಪಟ್ಟಣ ತಾಲ್ಲೂಕಿನ ತಿಟ್ಟಮಾರನಹಳ್ಳಿ ಆಯೋಜಿಸಲಾಗಿದ್ದ ಸರ್ಕಾರದ ವಿವಿಧ ಯೋಜನೆಗಳ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು. ಇತ್ತೀಚೆಗೆ ಚನ್ನಪಟ್ಟಣಾದ್ಯಂತ ಬಾಗಿಲಿಗೆ ಬಂತು ಸರ್ಕಾರ ಸೇವೆಗೆ ಇರಲಿ ಸಹಕಾರ ಕಾರ್ಯಕ್ರಮ ಹಮ್ಮಿಕೊಳ್ಳುವ ಮೂಲಕರಾಜ್ಯದ ಉಪಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು ತಾಲ್ಲೂಕಿನ ನಾಗರೀಕರ ಸಮಸ್ಯೆ ಹಾಗೂ ಅಹವಾಲುಗಳನ್ನು ಆಲಿಸಿದರು. ಈ ಸಂದರ್ಭದಲ್ಲಿ ಸಾಕಷ್ಟು ಸಮಸ್ಯೆಗಳನ್ನು ಪರಿಹರಿಸುವಂತೆ ನಾಗರೀಕರು ಮನವಿ ಸಲ್ಲಿಸಿದ್ದರು. ಈ ದೆಸೆಯಲ್ಲಿ ಚನ್ನಪಟ್ಟಣ ತಾಲ್ಲೂಕು ಹಾಗೂ ನಗರ, ಗ್ರಾಮಾಂತರ ಪ್ರದೇಶಗಳಲ್ಲಿ ಅಂದಾಜು ಮೊತ್ತದಲ್ಲಿ115 ಕೋಟಿ ವೆಚ್ಚದಲ್ಲಿ ಕಣ್ವ ನದಿಗೆ ಅಡ್ಡಲಾಗಿ ಸೇತುವೆ ಮತ್ತು ಬ್ಯಾರೇಜ್ ನಿರ್ಮಾಣ ಕಾಮಗಾರಿ, 99 ಕೋಟಿ ವೆಚ್ಚದಲ್ಲಿ ಚನ್ನಪಟ್ಟಣ ನಗರ ಒಳ ಚರಂಡಿ ಕಾಮಗಾರಿ (ಯುಜಿಡಿ), 58 ಕೋಟಿ ವೆಚ್ಚದಲ್ಲಿ ಚನ್ನಪಟ್ಟಣ ನಗರದ ವಾರ್ಡ್‌ಗಳಲ್ಲಿ ರಸ್ತೆ ಮತ್ತು ಚರಂಡಿ ಕಾಮಗಾರಿ, 43 ಕೋಟಿ ವೆಚ್ಚದಲ್ಲಿ ತಾಲ್ಲೂಕಿನ ಹಲವಾರು ಕೆರೆಗಳಿಗೆ ನೀರು ತುಂಬಿಸುವ ಪೈಪ್ ಲೈನ್ ಕಾಮಗಾರಿ, 39 ಕೋಟಿ ವೆಚ್ಚದಲ್ಲಿ ಚನ್ನಪಟ್ಟಣ ಗ್ರಾಮಾಂತರ ಪ್ರದೇಶದಲ್ಲಿ ರಸ್ತೆ ಮತ್ತು ಚರಂಡಿ ಕಾಮಗಾರಿ, 33 ಕೋಟಿ ವೆಚ್ಚದಲ್ಲಿ ಚನ್ನಪಟ್ಟಣ ನಗರ ಕುಡಿಯುವ ನೀರು ಸರಬರಾಜಿಗಾಗಿ, 33 ಕೋಟಿ ವೆಚ್ಚದಲ್ಲಿ ಗ್ರಾಮಾಂತರ ಪ್ರದೇಶದ ರಸ್ತೆಗಳ ಅಭಿವೃದ್ಧಿಗಾಗಿ (ಪಿಡಬ್ಲ್ಯೂಡಿ), 16 ಕೋಟಿ ವೆಚ್ಚದಲ್ಲಿ ಚನ್ನಪಟ್ಟಣ ನಗರ ಅಲ್ಪಸಂಖ್ಯಾತ ವಾರ್ಡ್‌ಗಳ ರಸ್ತೆ ಮತ್ತು ಚರಂಡಿ ಕಾಮಗಾರಿ, 10 ಕೋಟಿ ವೆಚ್ಚದಲ್ಲಿ ಚನ್ನಪಟ್ಟಣ ನಗರಸಭೆ ನೂತನ ಕಾರ್ಯಾಲಯ ನಿರ್ಮಾಣಕ್ಕಾಗಿ, 9.80 ಕೋಟಿ ವೆಚ್ಚದಲ್ಲಿ ಗ್ರಾಮೀಣ ಪ್ರದೇಶದಲ್ಲಿ ಸಮುದಾಯ ಭವನಗಳ ನಿರ್ಮಾಣ, 9 ಕೋಟಿ ವೆಚ್ಚದಲ್ಲಿ ಚನ್ನಪಟ್ಟಣ ನಗರಸಭೆ ಪ್ರದೇಶದಲ್ಲಿ ಕ್ರೀಡಾಂಗಣ ನಿರ್ಮಾಣ, 9 ಕೋಟಿ ವೆಚ್ಚದಲ್ಲಿ ಚನ್ನಪಟ್ಟಣ ನಗರದ ಶೆಟ್ಟಿಹಳ್ಳಿಕೆರೆ ಅಭಿವೃದ್ಧಿ, 5.70 ಕೋಟಿ ವೆಚ್ಚದಲ್ಲಿ ಚನ್ನಪಟ್ಟಣ ತಾಲ್ಲೂಕಿನ ವಿವಿಧ ದೇವಸ್ಥಾನಗಳ ಅಭಿವೃದ್ಧಿಗೆ,5 ಕೋಟಿ ವೆಚ್ಚದಲ್ಲಿ ಚನ್ನಪಟ್ಟಣ ನಗರ ಕಸವಿಲೇವಾರಿ ಘಟಕ ಸ್ಥಾಪನೆಗಾಗಿ, 5 ಕೋಟಿ ವೆಚ್ಚದಲ್ಲಿ ಪೆಟ್ಟಶಾಲೆಯ ಮೈದಾನದಲ್ಲಿ ಸ್ಟೇಡಿಯಂ ನಿರ್ಮಾಣ ಹಾಗೂ 5 ಕೋಟಿ ವೆಚ್ಚದಲ್ಲಿ ಚನ್ನಪಟ್ಟಣ ಮತ್ತು ಗ್ರಾಮಾಂತರ ಪ್ರದೇಶದ ವಸತಿ ರಹಿತರಿಗೆ ಬಡಾವಣೆ ನಿರ್ಮಾಣಕ್ಕಾಗಿ ಶಂಕುಸ್ಥಾಪನೆ ಮಾಡಲಾಗಿದೆ ಎಂದರು.

# ಕರ್ನಾಟಕ ಸಾಂಸ್ಕೃತಿಕ ಮುನ್ನೋಟ: ಚಿಂತನಾ ಸಮಾವೇಶ



**ಮೈಸೂರು:** ಕರ್ನಾಟಕದಲ್ಲಿ ವಾಸಿಸುವ ಪ್ರತಿಯೊಬ್ಬರೂ ಕನ್ನಡ ಭಾಷೆ ಮತ್ತು ಸಂಸ್ಕೃತಿಯನ್ನು ಬೆಳೆಸುವ ವಾತಾವರಣವನ್ನು ಸೃಷ್ಟಿಸಬೇಕು. ಇದು ಕನ್ನಡಿಗರಾದ ನಮ್ಮೆಲ್ಲರ ಜವಾಬ್ದಾರಿ ಮತ್ತು ಕರ್ತವ್ಯವಾಗಿದೆ. ಕನ್ನಡ ಭಾಷೆ ಮತ್ತು ಸಂಸ್ಕೃತಿಯ ವಿಷಯದಲ್ಲಿ ಯಾವುದೇ ರಾಜಿ ಇಲ್ಲ ಎಂದು ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಹೇಳಿದರು.

ಇಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಸಮನ್ವಯ- ರಾಷ್ಟ್ರೀಯ ಸಂತ ಕವಿ ಕನಕದಾಸ ಅಧ್ಯಯನ ಮತ್ತು ಸಂಶೋಧನಾ ಕೇಂದ್ರ, ಬೆಂಗಳೂರು ಇವರ ವತಿಯಿಂದ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕಾವೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಸುವರ್ಣ ಸಂಭ್ರಮ ಕರ್ನಾಟಕ 50 ''ಕರ್ನಾಟಕ ಸಾಂಸ್ಕೃತಿಕ ಮುನ್ನೋಟ:ಚಿಂತನಾ ಸಮಾವೇಶ''ವನ್ನು ಉದ್ಘಾಟನೆ ಮಾಡಿ ಅವರು ಮಾತನಾಡಿದರು.

ಪ್ರಸ್ತುತ ಕರ್ನಾಟಕದಲ್ಲಿ ಯಾವ ಭಾಷೆಯನ್ನಾದರೂ ಬಳಸಿ ಬದುಕಬಹುದು ಎಂಬ ವಾತಾವರಣ ನಿರ್ಮಾಣವಾಗಿದೆ. ಆದರೇ ಕರ್ನಾಟಕದಲ್ಲಿ ಕನ್ನಡವೇ ಆಡಳಿತ ಭಾಷೆ ಹಾಗೂ ಅಗ್ರಭಾಷೆ ಹಾಗಾಗಿ ಅನ್ಯರಾಜ್ಯ, ವಿದೇಶದಿಂದ ಬಂದಂತವರು ಕನ್ನಡವನ್ನು ಕಡ್ಡಾಯವಾಗಿ ಕಲಿತು ಕನ್ನಡದಲ್ಲೇ ವ್ಯವಹರಿಸಬೇಕು. ಕನ್ನಡವು ಕೆಲವೇ ಜನರದ್ದಾಗದೆ ಏಳು ಕೋಟಿ ಕನ್ನಡಿಗರ ಉಸಿರಾಗಬೇಕು. ಕನ್ನಡವನ್ನು ಕಲಿಯಲು ಮರೆಯಬಾರದು ಕನ್ನಡವನ್ನು ಮಾತನಾಡಲು ಬಿಡಬಾರದು ಎಂಬ ಸಾಲಿನ ಸಾರಾಂಶವನ್ನು ಪಾಲಿಸಬೇಕು ಎಂದು ಹೇಳಿದರು.

ಕರ್ನಾಟಕದಲ್ಲಿ ಬದುಕನ್ನು ಕಟ್ಟಿಕೊಂಡವರು, ಅನ್ಯ ಭಾಷಿಗರು, ಕನ್ನಡವನ್ನು ಮಾತನಾಡುವವರಾಗಬೇಕು. ನಾವು ಯಾವುದೇ ಭಾಷೆಯನ್ನು ದ್ವೇಷಿಸುವುದಿಲ್ಲ, ಎಲ್ಲಾ ಭಾಷೆಯನ್ನು ಕಲಿಯಬೇಕು ಆದರೇ ಕನ್ನಡವನ್ನು ಹೆಚ್ಚಾಗಿ ಬಳಸಬೇಕು. ಬೇರೆ ರಾಜ್ಯದ ಜನರಂತೆ ನಾವು ನಮ್ಮ ಮಾತೃ ಭಾಷೆಯಾದ ಕನ್ನಡಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ಕನ್ನಡ ನಾಡಿನಲ್ಲಿ ಹುಟ್ಟಿದ ನಾವು, ಕನ್ನಡ ನಾಡು ನುಡಿಗೆ ನಮ್ಮದೇ ಆದ ಕೊಡುಗೆಯನ್ನು ನೀಡಿ ಬೆಳಸಬೇಕು ಎಂದು ಹೇಳಿದರು.

ಡಿ.ದೇವರಾಜ ಅರಸು ಅವರು 1973 ರಲ್ಲಿ ಕರ್ನಾಟಕ ಎಂದು ನಾಮಕರಣ ಮಾಡಿದರು. ನಾಮಕರಣ ಕಳೆದ ವರ್ಷಕ್ಕೆ 50 ವರ್ಷ ಪೂರೈಸಿದ್ದು, ಅಂದಿನ ಸರ್ಕಾರ ಸಂಭ್ರಮಾಚರಣೆಯನ್ನು ಮಾಡಬೇಕಿತ್ತು. ಕಾರಣಾಂತರಗಳಿಂದ ನಡೆಯದ ಕಾರಣ ಇಂದು ನಮ್ಮ ಸರ್ಕಾರ ಸಂಭ್ರಮಾಚರಣೆ ಮಾಡಬೇಕೆಂದು 2023-24 ನೇ ಸಾಲಿನ ಬಜೆಟ್ ನಲ್ಲಿ ಘೋಷಣೆ ಮಾಡಿ ಇಂದು ಅದನ್ನು ಕನ್ನಡ ಜನೋತ್ಸವವಾಗಿ ಮಾಡಲಾಗುತ್ತಿದೆ ಎಂದು ಮಾಹಿತಿ ನೀಡಿದರು. ಸಮಾಜ ಕಲ್ಯಾಣ ಇಲಾಖೆಯ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಹೆಚ್ .ಸಿ.ಮಹಾದೇವಪ್ಪನವರು ಮಾತನಾಡಿ, ಮೈಸೂರು ರಾಜ್ಯವು ಕರ್ನಾಟಕ ಎಂದು ನಾಮಕರಣವಾಗಿ ಇಂದಿಗೆ 50 ವರ್ಷಗಳನ್ನು ಪೂರೈಸಿದ್ದು, ಈ ಸಂಭ್ರಮಾಚಾರಣೆಯನ್ನು ಜನರ ಸಾಂಸ್ಕೃತಿಕ ಮುನ್ನೋಟವನ್ನಾಗಿ ಮಾಡಲು ಸರ್ಕಾರವು 4 ರೀತಿಯಲ್ಲಿ ಕಾರ್ಯಕ್ರಮವನ್ನು ಆಯೋಜನೆ ಮಾಡಿದೆ ಎಂದು ಮಾಹಿತಿ ನೀಡಿದರು.

ಕನ್ನಡದ ಸಾಹಿತ್ಯ ಹಾಗೂ ಸಂಸ್ಕೃತಿಯ ಪರಂಪರೆಯು ದೊಡ್ಡದಿದ್ದು, ಸಾಂಸ್ಕೃತಿಕ ನಾಯಕನಾದ ಬಸವಣ್ಣನವರಿಂದ ಕುವೆಂಪು, ಕಾರಂತರಂತಹ ಮಹಾನ್ ಸಾಹಿತಿಗಳು ಕೊಡುಗೆ ನೀಡಿದ್ದಾರೆ. ಸಮ ಸಮಾಜದ ನಿರ್ಮಾಣಕ್ಕಾಗಿ ಹೋರಾಡಿ, ಅವೈಜ್ಞಾನಿಕ ಮತ್ತು ಮೂಢನಂಬಿಕೆಗಳನ್ನು ಧಿಕ್ಕರಿಸಿ ಜನರಿಗೆ ನಿಜವಾದ ಸಂಸ್ಕೃತಿಯನ್ನು ತಿಳಿಸಲು ಮುಂದಾಗಿದ್ದರು ಎಂದರು.

ಜಾತಿ ವ್ಯವಸ್ಥೆ, ಧರ್ಮಾಧಾರಿತ ಪ್ರಾಬಲ್ಯವನ್ನು ಹೋಗಲಾಡಿಸಲು ನಮ್ಮ ನಾಡಿನ ಹಿರಿಯರು ಕಾಲ-ಕಾಲಕ್ಕೆ ಸಂಸ್ಕೃತಿಯ ಬಗ್ಗೆ ಕಾರ್ಯಕ್ರಮಗಳನ್ನು ಆಯೋಜಿಸಿ ಜನರಿಗೆ ತಿಳಿಸುವ ಕೆಲಸ ಮಾಡಬೇಕು. ಇಂದಿನ ಕವಿಗಳು ಮತ್ತು ಸಾಹಿತಿಗಳು ತಮ್ಮ ಸಾಹಿತ್ಯದ ಶ್ರೀಮಂತ ಬೇರನ್ನು ಹೆಚ್ಚಿನ ಜನರಿಗೆ ತಲುಪಿಸಿ, ಸಾಹಿತ್ಯ ಹಾಗೂ ಸಂಸ್ಕೃತಿಯಲ್ಲಿ ಅಭಿವೃದ್ಧಿಯ ಬೆಳಕನ್ನು ತರಬೇಕು ಎಂದು ಹೇಳಿದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸಚಿವರು ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರಾದ ಶಿವರಾಜ.ಎಸ್.ತಂಗಡಗಿ ಅವರು ಮಾತನಾಡಿ, ದೇವರಾಜ ಅರಸು ಅವರು ಮುಖ್ಯಮಂತ್ರಿಯಾಗಿದ್ದಾಗ ಮೈಸೂರು ರಾಜ್ಯವನ್ನು ಕರ್ನಾಟಕ ಎಂದು ನಾಮಕರಣ ಮಾಡಿ ಇತಿಹಾಸ ಬರೆದಂತಹ ಕ್ಷಣಕ್ಕೆ ಇಂದು 50 ವರ್ಷ ತುಂಬಿದೆ. ಅಂದು ನಾಮಕರಣ ಮಾಡಿದ ಮಾದರಿಯಲ್ಲಿಯೇ ಇಂದು 50 ವರ್ಷದ ಸಂಭ್ರಮಾಚಾರಣೆಯನ್ನು ಮಾಡಲಾಗುತ್ತಿದ್ದು,ಸುವರ್ಣ ಸಂಭ್ರಮ ಕರ್ನಾಟಕದ ರಥವನ್ನು ನಿರ್ಮಿಸಿ ರಾಜ್ಯದ ಪ್ರತಿ ಜಿಲ್ಲೆಯಲ್ಲೂ ಮೆರವಣಿಗೆಗೆ ಕಳುಹಿಸಲಾಗಿದೆ ಎಂದು ಮಾಹಿತಿ ನೀಡಿದರು.

# ಅ.4 ರಿಂದ 7 ವರೆಗೆ ಶ್ರೀರಂಗಪಟ್ಟಣ ದಸರ

**ಮಂಡ್ಯ:** ಶ್ರೀರಂಗಪಟ್ಟಣ ದಸರೆ ಯನ್ನು ಈ ಬಾರಿ ಅಕ್ಟೋಬರ್ 4 ರಿಂದ 7 ವರೆಗೆ ವಿಜೃಂಭಣೆಯಿಂದ ಆಚರಿಸಲಾಗುವುದು ಎಂದು ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್ ಚಲುವರಾಯಸ್ವಾಮಿ ಅವರು ತಿಳಿಸಿದರು.

ಜಿಲ್ಲಾ ಪಂಚಾಯತ್ ನ ಕಾವೇರಿ ಸಭಾಂಗಣದಲ್ಲಿ ನಡೆದ ಶ್ರೀರಂಗಪಟ್ಟಣ ದಸರಾ ಮಹೋತ್ಸವ-2024ರ ಲೋಗೋ ಬಿಡುಗಡೆ ಮಾಡಿ ಮಾತನಾಡಿದರು.

ನಾಡಿನ ದಸರಾ ಹಬ್ಬವು ಇಡೀ ಅಂತಾರಾಷ್ಟ್ರೀಯ ಮಟ್ಟದಲ್ಲಿ ಪ್ರಸಿದ್ದಿ ಪಡೆದಿದ್ದು, ನಮ್ಮ ನಾಡಿನ ಕಲ್ಯಾಣಕ್ಕೋಸ್ಕರ ಶ್ರೀ ಚಾಮುಂಡೇಶ್ವರಿ ತಾಯಿಯನ್ನು ಪೂಜಿಸಲಾಗುವುದು. ಶ್ರೀರಂಗಪಟ್ಟಣ ದಸರಾ ಹಬ್ಬದಲ್ಲಿ ಅನೇಕ ರೀತಿಯ ವಿಭಿನ್ನ ಸಾಂಸ್ಕೃತಿಕ ಉತ್ಸವಗಳು ನಡೆಯಲಿದ್ದು, ಸಾರ್ವಜನಿಕರಿಗೆ ಹಬ್ಬದ ವಾತಾವರಣವು ಉಂಟಾಗಲಿದೆ ಎಂದರು. ಶ್ರೀರಂಗಪಟ್ಟಣ ದಸರಾ ಹಬ್ಬದಲ್ಲಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಮಂಡ್ಯ ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸಬೇಕು. ಜೊತೆಗೆ ನಮ್ಮ ನಾಡಿನ ಪರಂಪರೆಯನ್ನು ಉಳಿಸುವ ಕೆಲಸವಾಗಬೇಕು ಎಂದು ತಿಳಿಸಿದರು.

ಹರಿದ್ವಾರ ಮತ್ತು ವಾರಣಾಸಿಯಲ್ಲಿ ನಡೆಯವ ಗಂಗಾರತಿಯು ಹಲವಾರು ವರ್ಷಗಳ ಇತಿಹಾಸವನ್ನು ಹೊಂದಿದೆ. ಗಂಗಾರತಿಯ ಶೈಲಿಯಲ್ಲಿಯೇ ಕಾವೇರಿ ಆರತಿಯನ್ನು ಕೆ.ಆರ್.ಎಸ್ ನಲ್ಲಿ ಪ್ರಾರಂಭಿಸಲಾಗುವುದು. ಈ ಬಾರಿಯ ಶ್ರೀರಂಗಪಟ್ಟಣ ದಸರಾ ಕಾರ್ಯಕ್ರಮದಲ್ಲೇ ಪ್ರಾರಂಭಿಸಲು ಚಿಂತಿಸಲಾಗುತ್ತಿದೆ ಎಂದರು.

ಇದರ ಸಂಬಂಧವಾಗಿ ನಾಳೆ ಹರಿದ್ವಾರ ಮತ್ತು ವಾರಣಾಸಿಗೆ 28 ಜನರ ನಿಯೋಗ ಹರದ್ವಾತ ಹಾಗೂ ವಾರಣಾಸಿಗೆ ತೆರಳಲಿದೆ. ಅಲ್ಲಿಂದ ಬಂದ ನಂತರ ಕಾವೇರಿ ಮಾತೆಗೆ ಗಂಗಾರತಿ ಸಲ್ಲಿಸುವ ಸಂಬಂಧ ನಿರ್ಧಾರ ಕೈಗೊಳ್ಳಲಾಗುವುದು ಎಂದರು.

ಜಿಲ್ಲಾಧಿಕಾರಿ ಡಾ ಕುಮಾರ ಅವರು ವೇದಿಕೆಯ ಮೇಲಿರುವ ಎಲ್ಲರನ್ನು ಸ್ವಾಗತಿಸಿ, ಪ್ರತಿ ವರ್ಷದಂತೆ ಈ ವರ್ಷವು ಶ್ರೀರಂಗಪಟ್ಟಣ ದಸರಾವನ್ನು ಆಚರಿಸಲಾಗುತಿದ್ದು, ಇಂದು ಲೋಗೋ ಬಿಡುಗಡೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಶ್ರೀರಂಗಪಟ್ಟಣ ದಸರಾಗೆ ಸಂಬಂಧಿಸಿದಂತೆ ಈಗಾಗಲೇ ಹಲವಾರು ಸಮಿತಿಗಳನ್ನು ರಚನೆ ಮಾಡಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ ಅಧ್ಯಕ್ಷರು ಹಾಗೂ ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರ ಶಾಸಕ ಎ.ಬಿ. ರಮೇಶ್ ಬಂಡಿಸಿದ್ದೇಗೌಡ, ಮಂಡ್ಯ ಶಾಸಕ ಪಿ ರವಿಕುಮಾರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಶೇಕ್ ತನ್ವಿರ್ ಆಸೀಫ್, ಅಪರ ಜಿಲ್ಲಾಧಿಕಾರಿ ಡಾ ಹೆಚ್ ಎಲ್ ನಾಗರಾಜು, ಮೈಸೂರು ಸಕ್ಕರೆ ಕಂಪನಿಯ ನಿಯಮಿತದ ಅಧ್ಯಕ್ಷ ಸಿ ಡಿ ಗಂಗಾಧರ್, ಉಪ ವಿಭಾಗಾಧಿಕಾರಿ ಶಿವಮೂರ್ತಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಸ್ವಚ್ಛತೆ ಕಾಪಾಡುವುದು ಕರ್ತವ್ಯ



**ಮಂಡ್ಯ:** ಸ್ವಚ್ಛತಾ ಹೀ ಸೇವಾ ಕಾರ್ಯಕ್ರಮದ ಅಂಗವಾಗಿ ಈ ದಿನ ಜಿಲ್ಲೆಯ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಸ್ವಚ್ಛತೆಯನ್ನು ಕೈಗೊಂಡಿದ್ದೇವೆ. ಸ್ವಚ್ಛತೆಯ ಕೆಲಸ ದೇವರ ಕೆಲಸವಾಗಿದೆ. ಸ್ವಚ್ಛತೆಯನ್ನು ಕಾಪಾಡುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕಿ ತುಷಾರಮಣಿ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ಸ್ವಚ್ಛತಾ ಹೀ ಸೇವಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸ್ವಚ್ಛತಾ ಹೀ ಸೇವಾ ಸಪ್ತಾಹವು ಈಗಾಗಲೇ ಪ್ರಾರಂಭವಾಗಿದ್ದು, ಅಕ್ಟೋಬರ್ 2 ರವರೆಗೆ ನಡೆಯಲಿದೆ. ಮಹಾತ್ಮಾ ಗಾಂಧೀಜಿಯವರು ಸ್ವಚ್ಛತೆಗೆ ಬಹಳ ಒತ್ತು ನೀಡಿದ್ದರು. ಆದ್ದರಿಂದ ಅವರ ಆಶಯವನ್ನು ಎತ್ತಿ ಹಿಡಿಯುವ ಮೂಲಕ ನಮ್ಮ ಪರಿಸರವನ್ನು ಸ್ವಚ್ಛ ಹಾಗೂ ಸುಂದರವಾಗಿರಿಸಲು ಪ್ರತಿಯೊಬ್ಬರೂ ಕೈಜೋಡಿಸಬೇಕು. ಈ ನಿಟ್ಟಿನಲ್ಲಿ ನಮ್ಮ ಮನೆಯನ್ನು ಹೇಗೆ ಸ್ವಚ್ಛಗೊಳಿಸಿಕೊಳ್ಳುತ್ತಿವೋ ಹಾಗೆಯೇ ತಮ್ಮ ಕಚೇರಿಗಳನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು. ಸ್ವಚ್ಛತೆ ಎಂಬುದು ಕೇವಲ ಒಂದು ದಿನದ ಕಾರ್ಯಕ್ರಮವಾಗದೆ ನಮ್ಮ ದಿನ ನಿತ್ಯದಲ್ಲಿ ಒಂದು ಅವಿಭಾಜ್ಯ ಅಂಗವಾಗಬೇಕು ಎಂದರು.

ಆಯುಕ್ತ ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯ ಉಪ ನಿರ್ದೇಶಕ ಹಾಗೂ ಮಂಡ್ಯ ನಗರಸಭೆ ಕೃಷ್ಣಕುಮಾರ್ ಅವರು ಮಾತನಾಡಿ ಮಂಡ್ಯ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ನಗರಸಭೆ ವತಿಯಿಂದ ಸ್ವಚ್ಛತಾ ಆಂದೋಲನವನ್ನು ಸೆಪ್ಟೆಂಬರ್ 18 ರಿಂದ ಅಕ್ಟೋಬರ್ 2 ರವರೆಗೂ ಹಮ್ಮಿಕೊಳ್ಳಲಾಗಿದೆ. ಇದರ ಉದ್ದೇಶ ನಾವು ಕೆಲಸ ಮಾಡುವಂತಹ ಕಚೇರಿಗಳು ಹಾಗೂ ಶಾಲಾ ಕಾಲೇಜು ಆವರಣಗಳಲ್ಲಿ ಸ್ವಯಂ ನಾವೇ ಸ್ವಚ್ಛವಾಗಿಟ್ಟುಕೊಳ್ಳುವುದರ ಮೂಲಕ ಸ್ವಚ್ಛತೆಯನ್ನು ಕಾಪಾಡುವುದಾಗಿದೆ. ನಗರಸಭೆಯ ಎಲ್ಲಾ ಪೌರ ಕಾರ್ಮಿಕರು, ಅಧಿಕಾರಿಗಳು, ಸಿಬ್ಬಂದಿಗಳೆಲ್ಲರೂ ಸ್ವಚ್ಛತಾ ಅಭಿಯಾನದಲ್ಲಿ ಪಾಲ್ಗೊಳ್ಳುವ ಮೂಲಕ ಸ್ವಚ್ಛತೆಯನ್ನು ಪಾಲನೆ ಮಾಡುತ್ತಿದ್ದಾರೆ ಎಂದು ತಿಳಿಸಿದರು.

ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಹರ್ಷ, ನಗರಸಭೆ ಪರಿಸರ ವಿಭಾಗದ ಅಭಿಯಂತರ ರುದ್ರೇಗೌಡ, ಆರೋಗ್ಯ ಪರಿವೀಕ್ಷಕ ಚೆಲುವರಾಜು, ನೆಹರು ಯುವ ಕೇಂದ್ರದ ಮುಖ್ಯ ಲೆಕ್ಕಾಧಿಕಾರಿ ರವಿಚಂದ್ರನ್ ಸೇರಿದಂತೆ ಜಿಲ್ಲಾಧಿಕಾರಿಗಳ ಕಚೇರಿಯ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಸ್ವಚ್ಛತೆಯ ಸೇವೆ ಎಂಬ ಆಂದೋಲನಕ್ಕೆ ಚಾಲನೆ

**ರಾಮನಗರ:** ಮಹಾತ್ಮ ಗಾಂಧಿ ಜಯಂತಿ ಅಂಗವಾಗಿ ಅಕ್ಟೋಬರ್ 2 ವರೆಗೆ ಸ್ವಚ್ಛ ಭಾರತ್ ಯೋಜನೆಯಡಿ ಸ್ವಚ್ಛತೆಯ ಸೇವೆ ಎಂಬ ಆಂದೋಲನಕ್ಕೆ ಸೆ. 17ರ ಬುಧವಾರ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ದಿಗ್ವಿಜಯ್ ಬೋಡ್ಕೆ ಅವರ ನೇತೃತ್ವದಲ್ಲಿ ವಿದ್ಯುಕ್ತ ಚಾಲನೆ ನೀಡಲಾಯಿತು. ಜಿಲ್ಲಾ ಪಂಚಾಯತಿಯ ಮುಖ್ಯ ಯೋಜನಾಧಿಕಾರಿ ಹಾಗೂ ನೋಡಲ್ ಅಧಿಕಾರಿ ಚಿಕ್ಕಸುಬ್ಬಯ್ಯ ಹಾಗೂ ಕಾರ್ಯಪಾಲಕ ಅಭಿಯಂತರರು, ನಾಲ್ಕು ತಾಲ್ಲೂಕುಗಳ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ಕಾರ್ಯಪಾಲಕ ಅಭಿಯಂತರರು ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸ್ವಚ್ಛ ಭಾರತ್ ಯೋಜನೆಯ ಎಲ್ಲಾ ಜಿಲ್ಲಾ ಸಂಯೋಜಕರು ಕಾರ್ಯಕ್ರಮದಲ್ಲಿ ಪ್ರತಿಜ್ಞಾ ವಿಧಿಯನ್ನು ಸ್ವೀಕರಿಸಿದರು. ಆ ಮೂಲಕ ಎರಡು ವಾರ ನಡೆಯುವ ಈ ಅಭಿಯಾನವನ್ನು ಯಶಸ್ವಿಗೊಳಿಸುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಅಗತ್ಯ ಸಲಹೆ ಸೂಚನೆ ನೀಡಿದರು.

## ಗ್ರಂಥಾಲಯ ಕಂ ಮಾಹಿತಿ ಸಹಾಯಕರ ಹುದ್ದೆಗೆ ಅರ್ಜಿ ಆಹ್ವಾನ

**ರಾಮನಗರ:** ಜಿಲ್ಲೆಯ ಚನ್ನಪಟ್ಟಣ ತಾಲ್ಲೂಕಿನ ಕೋಡಂಬಳ್ಳಿ ಗ್ರಾಮ ಪಂಚಾಯಿತಿ ಗ್ರಂಥಾಲಯದಲ್ಲಿ ತೆರವಾಗಿರುವ ಗ್ರಂಥಾಲಯ ಕಂ ಮಾಹಿತಿ ಸಹಾಯಕರ ಹುದ್ದೆಗೆ ಮಾಸಿಕ ಕನಿಷ್ಠ ವೇತನ ಜೊತೆಗೆ ಕಾರ್ಮಿಕ ಇಲಾಖೆಯು ಕಾಲಕಾಲಕ್ಕೆ ನಿಗದಿಪಡಿಸುವ ವ್ಯತ್ಯಯವಾಗುವ ತುಟ್ಟಿ ಭತ್ಯೆಯನ್ವಯ ನೇಮಕಾತಿಗೆ ಕೋಡಂಬಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಸೇರಿದ ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಜಿಲ್ಲಾ ಪಂಚಾಯತ್‌ನ ಉಪಕಾರ್ಯದರ್ಶಿಗಳ ಕಚೇರಿಯಿಂದ ಪಡೆದು ಭರ್ತಿಮಾಡಿ ಇದೇ ಅಕ್ಟೋಬರ್ 1ರ ಸಂಜೆ 4 ಗಂಟೆಯೊಳಗೆ ನೇರವಾಗಿ ಕಚೇರಿ ವೇಳೆಯಲ್ಲಿ ಸಲ್ಲಿಸಬಹುದಾಗಿದೆ. ಈ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದವರು ದಿನಾಂಕ: 30-09-2024ಕ್ಕೆ ವಯೋನಿವೃತ್ತಿಯಿಂದ ತೆರವಾಗಲಿದ್ದು, ಈ ಕಾರಣದಿಂದ ನೇಮಕಾತಿ ನಡೆಯಲಿದೆ. ಹೆಚ್ಚಿನ ಮಾಹಿತಿಗೆ ಬಿ.ಎಂ. ರಸ್ತೆಯಲ್ಲಿರುವ ಪಂಚಾಯತ್ ಭವನದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಕಚೇರಿಯನ್ನು ಸಂಪರ್ಕಿಸುವಂತೆ ಗ್ರಾಮ ಪಂಚಾಯಿತಿ ಗ್ರಂಥಾಲಯ ಕಂ ಮಾಹಿತಿ ಸಹಾಯಕರ ಆಯ್ಕೆ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಆಗಿರುವ ಜಿಲ್ಲಾ ಪಂಚಾಯತ್‌ನ ಉಪ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂಚಾರಿ ಕುರಿಗಾಹಿಗಳ ಗುರುತಿನ ಚೀಟಿ ವಿತರಣೆಗೆ ಅರ್ಜಿ ಆಹ್ವಾನ

**ರಾಮನಗರ:** ಸಂಚಾರಿ ಕುರಿಗಾಹಿಗಳಿಗೆ ಗುರುತಿನ ಚೀಟಿ ವಿತರಿಸುವ ಯೋಜನೆಗೆ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ವತಿಯಿಂದ ರಾಮನಗರ ಜಿಲ್ಲೆಯ ಸಂಚಾರಿ ಅಥವ ವಲಸೆ ಕುರಿಗಾರರಿಂದ ಅರ್ಜಿ ಆಹ್ವಾನಿಸಲಾಗಿದೆ. ಒಂದು ಪ್ರದೇಶದಿಂದ ಇನ್ನೊಂದು ಪ್ರದೇಶಕ್ಕೆ ತಮ್ಮ ಕುರಿ ಅಥವಾ ಮೇಕೆಗಳಿಗೆ ಮೇವುಗಳನ್ನರಿಸಿ ಸಂಚರಿಸುವ ಕುರಿಗಾರರು ಈ ಯೋಜನೆಯಡಿ ಸಂಚಾರಿ ಕುರಿಗಾಹಿಗಳ ಗುರುತಿನ ಚೀಟಿ ಪಡೆಯಲು ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ ರಾಮನಗರ ಜಿಲ್ಲಾ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಸಹಾಯಕ ನಿರ್ದೇಶಕರ ಕಚೇರಿಯನ್ನು ಅಥವಾ ದೂ. ಸಂಖ್ಯೆ: 9731764326 ಅನ್ನು ಸಂಪರ್ಕಿಸುವಂತೆ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತದ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದಾಖಲಾತಿ ಸಲ್ಲಿಸಲು ಸೂಚನೆ

**ರಾಮನಗರ:** ಇಲ್ಲಿನ ಟೌನಿನ ಬೀಡಿ ಕಾರ್ಮಿಕರ ವಿವಿದ್ದೋದ್ದೇಶ ಸಹಕಾರ ಸಂಘದವರಿಗೆ ಈ ಹಿಂದೆ ರಾಜೀವ್‌ಗಾಂಧಿ ಗ್ರಾಮಿಣ ವಸತಿ ನಿಗಮದಿಂದ 13 ಎಕರೆ 21 ಗುಂಟೆ ಶಿಡ್ಲುಕಲ್ಲು ಗ್ರಾಮದ ಸರ್ವೆ ನಂ 19/1, 20/2, 21, 22/1 ಮತ್ತು 25/2ಬಿ ರ ಜಮೀನಿನಲ್ಲಿ 2005 ರಲ್ಲಿ ಬಡಾವಣೆ ನಿರ್ಮಾಣ ಮಾಡಿ 489 ಪಲಾನುಭವಿಗಳಿಗೆ ಹಕ್ಕು ಪತ್ರ ವಿತರಿಸಲಾಗಿರುತ್ತದೆ. ಈ ಬಗ್ಗೆ ಮುಂದಿನ ಕ್ರಮವಹಿಸಲು ಸಂಬಂಧಪಟ್ಟ ಫಲಾನುಭವಿಗಳು ಈ ಪ್ರಕಟಣೆ ಹೊರಡಿಸಿದ ದಿನಾಂಕದಿಂದ 30 ದಿನಗಳೊಳಗೆ ನಗರಸಭಾ ಕಾರ್ಯಾಲಯ ಕಚೇರಿಗೆ ಸಂಬಂಧಪಟ್ಟ ದಾಖಲಾತಿಗಳನ್ನು ಸಲ್ಲಿಸುವಂತೆ ಕೋರಲಾಗಿದೆ. ಈ ವಿಷಯಕ್ಕೆ ಸಂಬಂಧಪಟ್ಟಂತೆ ಸಾರ್ವಜನಿಕ ಆಕ್ಷೇಪಣೆಗಳು ಇದ್ದಲ್ಲಿ ಆಕ್ಷೇಪಣೆಗಳನ್ನು ಸಮರ್ಥಿಸುವ ದಾಖಲಾತಿಗಳೊಂದಿಗೆ ರಾಮನಗರ ನಗರಸಭಾ ಕಾರ್ಯಾಲಯಕ್ಕೆ 30 ದಿನಗಳೊಳಗೆ ಸಲ್ಲಿಸುವಂತೆ ಮತ್ತು ಕೊನೆಯ ದಿನಾಂಕದ ನಂತರ ಬಂದ ಯಾವುದೇ ಆಕ್ಷೇಪಣೆಗಳನ್ನು ಸ್ವೀಕರಿಸುವುದಿಲ್ಲ ಎಂದು ರಾಮನಗರ ನಗರಸಭೆ ಪೌರಾಯುಕ್ತರು ತಿಳಿಸಿದ್ದಾರೆ.

## 3 ದಿನಗಳ ಕಮ್ಮಟ; ಅರ್ಜಿ ಆಹ್ವಾನ

**ಬೆಂಗಳೂರು:** ಕರ್ನಾಟಕ ಸಾಹಿತ್ಯ ಅಕಾಡೆಮಿಯು ಕರ್ನಾಟಕ ಜಾನಪದ ವಿಶ್ವವಿದ್ಯಾಲಯ ಗೊಟಗೋಡಿ ಹಾವೇರಿ ಜಿಲ್ಲೆ ಇವರ ಸಹಯೋಗದಲ್ಲಿ ಗಿರಿಜನ ಉಪಯೋಜನೆಯಡಿ ''ಕನ್ನಡ ಸಾಹಿತ್ಯ ಮತ್ತು ಸಾಂವಿಧಾನಿಕ ಮೌಲ್ಯಗಳು'' ಎಂಬ ಹೆಸರಿನಲ್ಲಿ 3 ದಿನಗಳ ಕಮ್ಮಟವನ್ನು ಅಕ್ಟೋಬರ್ ಕೊನೆಯ ವಾರದಲ್ಲಿ ಕರ್ನಾಟಕ ಜಾನಪದ ವಿಶ್ವವಿದ್ಯಾಲಯ ಗೊಟಗೋಡಿ, ಹಾವೇರಿ ಜಿಲ್ಲೆಯಲ್ಲಿ ನಡೆಸಲು ಉದ್ದೇಶಿಸಿದ್ದು, ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತರು 20 ರಿಂದ 45 ವರ್ಷ ವಯಸ್ಸುಳ್ಳ ಪರಿಶಿಷ್ಟ ಪಂಗಡಕ್ಕೆ ಸೇರಿದ ರಾಜ್ಯದ ಎಲ್ಲಾ ಭಾಗದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಅಕ್ಟೋಬರ್ 8 ಕೊನೆಯ ದಿನಾಂಕವಾಗಿದೆ. ಅರ್ಜಿ ನಮೂನೆ ಹಾಗೂ ವಿವರಗಳನ್ನು ಕರ್ನಾಟಕ ಸಾಹಿತ್ಯ ಅಕಾಡೆಮಿಯ ಜಾಲತಾಣ http://karnatakasahithyaacademy.org ನಿಂದ ಪಡೆದುಕೊಳ್ಳಬಹುದಾಗಿದೆ ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿಯ ರಿಜಿಸ್ಟ್ರಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶೇಷ ಆಂದೋಲನ ಕಾರ್ಯಕ್ರಮ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ತಾಲ್ಲೂಕಿನ ರೈತರು ಕೀಟನಾಶಕಗಳನ್ನು ಶಿಫಾರಸ್ಸಿಗಿಂತ ಹೆಚ್ಚಾಗಿ ಬಳಸುತ್ತಿರುತ್ತಾರೆ. 6 ತಿಂಗಳ ಮುಂಚಿತವಾಗಿ ಕೃಷಿ ಇಲಾಖೆಯ ಸಿಬ್ಬಂದಿಯ ಸಹಕಾರದಿಂದ ತಾಲ್ಲೂಕಿನ ಕೀಟನಾಶಕ ಮಾರಾಟ ಮಳಿಗೆಗಳಲ್ಲಿ ಮಾರಾಟ ಮಾಡುವ ಕೀಟನಾಶಕಗಳು ಹಾಗೂ ಶಿಫಾರಸ್ಸು ಮಾಡುವ ವಿವರಗಳನ್ನು ಸರ್ವೆ ಮಡಲಾಗಿರುತ್ತದೆ. ಸರ್ವೆವರದಿಯನ್ವಯ ಎಲ್ಲಾ ರೈತರು ಕೀಟನಾಶಕಗಳನ್ನು ಶಿಫಾರಸ್ಸಿಗಿಂತ ಹೆಚ್ಚಾಗಿ ಬಳಸುತ್ತಿರುತ್ತಾರೆ. ವರದಿಯ ಪ್ರಕಾರ ಜಿಲ್ಲೆಯ ರೈತರ ಕೀಟನಾಶಕ ಬಳಕೆ ಪ್ರಮಾಣವು ರಾಷ್ಟ್ರೀಯ ಸೂಚ್ಯಂಕಕ್ಕಿಂತ ನಾಲ್ಕು ಪಟ್ಟು ಹೆಚ್ಚಾಗಿ ಬಳಸುತ್ತಿರುತ್ತಾರೆ. ಈ ವಿಷಯವನ್ನು ಮನಗಂಡು ಕೃಷಿ ಇಲಾಖೆ ಮೊದಲ ಹಂತದಲ್ಲಿ ಕೃಷಿ ಪರಿಕರ ಮಾರಾಟಗಾರರಿಗೆ ಕೃಷಿ ವಿಜ್ಞಾನಿಗಳ ಮೂಲಕ ತರಬೇತಿ ನೀಡಿ ಎಲ್ಲಾ ಬೆಳೆಗಳಿಗೆ ಶಿಫಾರಸ್ಸಿನಂತೆ ಕೀಟನಾಶಕಗಳನ್ನು ವಿತರಿಸಲು ಸೂಚಿಸಲಾಗಿರುತ್ತದೆ. ಮುಂದುವರೆದು ರೈತರಿಗೆ ಹೋ ಹಂತದಲ್ಲಿ ಕೀಟನಾಶಕಗಳನ್ನು ಶಿಫಾರಸ್ಸಿನಂತೆ ಬಳಸಲು ವಿಶೇಷ ಆಂದೋಲನ ಹಮ್ಮಿಕೊಂಡು ಕೃಷಿ ವಿಜ್ಞಾನಿಗಳ ಮೂಲಕ ಅರಿವು ಮೂಡಿಸಲಾಗುತ್ತಿದೆ.ಇದರ ಮೊದಲ ಭಾಗವಾಗಿ ಕಸಬಾ ಹೋಬಳಿಯ ಆವಲಗುರ್ಕಿ ಗ್ರಾಮದಲ್ಲಿ ಶಿಫಾರಸ್ಸಿನಂತೆ ಹಾಗೂ ಸುರಕ್ಷಿತ ಕೀಟನಾಶಕಗಳ ಬಳಕೆ ವಿಶೇಷ ಆಂದೋಲನ ಹಮ್ಮಿಕೊಳ್ಳಲಾಯಿತು.

ಮಾತನಾಡಿದ ಸಹಾಯಕ ಕೃಷಿ ನಿರ್ದೇಶಕರಾದ ಮುನಿರಾಜು ಸಿ ರವರು ಎಲ್ಲಾ ರೈತರು ಶಿಫಾರಸ್ಸಿಗಿಂತ ಹೆಚ್ಚಾಗಿ ಪೀಡೆನಾಶಕಗಳನ್ನು ಬಳಸುತ್ತಿರುವುದು ಇಲಾಖೆಯ ಸರ್ವೇ ಮೂಲಕ ದೃಡಪಟ್ಟಿರುತ್ತದೆ.ರೈತರು ತುರ್ತಾಗಿ ರೋಗ ಮತ್ತು ಕೀಟಗಳನ್ನು ಹತೋಟಿ ಮಾಡಲು ಶಿಫಾರಸ್ಸಿಗಿಂತ ಹೆಚ್ಚಾಗಿ ಅವೈಜ್ಞಾನಿಕ ರೀತಿಯಲ್ಲಿ ಬಳಸುತ್ತಿರುತ್ತಾರೆ. ಇದರಿಂದ ಮಣ್ಣು, ವಾತಾವರಣ ಹಾಗೂ ಆಹಾರ ಪದಾರ್ಥಗಳು ವಿಷಯುಕ್ತವಾಗುತ್ತಿದ್ದು, ಇತ್ತೀಚೆ ಮನುಷ್ಯರಲ್ಲಿ ರೋಗನಿರೋಧಕ ಶಕ್ತಿ ಕಡಿಮೆಯಾಗುತ್ತಿದೆ. ಮುಂದಿನ ಪೀಳಿಗೆಗಾಗಿ ವಾತಾವರಣ ಮತ್ತು ಮಣ್ಣು ಆರೋಗ್ಯದಲ್ಲಿ ಸುಸ್ಥಿರತೆ ಕಾಪಾಡಿಕೊಳ್ಳುವುದು ಅವಶ್ಯವಿರುವುದರಿಂದ ವಿಜ್ಞಾನಿಗಳ ಶಿಫಾರಸ್ಸಿನಂತೆ ಹಾಗೂ ಸುರಕ್ಷಿತ ಕ್ರಮಗಳನ್ನು ಅನುಸರಿಸಿ ಕೀಟನಾಶಕಗಳ ಬಳಕೆ ಮಾಡಲು ವಿನಂತಿಸಿದರು. ಕೃಷಿ ವಿಜ್ಞಾನ ಕೇಂದ್ರದ ಕೃಷಿ ವಿಜ್ಞಾನಿಗಳಾದ ಡಾ. ಸ್ವಾತಿ ರವರು ತಾಲ್ಲೂಕಿನಲ್ಲಿ ಬೆಳೆಯುವ ಪ್ರಮುಖ ಬೆಳೆಗಳಾದ ದ್ರಾಕ್ಷಿ, ದಾಳಿಂಬೆ, ಆಲೂಗಡ್ಡೆ, ಟಮೋಟೋ, ರೋಝ್, ಸೇವಂತಿಗೆ ಬೇಳೆಗಳಲ್ಲಿ ಕಾಣಿಕೊಳ್ಳುವ ಪ್ರಮುಖ ರೋಗ ಮತ್ತು ಕೀಟಗಳ ಹತೋಟಿ ಕ್ರಮಗಳ ಬಗ್ಗೆ ತಾಂತ್ರಿಕ ಮಾಹಿತಿ ನೀಡಿದರು. ಪ್ರಮುಖವಾಗಿ ರೈತರು ಕೇವಲ ಕೀಟನಾಶಕಗಳಲ್ಲದೆ ಸಮಗ್ರ ಪೀಡೆನಾಶಕ ಕ್ರಮಗಳನ್ನು ಅನುಸರಿಸಿದರೆ ರೋಗ ಮತ್ತು ಕೀಟಗಳನ್ನು ಪರಿಣಾಮಕಾರಿಯಾಗಿ ಕಡಿಮೆ ಖರ್ಚಿನಲ್ಲಿ ಹತೋಟಿ ಮಾಡಬಹುದು ಎಂದು ತಿಳಿಸಿದರು. ಬಾಯರ್ ಹಾಗೂ ಸುಮಿಟೋಮೋ ಸಂಸ್ಥೆಯ ಪ್ರತಿನಿಧಿಗಳಾದ ಮಾರ್ಟಿನ್ ಹಾಗೂ ಬಸವರಾಜು,ಪುನೀತ್ ರವರುಗಳು ವಿಜ್ಞಾನಿಗಳ ಶಿಫಾರಸ್ಸಿನಂತೆ ಹಾಗೂ ಸುರಕ್ಷಿತ ಕ್ರಮಗಳನ್ನು ಅನುಸರಿಸಿ ಕೀಟನಾಶಕಗಳ ಬಳಕೆ ಮಾಡಲು ತಿಳಿಸಿದರು. ಆವಲಗುರ್ಕಿ ವ್ಯವಸಾಯ ಸೇವಾಸಹಕಾರ ಸಂಘದ ಅಧ್ಯಕ್ಷರಾದ ಜಯರಾಮರೆಡ್ಡಿ ಭಾಗವಹಿಸಿದ್ದರು.

### ನಗರಸಭೆ ಅಧ್ಯಕ್ಷ ಪ್ರಕಾಶ್ ಬಣ್ಣನೆ : ದಾಸೋಹಹುಣ್ಣಿಮೆಯಲ್ಲಿ ಅನ್ನಸಂತರ್ಪಣೆ

# ಕಾಯಕ-ದಾಸೋಹದ ಮೇರುಪರ್ವತ ಸಿದ್ದಗಂಗಾಶ್ರೀ



**ಮಂಡ್ಯ:** ಕರ್ನಾಟಕರತ್ನ, ನಡೆದಾಡಿದ ದೇವರು, ತ್ರಿವಿಧ ದಾಸೋಹಮೂರ್ತಿ ಪರಮಪೂಜ್ಯ ಡಾ.ಶ್ರೀ ಶಿವಕುಮಾರಮಹಾಶಿವಯೋಗಿಗಳು ಕಾಯಕ ಮತ್ತು ದಾಸೋಹವನ್ನು ಇಡೀ ವಿಶ್ವಕ್ಕೆ ಪರಿಚಯಿಸಿದ ಮಹಾನ್ ಸಂತ ಎಂದು ನಗರಸಭೆ ಅಧ್ಯಕ್ಷ ಎಂ.ಪಿ.ಪ್ರಕಾಶ್ (ನಾಗೇಶ್) ಬಣ್ಣಿಸಿದರು.

ನಗರದ ಸ್ವರ್ಣಸಂದ್ರ ಬಡಾವಣೆಯ ಪರಮಪೂಜ್ಯ ಸಿದ್ದಗಂಗಾಶ್ರೀಗಳ ಉದ್ಯಾನವನದಲ್ಲಿ ಕಾಯಕಯೋಗಿ ಫೌಂಡೇಶನ್ ಹಾಗೂ ಸಿದ್ದಗಂಗಾಶ್ರೀ ಸೇವಾ ಸಮಿತಿ ವತಿಯಿಂದ ಪ್ರತಿತಿಂಗಳು ನಡೆಸುವ 'ದಾಸೋಹ ಹುಣ್ಣಿಮೆ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಹಸಿದು ಬಂದವರಿಗೆ ಅನ್ನ ನೀಡುವುದೇ ಧರ್ಮ ಎಂಬ ಸಿದ್ಧಾಂತದಲ್ಲಿ ನಂಬಿಕೆ ಇಟ್ಟುಕೊಂಡಿದ್ದ ಸಿದ್ದಗಂಗಾಶ್ರೀಗಳು ಯಾವುದೇ ಜಾತಿ, ಧರ್ಮ, ವರ್ಣ, ಬೇಧಗಳೆನ್ನದೆ ಸರ್ವರಿಗೂ ಉಚಿತವಾಗಿ ಶಿಕ್ಷಣ, ಆಸರೆ, ದಾಸೋಹದಂತಹ ಮಹತ್ತರವಾದ ಸೇವೆಯನ್ನು ತಮ್ಮ 111ವರ್ಷಗಳ ಕಾಲ ನಡೆಸಿದ ಮೇರುಪರ್ವತವಾಗಿದ್ದಾರೆ. ಸ್ವಾಮೀಜಿಯವರ ಆದರ್ಶಗಳು ಸಮಾಜಕ್ಕೆ ದಾರಿದೀಪವಾಗಬೇಕಿದೆ ಎಂದರು.

ಮಂಡ್ಯ ನಗರದಲ್ಲಿ ಸ್ವಾಮೀಜಿಯವರ ಹೆಸರು ಹಸಿರಿನಿಂದ ಕಂಗೊಳಿಸುವಂತೆ ಉದ್ಯಾನವನ್ನು ನಿರ್ಮಾಣ ಮಾಡಿ ನಿರ್ವಹಣೆ ಮಾಡುತ್ತಿರುವ ಕಾಯಕಯೋಗಿ ಫೌಂಡೇಶನ್ ಪ್ರತಿ ತಿಂಗಳ ಹುಣ್ಣಿಮೆಯ ದಿವಸದಂದು ದಾಸೋಹವನ್ನು ನಡೆಸಿ ಸ್ವಚ್ಛತೆ ಹಾಗೂ ಹಸಿರೀಕರಣದ ಜಾಗೃತಿ ಮೂಡಿಸುತ್ತಿರುವ ಕಾರ್ಯ ಶ್ಲಾಘನೀಯ ಎಂದರು. ನಗರಸಭೆ ಉಪಾಧ್ಯಕ್ಷ ಎಂ.ಪಿ.ಅರುಣ್‌ಕುಮಾರ್ ಮಾತನಾಡಿ, ತ್ರಿವಿಧ ದಾಸೋಹ ಎಂದರೆ ಸ್ವಾಮೀಜಿ ಎನ್ನುವಷ್ಟರ ಮಟ್ಟಿಗೆ ಸಿದ್ದಗಂಗಾಶ್ರೀಗಳು ಸರ್ವ ಜನಾಂಗದವರಿಗೂ ಶಿಕ್ಷಣದ ಜೊತೆಯಲ್ಲೇ ಸಂಸ್ಕಾರವನ್ನು ಕಲಿಸಿಕೊಟ್ಟ ರಾಷ್ಟ್ರಸಂತರಾಗಿದ್ದಾರೆ. ಕೋಟ್ಯಾಂತರ ಜನರ ಭಾವಕೋಶದಲ್ಲಿ ನೆಲೆಯಾಗಿರುವ ಪರಮಪೂಜ್ಯರು ಕಾಯಕದ ಮೂಲಕ ದುಡಿಮೆ ಹಾಗೂ ದಾಸೋಹದಿಂದ ಅನ್ನದ ಮಹತ್ವವನ್ನು ತಿಳಿಸಿಕೊಟ್ಟ ಮಾತೃಹೃದಯಿ ಎಂದು ಬಣ್ಣಿಸಿದರು.

ಕಾಯಕಯೋಗಿ ಫೌಂಡೇಶನ್ ಅಧ್ಯಕ್ಷ ಎಂ.ಶಿವಕುಮಾರ್ ಮಾತನಾಡಿ, ಕಳೆದ ಹದಿನೈದು ವರ್ಷಗಳಿಂದ ಪರಮಪೂಜ್ಯರ ಉದ್ಯಾನವನದಲ್ಲಿ ಎಲ್ಲಾ ಬಗೆಯ ಔಷಧೀಯ ಸಸಿಗಳು, ಅಲಂಕಾರಿಕ ಹಾಗೂ ಅರಣ್ಯದ ವಿವಿಧ ಬಗೆಯ ಮರಗಳನ್ನು ಪೋಷಣೆ ಮಾಡಿ ಹಿರಿಯ ನಾಗರೀಕರು ಹಾಗೂ ಸಾರ್ವಜನಿಕರಿಗೆ ನೆಮ್ಮದಿಯ ಹಸಿರಿನ ತಾಣವನ್ನಾಗಿಸಿದ್ದು ವಾಯುವಿಹಾರಿಗಳಿಗೆ ಅಗತ್ಯವಾಗಿರುವ ಧ್ಯಾನಮಂಟಪವನ್ನು ನಿರ್ಮಾಣ ಮಾಡಿಕೊಟ್ಟಲ್ಲಿ ಯೋಗಾಸನ ಅಭ್ಯಾಸ ಮಾಡಲು ಅನುಕೂಲವಾಗುತ್ತದೆ. ಈ ನಿಟ್ಟಿನಲ್ಲಿ ನಗರಸಭೆ ಅಧ್ಯಕ್ಷರು ಹೆಚ್ಚಿನ ಅನುದಾನ ಬಿಡುಗಡೆಗೊಳಿಸಿ ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿದರು. ದಾಸೋಹ ದಾನಿಗಳಾದ ವೀರಾಜಿಪುರದ ಮಹದೇವಪ್ಪ, ಕುಮಾರ್, ಸಮಾಜಸೇವಕ ರವಿತೇಜ್ ಅವರನ್ನು ಅಭಿನಂದಿಸಲಾಯಿತು.

ಸಿದ್ದಗಂಗಾಶ್ರೀ ಸೇವಾ ಸಮಿತಿ ಅಧ್ಯಕ್ಷ ಎಂ.ಆರ್.ಮಂಜುನಾಥ, ಲಿಂಗಾಯತಮಹಾಸಭಾ ಅಧ್ಯಕ್ಷ ಎಂ.ಎಸ್.ಮಂಜುನಾಥ್, ವೀರಶೈವ ವಿದ್ಯಾರ್ಥಿನಿಲಯದ ಟ್ರಸ್ಟಿ ಮಲ್ಲಿಕಾರ್ಜುನಯ್ಯ, ಹಿಂದುಳಿದ ವರ್ಗಗಳ ಮುಖಂಡ ಎಲ್.ಸಂದೇಶ್, ಜಿ.ಮಹಾಂತಪ್ಪ, ಬಿ.ಎಸ್.ಅನುಪಮಾ, ಶಿವರುದ್ರಪ್ಪ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಸಂಜೆ ಟಿಪ್ಸ್

## ಕರ್ನಾಟಕದ ಹಳ್ಳಿಹಳ್ಳಿಗಳಲ್ಲೂ ಜಿಯೋ ಸಂಪರ್ಕ ಕ್ರಾಂತಿ

ಇದೀಗ ಕರ್ನಾಟಕದ ದೂರ ದೂರದ ಪ್ರದೇಶಗಳಲ್ಲಿಯೂ ರಿಲಯನ್ಸ್ ಜಿಯೋದ ನೆಟ್ ವರ್ಕ್ ದೊರೆಯುತ್ತದೆ ಎಂಬುದನ್ನು ಘೋಷಿಸಲಾಗಿದೆ. ಡಿಜಿಟಲ್ ವಿಭಜನೆಯನ್ನು ತೊಡೆದು ಹಾಕುವ ನಿಟ್ಟಿನಲ್ಲಿ ಇದು ಕಾರ್ಯತಂತ್ರ ಕ್ರಮವಾಗಿದೆ. ಶಿವಮೊಗ್ಗ ಜಿಲ್ಲೆಯ ಗಾಜನೂರು, ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ, ಹೂಗ್ಯಂನಲ್ಲಿ ಸಂಪರ್ಕ ದೊರೆಯುವಂತೆ ಮಾಡುವಲ್ಲಿ ಜಿಯೋ ಯಶಸ್ಸು ಕಂಡಿದೆ. ಇದಕ್ಕೂ ಮುನ್ನ ಈ ಪ್ರದೇಶಗಳಲ್ಲಿ ಸಂವಹನ ಮೂಲಸೌಕರ್ಯಕ್ಕೆ ಕೊರತೆ ಇತ್ತು. ಪರಿಸರ ಮತ್ತು ಭೌಗೋಳಿಕ ಸವಾಲುಗಳನ್ನು ದಾಟುವ ಮೂಲಕವಾಗಿ ಜಿಯೋ ತನ್ನ ದೃಢವಾದ 4ಜಿ ಮತ್ತು 5ಜಿ ನೆಟ್ ವರ್ಕ್ ಅನ್ನು ರಾಜ್ಯದಾದ್ಯಂತ 322ಕ್ಕೂ ಹೆಚ್ಚು ತಾಲ್ಲೂಕುಗಳಿಗೆ ವಿಸ್ತರಿಸಿದೆ. ಈ ತಾಲ್ಲೂಕುಗಳಲ್ಲಿ ಇರುವ ಅನೇಕ ಹಳ್ಳಿಗಳು ಈಗ ಜಿಯೋ ನೆಟ್ವರ್ಕ್ ನಿಂದಾಗಿ ಮಾತ್ರ ಪ್ರಯೋಜನ ಪಡೆಯುತ್ತವೆ. ಇದರೊಂದಿಗೆ ಸಾಮಾಜಿಕ ಆರ್ಥಿಕ ಅಭಿವೃದ್ಧಿಗೆ ದಾರಿ ಮಾಡಿಕೊಡುವ ಪರಿವರ್ತನೆ ಬದಲಾವಣೆಯನ್ನು ಗುರುತಿಸಬಹುದಾಗಿದೆ. ಈ ಪ್ರದೇಶಗಳಲ್ಲಿ ವಾಸವಿರುವವರು ಈಗಾಗಲೇ ಸಕಾರಾತ್ಮಕ ಪರಿಣಾಮಗಳನ್ನು ಅನುಭವಿಸುತ್ತಿದ್ದಾರೆ. ಅವು ಯಾವುವು ಅಂತ ನೋಡುವುದಾದರೆ, ಶಿಕ್ಷಣಕ್ಕೆ ಸಂಬಂಧಿಸಿದಂತೆ ಹೆಚ್ಚೆಚ್ಚು ಸಂಪರ್ಕ ವ್ಯವಸ್ಥೆಗಳಾಗಿವೆ. ಮಕ್ಕಳು ಈಗ ನೆಟ್ ವರ್ಕ್ ಸಂಪರ್ಕಕ್ಕಾಗಿ ದೂರದ ಸ್ಥಳಗಳಿಗೆ ಪ್ರಯಾಣ ಮಾಡಬೇಕು ಎಂಬ ಪರಿಸ್ಥಿತಿ ಇಲ್ಲ. ಅದಕ್ಕಾಗಿ ಪೋಷಕರು ಜಿಯೋ ನೆಟ್ ವರ್ಕ್ ಗೆ ಕೃತಜ್ಞತೆಗಳನ್ನು ಹೇಳುತ್ತಾರೆ. ಇನ್ನು ಯುವಜನರಿಗೆ ವರ್ಕ್ ಫ್ರಮ್ ಹೋಮ್ ಮಾಡುವುದಕ್ಕೆ ಅನುಕೂಲವಾಗಿದ್ದು, ಇದರಿಂದ ಅವಕಾಶಗಳು ತೆರೆದುಕೊಂಡಿವೆ. ಶಿಕ್ಷಣ, ಆರೋಗ್ಯ ರಕ್ಷಣೆ ಮತ್ತು ಆನ್ ಲೈನ್ ಸೇವೆಗಳನ್ನು ಪಡೆದುಕೊಳ್ಳುವುದಕ್ಕೆ ದೊಡ್ಡ ಮಟ್ಟದ ಸುಧಾರಣೆಯಾಗಿದ್ದು, ದೇಶ- ವಿದೇಶಗಳಲ್ಲಿ ಇರುವಂಥ ಸಂಬಂಧಿಕರ ಜೊತೆಗಿನ ಸಂವಹನ ನಡೆಸುವುದಕ್ಕೂ ಈಗ ಯಾವುದೇ ತೊಂದರೆಗಳಿಲ್ಲ. ಕರ್ನಾಟಕದಲ್ಲಿ ಹೀಗೆ ಜಿಯೋ ತನ್ನ ನೆಟ್ ವರ್ಕ್ ವಿಸ್ತರಣೆ ಮಾಡುತ್ತಿರುವಂತೆಲ್ಲ ರಾಜ್ಯದಾದ್ಯಂತ ತಡೆರಹಿತ ಸಂಪರ್ಕ ಸಾಧ್ಯವಾಗುತ್ತಿದೆ. ದೂರದ ಪ್ರದೇಶಗಳಲ್ಲಿಯೂ ಜಿಯೋದ ವ್ಯಾಪಕ ಮತ್ತು ವಿಶ್ವಾಸಾರ್ಹ 4ಜಿ/5ಜಿ ನೆಟ್ವರ್ಕ್ ಆನಂದಿಸಬಹುದಾಗಿದೆ. ಜಿಯೋದ ಪ್ರೀಮಿಯಂ ಅಪ್ಲಿಕೇಷನ್ಗಳಾದ ಜಿಯೋಟಿವಿ ಮತ್ತು ಜಿಯೋಸಿನಿಮಾದಂಥದ್ದರ ಮನರಂಜನೆಯನ್ನು ಪಡೆಯಬಹುದಾಗಿದೆ. ಜಿಯೋದ ಸಿಮ್ ಕಾರ್ಡ್ಗಳು ರಾಜ್ಯದಾದ್ಯಂತ ಸುಲಭವಾಗಿ ದೊರೆಯುತ್ತಿವೆ. ಇನ್ನು ಸರಳ ಮತ್ತು ಅನುಕೂಲಕರ ಸೇರ್ಪಡೆಯೂ ಸಾಧ್ಯವಿದೆ. ತುಂಬ ಸರಳವಾದ ಪ್ರಕ್ರಿಯೆಯನ್ನು ಅನುಸರಿಸಿ, ಜಿಯೋ ಚಂದಾದಾರರಾಗಬಹುದು.

## ಖಾರದ ಅವಲಕ್ಕಿ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

**ಗಟ್ಟಿ ಅವಲಕ್ಕಿ-3ಕಪ್, 1 ಕಪ್- ಕಡಲೇಬೀಜ, 1-ಕಪ್ -ಹುರಿಕಡಲೆ, ಬೆಳ್ಳುಳ್ಳಿ-15 ಎಸಳು ಸ್ವಲ್ಪ ಜಜ್ಜಿಕೊಂಡಿದ್ದು, 15-ಬ್ಯಾಡಗಿ ಮೆಣಸು, ½ ಕಪ್ -ಒಣಕೊಬ್ಬರಿ ಚಿಕ್ಕದ್ದಾಗಿ ಕತ್ತರಿಸಿಕೊಂಡಿರಬೇಕು, 2 ಚಮಚ-ಅಚ್ಚ ಖಾರದ ಪುಡಿ,1 ಟಿ ಸ್ಪೂನ್ -ಅರಿಶಿನ, ಚಿಟಿಕೆ-ಇಂಗು, 1 ಟೀ ಸ್ಪೂನ್ -ಸಾಸಿವೆ, ಕರಿಬೇವು-4 ದಂಟು, ಎಣ್ಣೆ-ಕರಿಯಲು, ಉಪ್ಪು-ರುಚಿಗೆ ತಕ್ಕಷ್ಟು.**

### ಮಾಡುವ ವಿಧಾನ

ಮಾಡುವ ವಿಧಾನ: ಮೊದಲಿಗೆ ಅಗಲವಾದ ಒಂದು ಬಾಣಲೆಗೆ ಕರಿಯಲು ಬೇಕಾದಷ್ಟು ಎಣ್ಣೆ ಹಾಕಿ ಗ್ಯಾಸ್ ಮೇಲೆ ಇಡಿ. ಎಣ್ಣೆ ಸರಿಯಾಗಿ ಬಿಸಿಯಾಗಲಿ. ಸ್ವಲ್ಪ ಸ್ವಲ್ಪವೇ ಅವಲಕ್ಕಿಯನ್ನು ಎಣ್ಣೆ ಬಾಣಲೆಗೆ ಹಾಕಿ ಎತ್ತಿಟ್ಟುಕೊಳ್ಳಿ. ನಂತರ ಕಡಲೇಕಾಯಿ ಬೀಜವನ್ನು ಎಣ್ಣೆಯಲ್ಲಿ ಹುರಿದುಕೊಳ್ಳಿ. ಇದನ್ನು ಅವಲಕ್ಕಿ ಹುರಿದಿಟ್ಟುಕೊಂಡ ಪಾತ್ರೆಗೆ ಹಾಕಿ. ಇದಾದ ನಂತರ ಬೆಳ್ಳುಳ್ಳಿಯನ್ನು ಹುರಿದು ಎತ್ತಿಟ್ಟುಕೊಳ್ಳಿ. ಇದಾದ ನಂತರ ಒಣಕೊಬ್ಬರಿಯನ್ನು, ಬ್ಯಾಡಗಿ ಮೆಣಸು, ಹುರಿಕಡಲೆ, ಕರಿಬೇವು ಎಲ್ಲವನ್ನು ಬೇರೆ ಬೇರೆಯಾಗಿ ಹುರಿದುಕೊಂಡು ಇದನ್ನು ಅವಲಕ್ಕಿ ಇರುವ ಪಾತ್ರೆಗೆ ಹಾಕಿ. ನಂತರ ಅವಲಕ್ಕಿಗೆ ಖಾರದ ಪುಡಿ, ಉಪ್ಪು, ಅರಿಶಿನ, ಸೇರಿಸಿ. ನಂತರ ಗ್ಯಾಸ್ ಮೇಲೆ ಒಗ್ಗರಣೆ ಮಾತ್ರೆ ಇಟ್ಟು ಅದಕ್ಕೆ 1 ಚಮಚ ಎಣ್ಣೆ ಹಾಕಿ ಅದಕ್ಕೆ ಸಾಸಿವೆ, ಇಂಗು ಹಾಕಿ ಹುರಿದುಕೊಂಡು ಈ ಒಗ್ಗರಣೆಯನ್ನು ಅವಲಕ್ಕಿಗೆ ಹಾಕಿ ಚೆನ್ನಾಗಿ ಮಿಶ್ರಣ ಮಾಡಿ. ಗಾಳಿಯಾಡದ ಡಬ್ಬದಲ್ಲಿ ತುಂಬಿಸಿಡಿ.

## ಗುಡ್ ನ್ಯೂಸ್ ನೀಡಿದ ನಟಿ ಸಮಂತಾ!



ಟಾಪ್ ಹೀರೋಯಿನ್ ಆಗಿ ಮಿಂಚಿದ್ದ ಸಮಂತಾ, ನಾಯಕ ನಾಗ ಚೈತನ್ಯ ಅವರನ್ನು ಪ್ರೀತಿಸಿ ಮದುವೆಯಾದರು. ಕೆಲವು ವರ್ಷಗಳ ಕಾಲ ಚೆನ್ನಾಗಿಯೇ ಸಾಗಿದ ಇವರ ಸಂಸಾರದಲ್ಲಿ ಭಿನ್ನಾಭಿಪ್ರಾಯಗಳು ಉಂಟಾದ ನಂತರ ದಂಪತಿಗಳು ವಿಚ್ಛೇದನ ಪಡೆದರು. ವಿಚ್ಛೇದನದ ನಂತರ ಸಮಂತಾ ಅವರನ್ನು ಆರೋಗ್ಯ ಸಮಸ್ಯೆ ಕಾಡುತ್ತಿತ್ತು. ಸಮಂತಾ ಕೆಲ ದಿನಗಳಿಂದ ಮೈಯೋಸಿಟಿಸ್ ನಿಂದ ಬಳಲುತ್ತಿದ್ದರು. ಇದರಿಂದಾಗಿ ಕೆಲಕಾಲ ಸಿನಿಮಾದಿಂದ ದೂರ ಉಳಿದಿದ್ದರು. ವಿಜಯ್ ದೇವರಕೊಂಡ ಜೊತೆಗಿನ 'ಖುಷಿ' ಚಿತ್ರದ ನಂತರ ಸಮಂತಾ ಪ್ರೇಕ್ಷಕರ ಮುಂದೆ ಬಂದಿರಲಿಲ್ಲ. ಆದರೆ ಸದ್ಯ ಆರೋಗ್ಯದಿಂದ ಚೇತರಿಸಿಕೊಂಡಿರುವ ಸಮಂತಾ ಸರಣಿ ಚಿತ್ರಗಳಿಗೆ ಗ್ರೀನ್ ಸಿಗ್ನಲ್ ನೀಡುತ್ತಿದ್ದಾರೆ. ಬಾಲಿವುಡ್ ವೆಬ್ ಸೀರೀಸ್ ಹನಿ ಬನ್ನಿಯಲ್ಲಿ ಸಮಂತಾ ನಾಯಕಿಯಾಗಿ ನಟಿಸುತ್ತಿದ್ದಾರೆ. ಈ ವೆಬ್ ಸರಣಿಯಲ್ಲಿ ವರುಣ್ ಧವನ್ ನಾಯಕನಾಗಿ ನಟಿಸುತ್ತಿದ್ದಾರೆ. ಇದಲ್ಲದೇ ಸಮಂತಾ ಮತ್ತೊಂದು ಬಾಲಿವುಡ್ ಸಿನಿಮಾದಲ್ಲಿ ನಟಿಸುತ್ತಿದ್ದಾರೆ.

ಹೌದು ನಟಿ ಇತ್ತೀಚೆಗಷ್ಟೇ ಮತ್ತೊಂದು ಸಿನಿಮಾ ಅನೌನ್ಸ್ ಮಾಡಿದ್ದಾರೆ. ಕನಸು ಕಾಣುವುದನ್ನು ಎಂದಿಗೂ ನಿಲ್ಲಿಸಬೇಡಿ. ಸ್ವಲ್ಪ ಸಮಯದ ನಂತರ ಚಿತ್ರದ ಸೆಟ್ಗೆ ಮರಳಲು ಸಂತೋಷವಾಗಿದೆ,'' ಮತ್ತು ಕಾಫಿ ಕಪ್ ಮತ್ತು ಪುಸ್ತಕದೊಂದಿಗೆ ಫೋಟೋವೊಂದನ್ನು ಹಂಚಿಕೊಂಡಿದ್ದಾರೆ. ಆದರೆ ಅವರು ತಮ್ಮ ಹೊಸ ಚಿತ್ರದ ಬಗ್ಗೆ ಏನನ್ನೂ ಬಹಿರಂಗಪಡಿಸಿಲ್ಲ. ಅವರ ಅಭಿಮಾನಿಗಳು ಸಮಂತಾ ಯಾರ ಸಿನಿಮಾದಲ್ಲಿ ನಟಿಸುತ್ತಾರೆ ಎಂದು ಕೇಳುತ್ತಿದ್ದಾರೆ. ಒಟ್ಟಿನಲ್ಲಿ ಸಮಂತಾ ಮತ್ತೆ ಸಿನಿಮಾಗೆ ಬಂದಿರುವುದನ್ನು ಕೇಳಿ ಅವರ ಫ್ಯಾನ್ಸ್ ಖುಷಿಯಾಗಿದ್ದಾರೆ.

## ಆರೋಗ್ಯಕರ ಜೀವನಕ್ಕೆ ಸಾಥ್ ನೀಡುವ ರೈಸ್ ಬ್ರಾನ್ ಎಣ್ಣೆ

### ಹೆಲ್ತ್ ಟಿಪ್ಸ್

ರೈಸ್ ಬ್ರಾನ್ ಎಣ್ಣೆಯಲ್ಲಿ ಒರಿಜನಾಲ್ ಸಮೃದ್ಧವಾಗಿದೆ, ಕೆಟ್ಟ ಕೊಲೆಸ್ಟ್ರಾಲ್ (ಎಲ್ಡಿಎಲ್) ಅನ್ನು ಕಡಿಮೆ ಮಾಡುವ ಮೂಲಕ ಮತ್ತು ಉತ್ತಮ ಕೊಲೆಸ್ಟ್ರಾಲ್ (ಎಚ್ಡಿಎಲ್) ಅನ್ನು ಕಾಪಾಡಿಕೊಳ್ಳುವ ಮೂಲಕ ದೇಹವನ್ನು ಒಳಗಿನಿಂದ ಸ್ವಚ್ಛಗೊಳಿಸುತ್ತದೆ

ಆರೋಗ್ಯಕರ ಜೀವನದೆಡೆಗಿನ ಪ್ರಯಾಣದಲ್ಲಿ, ಸಣ್ಣ ಅಡುಗೆ ಆಯ್ಕೆಗಳು ಸಹ ನಮ್ಮ ಯೋಗಕ್ಷೇಮದ ಮೇಲೆ ಆಳವಾದ ಪರಿಣಾಮ ಬೀರಬಹುದು. ಅಂತಹ ಒಂದು ಆಯ್ಕೆಯೆಂದರೆ ನಾವು ಬಳಸುವ ಅಡುಗೆ ಎಣ್ಣೆ, ಇದು ನಮ್ಮ ಆರೋಗ್ಯದ ಮೇಲೆ ಗಮನಾರ್ಹವಾಗಿ ಪ್ರಭಾವ ಬೀರುತ್ತದೆ. ಲಭ್ಯವಿರುವ ಅನೇಕ ಆಯ್ಕೆಗಳಲ್ಲಿ ರೈಸ್ ಬ್ರಾನ್ ಎಣ್ಣೆ ಎದ್ದು ಕಾಣುತ್ತದೆ.ಈ ಹೊರ ಪದರವು 10,000 ಪಿಪಿಎಂಗಿಂತ ಹೆಚ್ಚಿನ ಸಾಂದ್ರತೆಗಳಲ್ಲಿ ಇರುವ ಉತ್ಕರ್ಷಣ ನಿರೋಧಕವಾದ ಒರಿಜನಾಲ್ ಸೇರಿದಂತೆ ಅಗತ್ಯ ಪೋಷಕಾಂಶಗಳಿಂದ ಸಮೃದ್ಧವಾಗಿದೆ. ಒರಿಜನಾಲ್ ಉತ್ತಮ ಕೊಲೆಸ್ಟ್ರಾಲ್ (ಎಚ್ಡಿಎಲ್) ಅನ್ನು ಕಾಪಾಡಿಕೊಳ್ಳುವಾಗ ಕೆಟ್ಟ ಕೊಲೆಸ್ಟ್ರಾಲ್ (ಎಲ್ಡಿಎಲ್) ಅನ್ನು ಕಡಿಮೆ ಮಾಡುವ ಸಾಮರ್ಥ್ಯಕ್ಕೆ ಹೆಸರುವಾಸಿಯಾಗಿದೆ. ಇದು ತರಕಾರಿ ಅಥವಾ ಸೂರ್ಯಕಾಂತಿ ಎಣ್ಣೆಯಂತಹ ಸಾಮಾನ್ಯ ಅಡುಗೆ ಎಣ್ಣೆಗಳಿಗೆ ರೈಸ್ ಬ್ರಾನ್ ಎಣ್ಣೆಯನ್ನು ಹೃದಯ-ಆರೋಗ್ಯಕರ ಪರ್ಯಾಯವನ್ನಾಗಿ ಮಾಡುತ್ತದೆ. ಇದರ ಸಮತೋಲಿತ ಕೊಬ್ಬಿನಾಮ್ಲ ಪ್ರೊಫೈಲ್, ಪಾಲಿಅನ್ ಸ್ಯಾಚುರೇಟೆಡ್ (ಪಿಯುಎಫ್ ಎ) ಮತ್ತು ಮೊನೊಸ್ಯಾಚುರೇಟೆಡ್ (ಎಂಯುಎಫ್ ಎ) ಕೊಬ್ಬುಗಳ ಸಮಾನ ಅನುಪಾತದೊಂದಿಗೆ, ಹೃದಯರಕ್ತನಾಳದ ಆರೋಗ್ಯವನ್ನು ಬೆಂಬಲಿಸುತ್ತದೆ ಮತ್ತು ಕೊಲೆಸ್ಟ್ರಾಲ್ ಮಟ್ಟವನ್ನು ನಿರ್ವಹಿಸಲು ಸಹಾಯ ಮಾಡುತ್ತದೆ.

ರೈಸ್ ಬ್ರಾನ್ ಎಣ್ಣೆಯ ಬಹುಮುಖತೆಯು ಮತ್ತೊಂದು ಗಮನಾರ್ಹ ಪ್ರಯೋಜನವಾಗಿದೆ. ಸರಿಸುಮಾರು 232 ಡಿಗ್ರಿ ಸೆಲ್ಸಿಯಸ್ ಹೆಚ್ಚಿನ ಹೊಗೆ ಬಿಂದುವನ್ನು ಹೊಂದಿರುವ ಇದು ಹುರಿಯುವುದು, ಬೇಯಿಸುವುದು ಸೇರಿದಂತೆ ವಿವಿಧ ಅಡುಗೆ ವಿಧಾನಗಳಿಗೆ ಸೂಕ್ತವಾಗಿದೆ. ಬಿಸಿ ಮಾಡಿದಾಗ ಹಾನಿಕಾರಕ ಸಂಯುಕ್ತಗಳನ್ನು ಕ್ಷೀಣಿಸುವ ಮತ್ತು ಬಿಡುಗಡೆ ಮಾಡುವ ಕೆಲವು ಎಣ್ಣೆಗಳಿಗಿಂತ ಭಿನ್ನವಾಗಿ, ರೈಸ್ ಬ್ರಾನ್ ಎಣ್ಣೆ ಸ್ಥಿರವಾಗಿರುತ್ತದೆ, ನಿಮ್ಮ ಭಕ್ಷ್ಯಗಳು ಪೌಷ್ಟಿಕ ಮತ್ತು ಪರಿಮಳಯುಕ್ತವಾಗಿವೆ ಎಂದು ಖಚಿತಪಡಿಸುತ್ತದೆ. ಇದರ ತಟಸ್ಥ ರುಚಿಯು ವ್ಯಾಪಕ ಶ್ರೇಣಿಯ ಪದಾರ್ಥಗಳಿಗೆ ಪೂರಕವಾಗಿದೆ, ನಿಮ್ಮ ಊಟದ ನೈಸರ್ಗಿಕ ರುಚಿಗಳನ್ನು ಹೆಚ್ಚಿಸುತ್ತದೆ. ಐಸಿಆರ್ಬಿಒ 2023 ರಲ್ಲಿ ಪಿಎಚ್ಡಿ ಆಹಾರ ವಿಜ್ಞಾನ ಮತ್ತು ಪೌಷ್ಟಿಕಾಂಶ, ಸಲಹೆಗಾರ ಆಹಾರ ತಂತ್ರಜ್ಞರಾದ ಡಾ.ರೋಹಿಣಿ ಶರ್ಮಾ ಮಾತನಾಡುತ್ತಾ, ರೈಸ್ ಬ್ರಾನ್ ಎಣ್ಣೆ ದಿನನಿತ್ಯದ ಅಡುಗೆಗೆ ತುಂಬಾ ಒಳ್ಳೆಯದು. ಇದು ತುಂಬಾ ಆರೋಗ್ಯಕರ ಎಣ್ಣೆಯಾಗಿದೆ ಮತ್ತು ಹೆಚ್ಚಿನ ಜನರು ರೈಸ್ ಬ್ರಾನ್ ಎಣ್ಣೆಯನ್ನು ಬಳಸುವ ಪ್ರಯೋಜನಗಳನ್ನು ತಿಳಿದುಕೊಳ್ಳಬೇಕು. ರೈಸ್ ಬ್ರಾನ್ ಆಯಿಲ್ 1: 1 ರ ಅನುಪಾತದಲ್ಲಿ ಪಿಯುಎಫ್ಎ ಮತ್ತು ಎಂಯುಎಫ್ಎಯೊಂದಿಗೆ ಸಮತೋಲಿತ ಕೊಬ್ಬಿನ ಪ್ರೊಫೈಲ್ ಅನ್ನು ಹೊಂದಿದೆ, ಮತ್ತು ಅತ್ಯಂತ ಕಡಿಮೆ ಸ್ಯಾಚುರೇಟೆಡ್ ಕೊಬ್ಬಿನಾಮ್ಲಗಳನ್ನು ಹೊಂದಿದೆ ಎಂದರು.




## 'ದಳಪತಿ 69' ಅಸಲಿ ಸ್ಟೋರಿ ರಿವೀಲ್ - ಕಮಲ್ ಹಾಸನ್‌ಗೆ ಹೇಳಿದ್ದ ಕಥೆಯಲ್ಲಿ ವಿಜಯ್?



ತಮಿಳಿನ ನಟ ವಿಜಯ್ 'ದಳಪತಿ 69' ಬಗ್ಗೆ ಇಂಟರೆಸ್ಟಿಂಗ್ ಅಪ್‌ಡೇಟ್ ಸಿಕ್ಕಿದೆ. ಕಮಲ್ ಹಾಸನ್ ಹೇಳಿದ್ದ ಕಥೆಯಲ್ಲಿ ವಿಜಯ್ ನಟಿಸಲು ರೆಡಿಯಾಗಿದ್ದಾರೆ ಎನ್ನಲಾದ ಸುದ್ದಿಯೊಂದು ಈಗ ಚರ್ಚೆಗೆ ಗ್ರಾಸವಾಗಿದೆ. ಅದಷ್ಟೇ ಅಲ್ಲ, ಈ ಸಿನಿಮಾ ಕಥೆ ಹೇಗಿರಲಿದೆ ಎಂಬ ಸುಳಿವು ಕೂಡ ಸಿಕ್ಕಿದೆ.

'ದಳಪತಿ 69' ಸಿನಿಮಾಗೆ ವಿಜಯ್ ಫೈನಲ್ ಆಗುವ ಮುನ್ನ ಈ ಕಥೆಯನ್ನು ಕಮಲ್ ಹಾಸನ್ ಸೇರಿದಂತೆ ಅನೇಕ ನಟರಿಗೆ ಹೇಳಿದ್ದರು ಎನ್ನಲಾಗ್ತಿದೆ. ಆದರೆ ಕಾರಣಾಂತರಗಳಿಂದ ಸಿನಿಮಾ ಮಾಡಲು ಆಗಲಿಲ್ಲ. ಆ ನಂತರ ಈ ಚಿತ್ರದ ಕಥೆ ಕೇಳಿ, ಸಿನಿಮಾ ಕೆರಿಯರ್‌ನ ಕೊನೆಯ ಚಿತ್ರ ಇದಾದರೆ ಸೂಕ್ತ ಎಂದೆನಿಸಿ ವಿಜಯ್ ಈ ಪ್ರಾಜೆಕ್ಟ್ ಅನ್ನು ಕೈಗೆತ್ತಿಕೊಂಡಿದ್ದಾರೆ ಎಂದು ಹೇಳಲಾಗುತ್ತಿದೆ.

ವಿನೋದ್ ನಿರ್ದೇಶನದಲ್ಲಿ 'ದಳಪತಿ 69' ಸಿನಿಮಾ ಮೂಡಿ ಬರಲಿದೆ. ಇನ್ನೂ ಹೆಸರಿಡದ ಈ ಸಿನಿಮಾ ಶೀಘ್ರದಲ್ಲೇ ಸೆಟ್ಟೇರಲಿದೆ. ಮುಂದಿನ ವರ್ಷ ಅಕ್ಟೋಬರ್ ನಲ್ಲಿ ಸಿನಿಮಾ ರಿಲೀಸ್ ಮಾಡುವುದಾಗಿ ಚಿತ್ರತಂಡ ಘೋಷಣೆ ಮಾಡಿದ್ದಾರೆ. ಇನ್ನು ವಿಜಯ್ ಪೊಲಿಟಿಕಲ್ ಜರ್ನಿಗೆ ಈ ಚಿತ್ರವನ್ನು ವೇದಿಕೆ ಮಾಡಿಕೊಳ್ಳುವ ಪ್ರಯತ್ನ ನಡೆಯುತ್ತಿದೆ. ರಾಜಕೀಯ ಅಂಶಗಳನ್ನು ಸೇರಿಸಿ ಚಿತ್ರವನ್ನು ತೆರೆಗೆ ತರಲಾಗುತ್ತದೆ. 'ದಳಪತಿ 69' ಅನೌನ್ಸ್‌ಮೆಂಟ್ ಪೋಸ್ಟರ್ ಗಮನ ಸೆಳೆದಿದೆ. 'ಪ್ರಜಾಪ್ರಭುತ್ವದ ಜ್ಯೋತಿ ಹಿಡಿಯುವವನು ಶೀಘ್ರದಲ್ಲೇ ಬರುತ್ತಿದ್ದಾರೆ' ಎನ್ನುವ ಪೋಸ್ಟರ್‌ನಲ್ಲಿ ಇರುವ ಸಾಲು ಕುತೂಹಲ ಮೂಡಿಸಿದೆ.

2026ರ ಚುನಾವಣೆಗೆ ಈಗಿಂದಲೇ ವಿಜಯ್ ತಯಾರಿ ನಡೆಸಿದ್ದಾರೆ. ಆ ಚುನಾವಣೆಯಲ್ಲಿ ತಮ್ಮ ಪಕ್ಷದ ಅಭ್ಯರ್ಥಿಗಳನ್ನು ಕಣಕ್ಕಿಳಿಸುವ ಲೆಕ್ಕಾಚಾರದಲ್ಲಿದ್ದಾರೆ. ಮುಂದಿನ ವರ್ಷ ಅಕ್ಟೋಬರ್‌ನಲ್ಲಿ 'ದಳಪತಿ 69' ಸಿನಿಮಾ ರಿಲೀಸ್ ಮಾಡಿ ಚಿತ್ರರಂಗಕ್ಕೆ ಗುಡ್ ಬೈ ಹೇಳುವ ಆಲೋಚನೆಯಲ್ಲಿದ್ದಾರೆ.

## ಹಳದಿ ಹಲ್ಲುಗಳ ಸಮಸ್ಯೆಗೆ ಮನೆಮದ್ದು

### ಬ್ಯೂಟಿ ಟಿಪ್ಸ್



ಆಧುನಿಕ ಜೀವನಶೈಲಿ, ಆಹಾರ ಪದ್ಧತಿಯಿಂದ ಕೆಲವೊಮ್ಮೆ ಏರು ಪೇರು ಉಂಟಾಗುತ್ತದೆ. ಅದರಲ್ಲಿಯೂ, ಕೆಲವರು ಕಾಫಿ, ಟೀ ತಂಬಾಕು, ಜರ್ದಾ ಮೊದಲಾದವುಗಳನ್ನು ಹೆಚ್ಚಾಗಿ ಬಳಸುತ್ತಾರೆ. ಇದು ಸೇರಿದಂತೆ ಹಲವು ಕಾರಣದಿಂದ ಹಲ್ಲುಗಳ ಬಣ್ಣ ಮಾಸುತ್ತದೆ. ಹಲ್ಲುಗಳ ಬಗ್ಗೆ ಕಾಳಜಿ ವಹಿಸದ ಪರಿಣಾಮ ತೊಂದರೆ ಅನುಭವಿಸಬೇಕಾಗುತ್ತದೆ. ಇನ್ನು ಕೆಲವರಿಗೆ ಹಲ್ಲಿನದೇ ದೊಡ್ಡ ಚಿಂತೆ. ಎಷ್ಟೆಲ್ಲಾ ಕೇರ್ ಮಾಡಿದರೂ, ಹಲ್ಲಿನ ಬಣ್ಣ ಮಾಸಿದ್ದರಿಂದ ಮುಜುಗರ ಅನುಭವಿಸುವಂತಾಗುತ್ತದೆ. ಬೇರೆಯವರ ಎದುರು ಮಾತನಾಡುವಾಗ, ತಮ್ಮ ಹಲ್ಲುಗಳು ಕಂಡರೆ ಎಂದುಕೊಳ್ಳುತ್ತಾರೆ. ಆದರೆ, ಮನೆಯಲ್ಲಿ ಬಳಸುವ ವಸ್ತುಗಳಿಂದಲೇ ಹೊಳಪು ಬರುವಂತೆ ಮಾಡಬಹುದು ಎನ್ನುತ್ತಾರೆ ತಿಳಿದವರು.

1 ಚಮಚ ತೆಂಗಿನ ಎಣ್ಣೆ, 1 ಚಮಚ ಅರಿಶಿಣ ಪುಡಿ, ಎರಡು ಹನಿ ಪುದಿನಾ ಎಣ್ಣೆ ಮಿಶ್ರಣ ಮಾಡಿಕೊಂಡು ಟೂತ್ ಬ್ರಶ್ ನಲ್ಲಿ ಸುಮಾರು 5 ನಿಮಿಷಗಳ ಕಾಲ ಹಲ್ಲನ್ನು ಉಜ್ಜಬೇಕು. ಬಳಿಕ ಬಾಯಿ ತೊಳೆದುಕೊಂಡು ಒಣಬಟ್ಟೆಯಿಂದ ಹಲ್ಲುಗಳನ್ನು ಒರೆಸಬೇಕು. ಹೀಗೆ ಸ್ವಲ್ಪ ದಿನ ಮಾಡಿದಲ್ಲಿ ಹಳದಿ ಹಲ್ಲಿಗೆ ವಿದಾಯ ಹೇಳಬಹುದು.

## ಬೆಂಗಳೂರಿನ ಇಸ್ಕಾನ್ ಶ್ರೀರಾಧಾಕೃಷ್ಣ ದೇವಸ್ಥಾನದಲ್ಲಿ ಬಾಲ್ಯದ ಕ್ಯಾನ್ಸರ್ ಜಾಗೃತಿ ಮಾಸಕ್ಕೆ ಚಿನ್ನದ ಹೊಳಪು




ತನ್ನ ಬೆರಗುಗೊಳಿಸುವ ವಾಸ್ತುಶಿಲ್ಪ ಮತ್ತು ಪ್ರಶಾಂತ ವಾತಾವರಣಕ್ಕಾಗಿ ಸದಾ ಪ್ರಶಂಸಿಸಲ್ಪಡುವ ಬೆಂಗಳೂರಿನಲ್ಲಿರುವ ಭವ್ಯವಾದ ಇಸ್ಕಾನ್ ಶ್ರೀ ರಾಧಾ ಕೃಷ್ಣ ದೇವಾಲಯವು ಬಾಲ್ಯದ ಕ್ಯಾನ್ಸರ್ ಬಗ್ಗೆ ಜಾಗೃತಿ ಮೂಡಿಸುವ ಹೃದಯಸ್ಪರ್ಶಿ ಸೂಚಕವಾಗಿ ಚಿನ್ನದ ಬಣ್ಣದಿಂದ ಕಂಗೊಳಿಸಿತು.

ಈ ದೇವಾಲಯವು ಮೊದಲ ಬಾರಿಗೆ ಜಾಗತಿಕವಾಗಿ ಅತ್ಯಂತ ಸುಂದರವಾಗಿ ನಿರ್ವಹಿಸಲ್ಪಡುವ ಇಸ್ಕಾನ್ ದೇವಾಲಯಗಳಲ್ಲಿ ಒಂದು ಎಂದು ಗುರುತಿಸಲ್ಪಟ್ಟಿದೆ, ಪ್ರತಿ ಸೆಪ್ಟೆಂಬರ್ನಲ್ಲಿ ನಡೆಯುವ ಅಂತರರಾಷ್ಟ್ರೀಯ ಬಾಲ್ಯದ ಕ್ಯಾನ್ಸರ್ ಜಾಗೃತಿ ಮಾಸಕ್ಕೆ ಬೆಂಬಲವಾಗಿ ಅದರ ಭವ್ಯ ಆವರಣವನ್ನು ಬೆಳಗಿಸಿತು. ಬಾಲ್ಯದ ಕ್ಯಾನ್ಸರ್ಗಾಗಿ ಅಂತರಾಷ್ಟ್ರೀಯ ಜಾಗೃತಿ ರಿಬ್ಬನ್ ಅನ್ನು ಸಂಕೇತಿಸುವ ಚಿನ್ನದ ಬೆಳಕು, ಈ ಯುದ್ಧದಲ್ಲಿ ಹೋರಾಡುವ ಮಕ್ಕಳಿಗೆ ಭರವಸೆ ಮತ್ತು ಪ್ರೀತಿಯ ದಾರಿದೀಪವಾಗಿ ಹೊಳೆಯಿತು.

ದೇವಾಲಯವು ತನ್ನ ಆಧ್ಯಾತ್ಮಿಕ ಚೈತನ್ಯಕ್ಕೆ ಹೆಸರುವಾಸಿಯಾಗಿದೆ ಮತ್ತು ನಮ್ರತೆ, ಸಹಾನುಭೂತಿ ಮತ್ತು ದಯೆಯ ಸಂಕೇತವಾಗಿದೆ, ಈ ಉಪಕ್ರಮದ ಮೂಲಕ ಈ ಸದ್ಗುಣಗಳ ಪ್ರಬಲ ಪ್ರಾತಿನಿಧ್ಯವಾಗಿ ನಿಂತಿದೆ. ಕ್ಯಾನ್ಸರ್ ಪೀಡಿತ ಮಕ್ಕಳು ಮತ್ತು ಕುಟುಂಬಗಳಿಗೆ ಪೌಷ್ಟಿಕಾಂಶ, ಸಮಾಲೋಚನೆ, ಶಿಕ್ಷಣ, ಆಶ್ರಯ ಮತ್ತು ಸಾರಿಗೆ ಸೇರಿದಂತೆ ಸಮಗ್ರ ಆರೈಕೆಯನ್ನು ಒದಗಿಸುವ ಎನ್ಜಿಒ ಆಕ್ಸೆಸ್ ಲೈಫ್ ನೇತೃತ್ವದ ಈ ಮಹತ್ವದ ಜಾಗತಿಕ ಜಾಗೃತಿ ಪ್ರಯತ್ನದಲ್ಲಿ ಇಸ್ಕಾನ್ ದೇವಾಲಯವು ಭಾಗವಹಿಸುವ ಮೂಲಕ ಹೊಸ ಇತಿಹಾಸ ಸೃಷ್ಟಿಯಾಯಿತು. ಕ್ಯಾನ್ಸರ್ ವಿರುದ್ಧ ಹೋರಾಡುತ್ತಿರುವ ಮಕ್ಕಳು, ಅವರ ಪೋಷಕರು, ಆಕ್ಸೆಸ್ ಲೈಫ್ ಬೆಂಗಳೂರು ಕೇಂದ್ರದ ವ್ಯವಸ್ಥಾಪಕಿ ಡಿ. ದಿವ್ಯಶ್ರೀ, ಆಕ್ಸೆಸ್ ಲೈಫ್ ಸಿಬ್ಬಂದಿ, ಸ್ವಯಂಸೇವಕರು ಮತ್ತು ವಿದ್ಯಾರ್ಥಿಗಳು, ಚಿನ್ನದ ಪ್ರಕಾಶವನ್ನು ವೀಕ್ಷಿಸಲು ವಿಸ್ಮಯಕಾರಿ ದೇವಾಲಯದಲ್ಲಿ ಒಟ್ಟುಗೂಡಿದರು. ದೇವಾಲಯವು ತನ್ನ ಶಾಂತಿಯುತ ಸೌಂದರ್ಯ ಮತ್ತು ಪವಿತ್ರ ಶಕ್ತಿಗಾಗಿ ಆಗಾಗ್ಗೆ ಪ್ರಶಂಸಿಸಲ್ಪಟ್ಟಿದ್ದರಿಂದ ಅವರ ಮುಖಗಳು ಆಶ್ಚರ್ಯದಿಂದ ಬೆಳಗಿದವು, ಅವರ ಧೈರ್ಯದ ಹೋರಾಟದೊಂದಿಗೆ ಐಕಮತ್ಯವನ್ನು ಪ್ರತಿಬಿಂಬಿಸುವ ಚಿನ್ನದ ವರ್ಣಗಳಲ್ಲಿ ಮಿಂದೆದ್ದರು. ಇಸ್ಕಾನ್ ಯಾವಾಗಲೂ ಪ್ರೀತಿ, ನಮ್ರತೆ ಮತ್ತು ದಯೆಯ ಅಭಯಾರಣ್ಯವಾಗಿದೆ. ನಮ್ಮ ಪ್ರೀತಿಯ ದೇವಾಲಯವನ್ನು ಚಿನ್ನದಲ್ಲಿ ಬೆಳಗಿಸುವ ಮೂಲಕ, ನಾವು ಕ್ಯಾನ್ಸರ್ ವಿರುದ್ಧ ಹೋರಾಡುತ್ತಿರುವ ಮಕ್ಕಳೊಂದಿಗೆ ಹೆಗಲಿಗೆ ಹೆಗಲು ಕೊಟ್ಟು ನಿಂತಿದ್ದೇವೆ, ಅವರಿಗೆ ಮತ್ತು ಅವರ ಕುಟುಂಬಗಳಿಗೆ ಕೇವಲ ಪ್ರಾರ್ಥನೆಯಲ್ಲ, ಆದರೆ ಭರವಸೆ ನೀಡುತ್ತೇವೆ. ನಾವು ವಿನಮ್ರರಾಗಿದ್ದೇವೆ. ಮತ್ತು ಈ ಕಾರಣದ ಭಾಗವಾಗಿರಲು ಗೌರವಿಸಲಾಗಿದೆ, ಮತ್ತು ಈ ಒಗ್ಗಟ್ಟಿನ ಕಾರ್ಯವು ಹೆಚ್ಚಿನ ಜನರನ್ನು ಜಾಗೃತಿ ಮೂಡಿಸಲು ಮತ್ತು ಅವರ ಬೆಂಬಲವನ್ನು ವಿಸ್ತರಿಸಲು ಪ್ರೇರೇಪಿಸುತ್ತದೆ ಎಂದು ನಾವು ಭಾವಿಸುತ್ತೇವೆ ಎಂದು ಆಕ್ಸೆಸ್ ಲೈಫ್ನ ವಕ್ತಾರರು ಹೇಳಿದರು.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಆರ್ಥಿಕ ನಷ್ಟಗಳು, ಮಾಟ ಮಂತ್ರ ತಂತ್ರದ ಭೀತಿ, ದಾಂಪತ್ಯದಲ್ಲಿ ನಿರಾಸಕ್ತಿ, ಪಾಲುದಾರಿಕೆಯಲ್ಲಿ ಸಮಸ್ಯೆ

**ವೃಷಭ:** ಶಾರೀರಿಕ ಅಸಮತೋಲನ, ವೃತ್ತಿಯಲ್ಲಿ ಹಿನ್ನಡೆ, ಆಲಸ್ಯ ಸೋಮಾರಿತನ ಜಿಗುಪ್ಸೆ, ಅನಾರೋಗ್ಯ

**ಮಿಥುನ:** ಗರ್ಭ ದೋಷಗಳು, ಮಕ್ಕಳ ಭವಿಷ್ಯದ ಚಿಂತೆ, ಉದ್ಯೋಗ ನಷ್ಟ, ಪ್ರೀತಿ ಪ್ರೇಮದಲ್ಲಿ ಸಮಸ್ಯೆ

**ಕಟಕ:** ಮಾನಸಿಕ ಅಸಮತೋಲನ, ಮಾಟ ಮಂತ್ರ ತಂತ್ರದ ಯೋಚನೆ, ಮಿತ್ರರಿಂದ ಬೇಸರ, ಲಾಭದ ಪ್ರಮಾಣ ಕುಂಠಿತ

**ಸಿಂಹ:** ಅವಕಾಶ ವಂಚಿತರಾಗುವಿರಿ, ಪ್ರಯಾಣದಲ್ಲಿ ನಿರಾಸಕ್ತಿ, ಉದ್ಯೋಗ ಬದಲಾವಣೆ ಪ್ರಯತ್ನ, ವಿದ್ಯಾಭ್ಯಾಸದಲ್ಲಿ ಹಿನ್ನಡೆ

**ಕನ್ಯಾ:** ಆಕಸ್ಮಿಕ ಧನಾಗಮನ, ಕುಟುಂಬದಿಂದ ಬೇಸರ, ಮಾತಿನಿಂದ ಸಮಸ್ಯೆ, ಪ್ರಯಾಣದಲ್ಲಿ ಅಡೆತಡೆ

**ತುಲಾ:** ಸ್ವಯಂಕೃತ ಅಪರಾಧಗಳು, ಜಿಗುಪ್ಸೆ ಮತ್ತು ಬೇಸರ, ಸಂಗಾತಿಯಿಂದ ಸಮಸ್ಯೆ, ಆಪತ್ತಿನಿಂದ ರಕ್ಷಣೆ

**ವೃಶ್ಚಿಕ:** ದುಃಸ್ವಪ್ನಗಳು, ಮೋಜು ಮಸ್ತಿಯಿಂದ ಸಮಸ್ಯೆ, ಸಂಗಾತಿಯಿಂದ ಅಂತರ, ಗುಪ್ತ ವಿದ್ಯೆಯಲ್ಲಿ ಯಶಸ್ಸು

**ಧನಸ್ಸು:** ಸಾಲ ತೀರಿಸುವ ಪ್ರಯತ್ನ, ಉದ್ಯೋಗ ಬಿಡುವ ಯೋಚನೆ, ಸೇವಕರಿಂದ ನಷ್ಟ, ಗುಪ್ತ ಶಕ್ತಿಯ ಸಂಚಲನ

**ಮಕರ:** ಪ್ರೀತಿ ಪ್ರೇಮದಲ್ಲಿ ಸೋಲು, ಜೂಜು ಮೋಜು ಮಸ್ತಿಯಿಂದ ತೊಂದರೆ, ಉದ್ಯೋಗ ಸಹಾಯದ ನಿರೀಕ್ಷೆ, ಬಾಲಗ್ರಹ ದೋಷಗಳು

**ಕುಂಭ:** ಸ್ಥಿರಾಸ್ತಿ ವಾಹನದಿಂದ ನಷ್ಟ, ಮಾಟ ಮಂತ್ರದಿಂದ ತೊಂದರೆ, ದೃಷ್ಟಿ ದೋಷಗಳು, ಧಾರ್ಮಿಕ ಕಾರ್ಯದಲ್ಲಿ ಅಡೆತಡೆ

**ಮೀನ:** ಭಯ ಗಾಬರಿ ಆತಂಕ, ಆಕಸ್ಮಿಕ ಅವಘಡಗಳು, ಬಂಧುಗಳಿಂದ ನಷ್ಟ, ಕಲಹಗಳು, ಗುಪ್ತ ಸಮಸ್ಯೆಗಳು

## ಅಂತರರಾಷ್ಟ್ರೀಯ ಶಾಂತಿ ದಿನ



ವಾರ್ಷಿಕವಾಗಿ ಸೆಪ್ಟೆಂಬರ್ 21 ರಂದು ಆಚರಿಸಲಾಗುವ ಅಂತರರಾಷ್ಟ್ರೀಯ ಶಾಂತಿ ದಿನ (ಅಥವಾ ವಿಶ್ವ ಶಾಂತಿ ದಿನ) ಶಾಂತಿಯ ಆದರ್ಶಗಳನ್ನು ಬಲಪಡಿಸಲು ಸಮರ್ಪಿಸಲಾಗಿದೆ, ಒಳಗೆ ಮತ್ತು ಎಲ್ಲಾ ರಾಷ್ಟ್ರಗಳು ಮತ್ತು ಜನರ ನಡುವೆ. ಯುದ್ಧ ಮತ್ತು ಹಿಂಸಾಚಾರವು ನಮ್ಮ ಸುದ್ದಿ ಚಕ್ರಗಳಲ್ಲಿ ಏಕಸ್ವಾಮ್ಯವನ್ನು ಹೊಂದಿರುವ ಸಮಯದಲ್ಲಿ, ಅಂತರರಾಷ್ಟ್ರೀಯ ಶಾಂತಿ ದಿನವು ನಾವು ಒಟ್ಟಾಗಿ ಏನನ್ನು ರಚಿಸಬಹುದು ಎಂಬುದರ ಸ್ಫೂರ್ತಿದಾಯಕ ಜ್ಞಾಪನೆಯಾಗಿದೆ.

ಸೆಪ್ಟೆಂಬರ್ 21 ರಂದು ವಿಶ್ವದಾದ್ಯಂತ ಶಾಂತಿಯ ಅಂತರರಾಷ್ಟ್ರೀಯ ದಿನವನ್ನು ಆಚರಿಸಲಾಗುತ್ತದೆ. 1981 ರಲ್ಲಿ, ಯುನೈಟೆಡ್ ನೇಷನ್ಸ್ ಜನರಲ್ ಅಸೆಂಬ್ಲಿ ಸೆಪ್ಟೆಂಬರ್ ಮೂರನೇ ಮಂಗಳವಾರವನ್ನು ಅಂತರರಾಷ್ಟ್ರೀಯ ಶಾಂತಿ ದಿನವೆಂದು ಘೋಷಿಸಿತು. ಈ ದಿನವು ಸಾಮಾನ್ಯ ಸಭೆಯ ವಾರ್ಷಿಕ ಅಧಿವೇಶನಗಳ ಆರಂಭಿಕ ದಿನದೊಂದಿಗೆ ಹೊಂದಿಕೆಯಾಯಿತು. ಪ್ರಪಂಚದಾದ್ಯಂತ ಶಾಂತಿಯ ಆದರ್ಶಗಳನ್ನು ಬಲಪಡಿಸುವುದು ದಿನದ ಉದ್ದೇಶವಾಗಿತ್ತು ಮತ್ತು ಇನ್ನೂ ಉಳಿದಿದೆ.

ಈ ಆಚರಣೆಯ ದಿನವನ್ನು ಸ್ಥಾಪಿಸಿದ ಎರಡು ದಶಕಗಳ ನಂತರ, 2001 ರಲ್ಲಿ, ಅಸೆಂಬ್ಲಿಯು ವಾರ್ಷಿಕವಾಗಿ ಸೆಪ್ಟೆಂಬರ್ 21 ರಂದು ಆಚರಿಸಲು ದಿನಾಂಕವನ್ನು ಮುಂದೂಡಿತು. ಆದ್ದರಿಂದ, 2002 ರಿಂದ ಸೆಪ್ಟೆಂಬರ್ 21 ಎಲ್ಲಾ ಜನರ ನಡುವೆ ಶಾಂತಿಯನ್ನು ಹೇಗೆ ಉತ್ತೇಜಿಸುವುದು ಮತ್ತು ಕಾಪಾಡಿಕೊಳ್ಳುವುದು ಎಂಬುದನ್ನು ಚರ್ಚಿಸುವ ಸಮಯವನ್ನು ಸೂಚಿಸುತ್ತದೆ. ಜಾಗತಿಕ ಕದನ ವಿರಾಮದ 24-ಗಂಟೆಗಳ ಅವಧಿ ಮತ್ತು ಸಕ್ರಿಯ ಹೋರಾಟದಲ್ಲಿರುವ ಗುಂಪುಗಳಿಗೆ ಅಹಿಂಸೆ. ಶಾಂತಿ ಸಾಧ್ಯ. ಇತಿಹಾಸದುದ್ದಕ್ಕೂ, ಹೆಚ್ಚಿನ ಸಮಾಜಗಳು ಹೆಚ್ಚಿನ ಸಮಯ ಶಾಂತಿಯಿಂದ ಬದುಕಿವೆ. ಇಂದು, ನಾವು ನಮ್ಮ ಪೋಷಕರು ಅಥವಾ ಅಜ್ಜಿಯರಿಗಿಂತ ಯುದ್ಧದಲ್ಲಿ ಸಾಯುವ ಸಾಧ್ಯತೆ ಕಡಿಮೆ. ವಿಶ್ವಸಂಸ್ಥೆಯ ಸ್ಥಾಪನೆ ಮತ್ತು ವಿಶ್ವಸಂಸ್ಥೆಯ ಚಾರ್ಟರ್ ಅನ್ನು ರಚಿಸಿದಾಗಿನಿಂದ, ಸರ್ಕಾರಗಳು ಇತರರ ವಿರುದ್ಧ ಬಲವನ್ನು ಬಳಸದಿರಲು ಬದ್ಧವಾಗಿರುತ್ತವೆ.

ಸಂಜೆ ಮುಗಿಲು
ಶನಿವಾರ
21.9.2024



# ಬಾಂಗ್ಲಾದಲ್ಲಿ ನಿಲ್ಲದ ಅರಾಜಕತೆ- ಮಸೀದಿಯಲ್ಲೇ ಮುಸ್ಲಿಮರ ಕಾದಾಟ!



**ಬಾಂಗ್ಲಾದೇಶ:** ಬಾಂಗ್ಲಾದೇಶದಲ್ಲಿ ಸರ್ಕಾರ ಪತನಗೊಂಡ ಬೆನ್ನಲ್ಲೇ ಸಾಕಷ್ಟು ಹಿಂಸಾಚಾರಗಳು ನಡೆದಿದ್ದು, ಇದೀಗ ದೇಶದ ರಾಜಧಾನಿ ಢಾಕಾದಲ್ಲಿರುವ ಬೈತುಲ್ ಮುಕರ್‍ರಂ ರಾಷ್ಟ್ರೀಯ ಮಸೀದಿಯ ಮಾಜಿ ಖತೀಬ್ ಹಾಗೂ ಹಾಲಿ ಖತೀಬ್ ಬೆಂಬಲಿಗರ ಎರಡು ಗುಂಪು ಮಸೀದಿಯೊಳಗೆಯೆ ಕೈಕೈ ಮಿಲಾಯಿಸಿದ್ದು, ಸುಮಾರು 50 ಕ್ಕೂ ಹೆಚ್ಚು ಜನ ಗಾಯಗೊಂಡಿದ್ದಾರೆ ಎಂದು ವರದಿಯಾಗಿದೆ..

ವರದಿಯ ಪ್ರಕಾರ, ಮಸೀದಿಯ ಪ್ರಸ್ತುತ ಖತೀಬ್ (ಜುಮ್ಮಾ ಪ್ರಾರ್ಥನೆ ಪ್ರವಚನ ನೀಡುವ ವ್ಯಕ್ತಿ) ಮುಫ್ತಿ ವಲಿಯುರ್ ರೆಹಮಾನ್ ಖಾನ್ ಅವರು ಪ್ರವಚನ ನೀಡುತ್ತಿದ್ದಾಗ, ಮಾಜಿ ಖತೀಬ್, ಮುಫ್ತಿ ರುಹುಲ್ ಅಮೀನ್ ಅವರು ತಮ್ಮ ಅನುಯಾಯಿಗಳೊಂದಿಗೆ ಮಸೀದಿಗೆ ಆಗಮಿಸಿ ಮೈಕ್ ತೆಗೆದುಕೊಳ್ಳಲು ಪ್ರಯತ್ನಿಸಿದರು.

ಈ ವೇಳೆ ಸಿಡಿದೆದ್ದ ಮುಫ್ತಿ ರೆಹಮಾನ್ ಅನುಯಾಯಿಗಳು ಇದನ್ನು ಖಂಡಿಸಿದ್ದಾರೆ, ಬಳಿಕ ಮಾತಿಗೆ ಮಾತು ಬೆಳೆದು ಹಿಂಸಾಚಾರಕ್ಕೆ ತಿರುಗಿದ್ದು, ಎರಡು ಗುಂಪುಗಳ ನಡುವೆ ದೊಡ್ಡ ಘರ್ಷಣೆಗೆ ಕಾರಣವಾಗಿದೆ. ಈ ವೇಳೆ ಕೇವಲರು ಮಸೀದಿಯಿಂದ ಹೊರ ಬರಲು ಪ್ರಯತ್ನಿಸಿದ್ದಾರೆ. ಅನುಯಾಯಿಗಳ ಗಲಭೆ ನೋಡಿ ಆರಾಧಕರು ಭಯಗೊಂಡು ಅಲ್ಲಿಂದ ಎಸ್ಕೇಪ್ ಆಗಲು ಪ್ರಯತ್ನಿಸಿದ್ದಾರೆ. ಆದರೆ ಈ ವೇಳೆ ಗೊಂಪೊಂದು ಪ್ರತಿಯೊಬ್ಬ ಲೀಗ್ ಅನ್ನು ಹಿಡಿಯಿರಿ, ಅವರನ್ನು ಕೊಚ್ಚಿ ಕೊಲೆ ಮಾಡಿ ಎಂದು ಘೋಷಣೆ ಕೂಗಿದರು.

# ಚೀನಾದ ಸೌಂದರ್ಯವತಿ ಗವರ್ನರ್‌ಗೆ 13 ವರ್ಷ ಜೈಲು ಶಿಕ್ಷೆ



**ಬೀಜಿಂಗ್:** ಚೀನಾದ ಜಗದೇಕ ಸುಂದರಿ ಗವರ್ನರ್ ಎಂದೇ ಹೆಸರು ಮಾಡಿದ್ದ ಚಾಂಗ್ ಯಾಂಗ್ಗೆ 13 ವರ್ಷ ಕಠಿಣ ಕಾರಾಗೃಹ ಶಿಕ್ಷೆ ಹಾಗೂ 1 ಕೋಟಿ ರೂಪಾಯಿಗೂ ಅಧಿಕ ದಂಡ ವಿಧಿಸಲಾಗಿದೆ.

ಚಾಂಗ್ ಯಾಂಗ್ ತಮ್ಮ ಸೌಂದರ್ಯದಿಂದಲೇ ಹೆಸರು ಮಾಡಿದ್ದವರು. ಚೀನಾದಲ್ಲಷ್ಟೇ ಅಲ್ಲ, ಇಡೀ ಜಗತ್ತಿನಲ್ಲಿಯೇ 'ಬ್ಯೂಟಿಫುಲ್ ಗವರ್ನರ್' ಎಂಬ ಖ್ಯಾತಿಯನ್ನೆ ಪಡೆದಿದ್ದರು.

ಈ ನೈರುತ್ಯ ಚೀನಾದ ರಾಜ್ಯಪಾಲೆಯಾಗಿ ಮತ್ತು ಉಪ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿದ್ದ ಚಾಂಗ್ ಯಾಂಗ್ ಈಗ ಕಂಬಿ ಹಿಂದೆ ಹೋಗಿದ್ದಾರೆ.

ತಮಗಿಂತ ಕೆಳದರ್ಜೆಯ ಅಧಿಕಾರಿಯೊಂದಿಗೆ ದೈಹಿಕ ಸಂಬಂಧ ಬೆಳಸಿದ ಆರೋಪ ಹಾಗೂ 6 ಕೋಟಿ ಯುವನ್ ಲಂಚ ಪಡೆದ ಆರೋಪದ ಮೇಲೆ ಈಗ ಜೈಲು ಸೇರಬೇಕಾದ ಪರಿಸ್ಥಿತಿ ಬಂದಿದೆ. 22 ವಯಸ್ಸಿನಲ್ಲಿ ಸಿಪಿಸಿ ಪಕ್ಷವನ್ನು ಸೇರಿಕೊಂಡ ಅವರು ಮುಂದೆ ನ್ಯಾಷನಲ್ ಪೀಪಲ್ ಕಾಂಗ್ರೆನಲ್ಲಿ ಡೆಪ್ಯೂಟಿಯಾಗಿ ನೇಮಕಗೊಂಡರು.

ಚಾಂಗ್ನ ಸುತ್ತ ಜನವರಿ ವೇಳೆ ಹಲವು ವಿವಾದಗಳು ಬೆನ್ನು ಬಿದ್ದವು. ಹಲವು ಗುತ್ತಿಗೆದಾರರಿಗೆ ಅನುಕೂಲವಾಗುವಂತೆ ತಮ್ಮ ಅಧಿಕಾರ ಬಳಸಿಕೊಂಡು ಲಂಚವನ್ನು ಪಡೆಯುತ್ತಿದ್ದಾರೆ ಎಂದು ಸ್ಥಳೀಯ ಮಾಧ್ಯಮಗಳು ಸುದ್ದಿ ಮಾಡಿದ್ದವು 1 ಲಕ್ಷ 70 ಸಾವಿರ ಸ್ಕೇರ್ ಮೀಟರ್ ಜಾಗವನ್ನು ತಮಗೆ ಅತ್ಯಂತ ಆತ್ಮೀಯರಾಗಿದ್ದ ಉದ್ಯಮಿಯೊಬ್ಬರಿಗೆ ನೀಡಲು ಒಪ್ಪಿಗೆ ನೀಡಿದ್ದು ಹಾಗೂ ಆ ಡೀಲಿಂಗ್ನಲ್ಲಿ ಚಾಂಗ್ ಲಂಚ ಪಡೆದಿದ್ದರು ಅನ್ನೋ ಆರೋಪ ಇದೆ. ಇದೇ ಆರೋಪದ. ಉದ್ಯಮ ಸ್ಥಾಪನೆಗೆ ಮಂಜೂರಾದ ಜಾಗದಲ್ಲಿ ಬಳಿಕ ರಿಯಲ್ ಎಸ್ಟೇಟ್ ಬ್ಯುಸಿನೆಸ್ ಶುರುವಾಗಿದ್ದು ಕೂಡ ಹಲವು ಅನುಮಾನಗಳಿಗೆ ಕಾರಣವಾಗಿದ್ದವು.

# ಕೇಂದ್ರ ಸಚಿವನ ತಲೆ ಕಡಿದವರಿಗೆ 1.3 ಎಕರೆ ಬಹುಮಾನ - ಕಾಂಗ್ರೆಸ್ ಶಾಸಕ

**ತೆಲಂಗಾಣ:** ಬಿಜೆಪಿ ನಾಯಕರು ರಾಹುಲ್ ಗಾಂಧಿಯನ್ನ ಟೀಕಿಸಿದ ರೀತಿಯನ್ನು ಖಂಡಿಸುವ ಭರದಲ್ಲಿ,ತೆಲಂಗಾಣ ಕಾಂಗ್ರೆಸ್ ಶಾಸಕ ವೇದ್ಮ ಬೊಜ್ಜು ಕೇಂದ್ರ ಸಚಿವ ರವನೀತ್ ಬಿಟ್ಟು ವಿರುದ್ಧ ಪ್ರಚೋದನಾಕಾರಿ ಹೇಳಿಕೆ ನೀಡಿ ವಿವಾದಕ್ಕೆ ಕಾರಣವಾಗಿದ್ದಾರೆ. ಕೇಂದ್ರ ಸಚಿವ ರವನೀತ್ ಸಿಂಗ್ ಬಿಟ್ಟು ರಾಹುಲ್ ಗಾಂಧಿಯನ್ನು ಟೀಕಿಸುವ ಭರದಲ್ಲಿ, ದೇಶದ ನಂಬರ್ ಒನ್ ಭಯೋತ್ಪಾದಕ ರಾಹುಲ್ ಗಾಂಧಿ ಎಂದು ವಿವಾದಾತ್ಮಕ ಹೇಳಿಕೆ ನೀಡಿದ್ದರು. ಈ ಹೇಳಿಕೆ ಕಾಂಗ್ರೆಸ್ ಪಾಳಯವನ್ನು ಕೆರಳುವಂತೆ ಮಾಡಿತ್ತು. ಈ ಕಾರಣಕ್ಕಾಗಿ, ರಾಹುಲ್ ಗಾಂಧಿಯನ್ನು ಈ ರೀತಿ ಜರಿದ ಕೇಂದ್ರ ಸಚಿವ ರವನೀತ್ ಸಿಂಗ್ ಬಿಟ್ಟು ಅವರ ತಲೆ ಕಡಿದವರಿಗೆ ತಮ್ಮ 1.38 ಎಕರೆ ಭೂಮಿಯನ್ನು ಬಹುಮಾನವಾಗಿ ನೀಡುವೆ ಎಂಬ ಹೇಳಿಕೆ ನೀಡುವ ಮೂಲಕ ತೆಲಂಗಾಣ ಕಾಂಗ್ರೆಸ್ ಶಾಸಕ ವೇದ್ಮ ಬೊಜ್ಜು ಮತ್ತೊಂದು ದೊಡ್ಡ ವಿವಾದ ಸೃಷ್ಟಿಸಿದ್ದಾರೆ.



# ಭಾರೀ ಮಳೆಯಿಂದ ಬಿರುಕುಬಿಟ್ಟ ತಾಜ್‌ಮಹಲ್ ಬಿರುಕಿನಲ್ಲಿ ಸಸಿ ಬೆಳೆದಿರುವ ಫೋಟೋ ವೈರಲ್



**ನವದೆಹಲಿ:** ವಿಶ್ವದ ಅದ್ಭುತಗಳಲ್ಲಿ ಒಂದಾದ ತಾಜ್‌ಮಹಲ್‌ನ ಕೇಂದ್ರ ಗುಮ್ಮಟದ ಅಮೃತಶಿಲೆಯ ಮಧ್ಯೆ ಬಿರುಕು ಕಾಣಿಸಿಕೊಂಡಿದೆ. ಈ ಕುರಿತು ಪ್ರವಾಸಿಗರೊಬ್ಬರು ಸಾಮಾಜಿಕ ಜಾಲತಾಣಗಳಲ್ಲಿ ಫೋಟೋವನ್ನು ಹಂಚಿಕೊಂಡಿದ್ದು, ಕಳವಳ ವ್ಯಕ್ತಪಡಿಸಿದ್ದಾರೆ.

ಕಳೆದ ಕೆಲವು ದಿನಗಳ ಹಿಂದೆ ದೆಹಲಿಯಲ್ಲಿ ತೀವ್ರ ಮಳೆಯಾದ ಕಾರಣ ತಾಜ್‌ಮಹಲ್‌ನ ಕೇಂದ್ರ ಗುಮ್ಮಟದ ಅಮೃತಶಿಲೆಯಲ್ಲಿ ಬಿರುಕು ಕಾಣಿಸಿಕೊಂಡಿತ್ತು. ಜೊತೆಗೆ ಆ ಬಿರುಕಿನಲ್ಲಿ ಸಸಿ ಬೆಳೆದಿರುವ ಫೋಟೋ ಕೂಡ ವೈರಲ್ ಆಗಿದೆ.

ಗುಮ್ಮಟದ ಉತ್ತರ ಭಾಗದಲ್ಲಿರುವ ಅಮೃತಶಿಲೆಯ ಮಧ್ಯೆ ಬಿರುಕು ಕಾಣಿಸಿಕೊಂಡಿದೆ. ಆ ಬಿರುಕಿನ ಮೂಲಕ ಮಳೆ ನೀರು ಸೋರಿಕೆಯಾಗಿ ಕೆಳಗಿರುವ ಸಮಾಧಿಯನ್ನು ತಲುಪುತ್ತಿವೆ.ಡ್ರೋನ್ ಬಳಸಿ ಗುಮ್ಮಟ ಪರೀಕ್ಷೆ ಮಾಡಿದಾಗ ಅಮೃತಶಿಲೆಯ ತಳದಲ್ಲಿ ತುಕ್ಕು ಹಿಡಿದಿರುವುದು ಕಂಡುಬಂದಿದೆ. ತುಕ್ಕು ಹಿಡಿದಿರುವುದರಿಂದ ಬಿರುಕು ಉಂಟಾಗಿದ್ದು, ನೀರು ಸೋರಿಕೆಗೆ ಕಾರಣವಾಗಿದೆ.

ಭವಿಷ್ಯದ ದೃಷ್ಟಿಯಿಂದ ನೀರಿನ ಸೋರಿಕೆಯನ್ನು ತಡೆಗಟ್ಟಲು ಕ್ರಮ ಕೈಗೊಳ್ಳಲಾಗುವುದು. ಗುಮ್ಮಟದ ಮೇಲ್ಮೈ ಒಣಗಿದಂತೆ, ದುರಸ್ತಿ ಕಾರ್ಯವನ್ನು ಪ್ರಾರಂಭಿಸಲಾಗುವುದು. ಸ್ವಲ್ಪ ಕಾಲವಕಾಶ ತೆಗೆದುಕೊಳ್ಳುತ್ತದೆ ಎಂದು ಮೂಲಗಳು ತಿಳಿಸಿವೆ. ಟೂರಿಸ್ಟ್ ಗೈಡ್ ಫೆಡರೇಶನ್ ಆಫ್ ಇಂಡಿಯಾದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಶಕೀಲ್ ಚೌಹಾಣ್ ಮಾತನಾಡಿ, ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ ತಾಜ್‌ಮಹಲ್ ಸಂರಕ್ಷಣೆಗೆ ವಾರ್ಷಿಕವಾಗಿ 4 ಕೋಟಿ ರೂ. ವ್ಯಯಿಸುತ್ತದೆ. ಇಂತಹ ಚಿತ್ರಗಳು ಸ್ಮಾರಕದ ಖ್ಯಾತಿಗೆ ಮಸಿ ಬಳಿಯುತ್ತವೆ. ಮಳೆಗಾಲದ ನಂತರ ಸಂರಕ್ಷಣಾ ಕಾರ್ಯಕ್ಕೆ ಕರೆ ನೀಡಲಾಗುವುದು ಮತ್ತು ಈಗ ಕಾಣಿಸಿಕೊಂಡಿರುವ ಸಸ್ಯ ಕಳೆದ 15 ದಿನಗಳಲ್ಲಿ ಬೆಳೆದಿದ್ದು, ತಕ್ಷಣವೇ ತೆಗೆದುಹಾಕಲಾಗುವುದು ಎಂದು ತಿಳಿಸಿದ್ದಾರೆ.

# ತಿರುಪತಿ ಲಡ್ಡು ವಿವಾದಕ್ಕೆ ಟ್ವಿಸ್ಟ್: ಆರೋಪಗಳಿಗೆ ಜಗನ್ ಸ್ಪಷ್ಟನೆ



**ತಿರುಮಲ:** ತಿರುಮಲ ತಿರುಪತಿ ಪ್ರಸಾದ ಲಡ್ಡುವಿನಲ್ಲಿ ಪ್ರಾಣಿಯ ಕೊಬ್ಬು ಬಳಕೆಯ ಆರೋಪ ದೇಶಾದ್ಯಂತ ಸಂಚಲನ ಸೃಷ್ಟಿಸಿದೆ. ಮಾಜಿ ಸಿಎಂ ಜಗನ್ ಮೋಹನ್ ರೆಡ್ಡಿ ಅವರ ಅವಧಿಯಲ್ಲಿ ಇಂತಹದೊಂದು ಅನಾಹುತ ನಡೆದಿದೆ ಎಂದು ಹಾಲಿ ಸಿಎಂ ಚಂದ್ರಬಾಬು ನಾಯ್ಡು ಗಂಭೀರ ಆರೋಪ ಮಾಡಿದ್ದರು.

ಇದೀಗ ಮಾಜಿ ಸಿಎಂ ಜಗನ್ ಮೋಹನ್ ರೆಡ್ಡಿ ಅವರು ಸುದ್ದಿಗೋಷ್ಠಿ ನಡೆಸಿ ತಿರುಗೇಟು ನೀಡಿದ್ದಾರೆ.

ದೇವಸ್ಥಾನದಲ್ಲಿ ಲಡ್ಡು ತಯಾರಿಕೆಗೆ ತುಪ್ಪದ ಮಾದರಿ ಸಂಗ್ರಹಿಸಿ ಪ್ರಮಾಣಿಕರಿಸಿದ ಬಳಿಕವೇ ತುಪ್ಪದ ಬಳಕೆ ಮಾಡಲಾಗುತ್ತದೆ ಎಂದು ಸ್ಪಷ್ಟನೆ ನೀಡಿದ್ದಾರೆ.

ಪ್ರಸಾದದ ಅರ್ಹತೆಯ ಮಾನದಂಡ ದಶಕಗಳಿಂದ ಬದಲಾಗಿಲ್ಲ. ಪೂರೈಕೆದಾರರು ಎನ್‌ಎಬಿಎಲ್ ಪ್ರಮಾಣಪತ್ರ ಮತ್ತು ಉತ್ಪನ್ನ ಗುಣಮಟ್ಟದ ಪ್ರಮಾಣಪತ್ರವನ್ನು ನೀಡಬೇಕು. ಅದಾದ ಬಳಿಕ ಟಿಟಿಡಿ (ಖಿಖಿಆ) ತುಪ್ಪದಿಂದ ಮಾದರಿಗಳನ್ನು ಸಂಗ್ರಹಿಸುತ್ತದೆ. ಬಳಿಕ ಪರಿಶೀಲಿಸಿದ ಉತ್ಪನ್ನಗಳನ್ನು ಮಾತ್ರ ಬಳಸಲಾಗುತ್ತದೆ ಎಂದು ಹೇಳಿದ್ದಾರೆ.

ದೇವಾಲಯಕ್ಕೆ ಲಡ್ಡು ತಯಾರಿಕೆಗಾಗಿ ಸಾಮಗ್ರಿಗಳನ್ನು ಒದಗಿಸಲು ಪ್ರತಿ ಆರು ತಿಂಗಳಿಗೊಮ್ಮೆ ಟೆಂಡರ್ ಪ್ರಕ್ರಿಯೆ ನಡೆಯುತ್ತದೆ. ಈ ವೇಳೆ ಅಗತ್ಯ ದಾಖಲೆಗಳನ್ನು ಹಾಗೂ ಗುಣಮಟ್ಟದ ಪ್ರಮಾಣ ಪತ್ರವನ್ನು ಒದಗಿಸಿ ಟೆಂಡರ್ ಪಡೆಯಬೇಕು. ನಮ್ಮ ಆಡಳಿತದಲ್ಲಿ ನಾವು 18 ಬಾರಿ ಉತ್ಪನ್ನಗಳನ್ನು ತಿರಸ್ಕರಿಸಿದ್ದೇವೆ ಎಂದು ಅವರು ಹೇಳಿದ್ದಾರೆ.

ಚಂದ್ರಬಾಬು ನಾಯ್ಡು ವಿರುದ್ಧ ಕಿಡಿಕಾರಿದ ಜಗನ್, ಅವರು ಎಲ್ಲವನ್ನೂ ತಿರುಚಿ ಮಾತನಾಡುತ್ತಿದ್ದಾರೆ. ಲಡ್ಡು ಬಗೆಗಿನ ಎಲ್ಲಾ ಆರೋಪಗಳು ಸುಳ್ಳು. ನಮ್ಮ ಸರ್ಕಾರದ ಅವಧಿಯಲ್ಲಿ ಯಾವುದೇ ಉಲ್ಲಂಘನೆ ಆಗಿಲ್ಲ. ಡೈವರ್ಸನ್ ಪಾಲಿಟಿಕ್ಸ್ ಬಗ್ಗೆ ಆಶ್ಚರ್ಯವಾಗುತ್ತಿದೆ. ಚಂದ್ರಬಾಬು ನಾಯ್ಡು ಜನರ ಗಮನವನ್ನು ಬೇರೆಡೆ ಸೆಳೆಯುವ ಪ್ರಯತ್ನ ಮಾಡುತ್ತಿದ್ದಾರೆ ಎಂದು ಜಗನ್ ಹೇಳಿದ್ದಾರೆ.

# ಜನಸಂಖ್ಯೆ ಹೆಚ್ಚಿಸಲು ರಷ್ಯಾ ಅಧ್ಯಕ್ಷ ಪುಟಿನ್ ಕರೆ.!

**ರಷ್ಯಾ:** ರಷ್ಯಾ ಮತ್ತು ಉಕ್ರೇನ್ ನಡುವಿನ ಯುದ್ಧ ಮುಂದುವರೆದಿದೆ. ವಿಶ್ವಸಂಸ್ಥೆ ಸೇರಿದಂತೆ ಹಲವಾರು ದೇಶಗಳು ಉಭಯ ದೇಶಗಳ ನಡುವೆ ಸಾಮರಸ್ಯವನ್ನು ಸ್ಥಾಪಿಸಲು ಪ್ರಯತ್ನಿಸಿವೆ.ಆದರೆ ರಷ್ಯಾ ಮತ್ತು ಉಕ್ರೇನ್ ಹಿಂದೆ ಸರಿಯುತ್ತಿಲ್ಲ. ವಿಶ್ವದ ಕೆಲವು ದೇಶಗಳು ರಷ್ಯಾವನ್ನು ಬೆಂಬಲಿಸುತ್ತಿದ್ದರೆ, ಇತರರು ಉಕ್ರೇನ್ ಗೆ ಸಹಾಯ ಮಾಡುತ್ತಿದ್ದಾರೆ. ಈಗಲೂ ಆರು ದೇಶಗಳು ಪರಸ್ಪರ ಬಾಂಬ್ ದಾಳಿ ನಡೆಸುತ್ತಿವೆ. ಈ ನಡುವೆ ರಷ್ಯಾದಲ್ಲಿ ಕೆಲವು ಲಕ್ಷ ಜನರು ದೇಶವನ್ನು ತೊರೆದಿದ್ದಾರೆ. ಈ ಕಾರಣದಿಂದಾಗಿ, ಕಳೆದ ಕೆಲವು ತಿಂಗಳುಗಳಿಂದ ಜನನ ಪ್ರಮಾಣವು ತೀವ್ರವಾಗಿ ಕುಸಿದಿದೆ. ಇತರ ದೇಶಗಳಿಗೆ ಹೋದವರಲ್ಲಿ ಹುಡುಗಿಯರು ಮತ್ತು ಮಹಿಳೆಯರು ಹೆಚ್ಚು ಎಂದು ತಿಳಿದುಬಂದಿದೆ. ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅವರ ಹೇಳಿಕೆ ಸದ್ಯ ಭಾರಿ ಸುದ್ದಿಯಲ್ಲಿದೆ. ರಷ್ಯಾದ ಜನನ ಪ್ರಮಾಣ ಕುಸಿಯುತ್ತಿರುವ ಬಗ್ಗೆ ಪುಟಿನ್ ಕಳವಳ ವ್ಯಕ್ತಪಡಿಸಿದ್ದಾರೆ ಮತ್ತು ಈ ಕ್ರಮದಲ್ಲಿ, ಮಕ್ಕಳನ್ನು ಹೊಂದಲು ಕಾಫಿ ಮತ್ತು ಊಟದ ವಿರಾಮದ ಸಮಯದಲ್ಲಿಯೂ ಉದ್ಯೋಗಿಗಳೊಂದಿಗೆ ಲೈಂಗಿಕ ಕ್ರಿಯೆ ನಡೆಸುವಂತೆ ಸಲಹೆ ನೀಡಿದ್ದಾರೆ.



# ಕಾಂಗ್ರೆಸ್ ಅಭ್ಯರ್ಥಿಯ ಬೆಂಗಾವಲು ವಾಹನದ ಮೇಲೆ ಗುಂಡಿನ ದಾಳಿ!

**ನವದೆಹಲಿ:** ಹರಿಯಾಣದ ಪಂಚಕುಳದಲ್ಲಿ ಕಾಂಗ್ರೆಸ್ ಅಭ್ಯರ್ಥಿಯ ಬೆಂಗಾವಲು ಪಡೆಯ ವಾಹನದ ಮೇಲೆ ಅಪರಿಚಿತರು ಗುಂಡಿನ ದಾಳಿ ನಡೆದಿದ್ದು, ಘಟನೆಯಲ್ಲಿ ಕಾಂಗ್ರೆಸ್ ಶಾಸಕ ಪ್ರದೀಪ್ ಚೌಧರಿ ಅವರ ಸಹಾಯಕನಿಗೆ ಗಂಭೀರಗಾಯವಾಗಿದೆ ಎಂದು ತಿಳಿದುಬಂದಿದೆ. ಇಂದು ಸಂಜೆ ಪಂಚಕುಳದಲ್ಲಿ ಪ್ರದೀಪ್ ಚೌಧರಿ ಅವರ ಬೆಂಗಾವಲು ವಾಹನ ಸಾಗುತ್ತಿದ್ದಾಗ ಗುಂಡಿನ ದಾಳಿ ನಡೆಸಲಾಗಿದ್ದು, ಗೋಲ್ಡಿ ಎಂಬ ಸಹಾಯಕನ ದೇಹಕ್ಕೆ ಎರಡು ಗುಂಡುಗಳು ಹೊಕ್ಕಿವೆ. ಸದ್ಯ ಗೋಲ್ಡಿಯನ್ನು ಚಿಕಿತ್ಸೆಗಾಗಿ ಪಿಜಿಐ ಚಂಡೀಗಢಕ್ಕೆ ಕರೆದೊಯ್ಯಲಾಗಿದೆ. ಗೋಲ್ಡಿಯು ಅಪರಾಧ ಚಟುವಟಿಕೆಗಲ್ಲಿ ಗುರುತಿಸಿಕೊಂಡಿದ್ದು, ಇದರಿಂದಲೇ ಶತ್ರು ಗುಂಪು ದಾಳಿ ಮಾಡಿದೆ ಎಂದು ಶಂಕಿಸಲಾಗುತ್ತಿದೆ. ಗುಂಡಿನ ದಾಳಿ ಪ್ರಕರಣ ಸಂಬಂಧ ಪೊಲೀಸರು ತನಿಖೆ ಚುರುಕುಗೊಳಿಸಿದ್ದು, ಆರೋಪಿಗಳ ಪತ್ತೆಗೆ ಬಲೆ ಬೀಸಿದ್ದಾರೆ.

**ಗೋಲಿ ಎಂಬ ಸಹಾಯಕನ ದೇಹಕ್ಕೆ ಹೊಕ್ಕಿದ ಎರಡು ಗುಂಡು**



# ಅಮೆರಿಕಾಗೆ ಬೇಕಾಗಿದ ಹಿಜುಲ್ಲಾ ಕಮಾಂಡರ್ ಇಸ್ರೇಲ್ ದಾಳಿಯಲ್ಲಿ ಸಾವು

**ಜೆರುಸಲೇಂ:** ಬೈರುತ್ ನಲ್ಲಿ ನಡೆದ ನಿಖರವಾದ ವೈಮಾನಿಕ ದಾಳಿಯಲ್ಲಿ ಹಿಜ್ಬುಲ್ಲಾದ ರಾದ್ವಾನ್ ಫೋರ್ಸ್ ನ ಕಮಾಂಡರ್ ಇಬ್ರಾಹಿಂ ಅಕಿಲ್ ನನ್ನು ಹತ್ಯೆ ಮಾಡಲಾಗಿದೆ ಎಂದು ಇಸ್ರೇಲ್ ಶುಕ್ರವಾರ (ಸೆ.20) ಘೋಷಿಸಿದೆ. ಹಿರಿಯ ಕಮಾಂಡರ್ ಗಳ ಸಭೆಯನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಲಾಗಿದ್ದು, 10 ಉನ್ನತ ಅಧಿಕಾರಿಗಳು ಸೇರಿದಂತೆ ಕನಿಷ್ಠ 14 ಜನರು ಸಾವನ್ನಪ್ಪಿದ್ದಾರೆ ಎಂದು ವರದಿ ಹೇಳಿದೆ.





# ಐಸಿಸಿ ಬಂಧನ ವಾರಂಟ್ ಕೋರಿಕೆ ವಿರುದ್ಧ ಇಸ್ರೇಲ್ ಮೇಲ್ಮನವಿ



**ಜೆರುಸಲೇಂ:** ಗಾಝಾ ಯುದ್ಧದಲ್ಲಿನ ನಿಲುವು ಹಾಗೂ ವರ್ತನೆಗೆ ಸಂಬಂಧಿಸಿ ಇಸ್ರೇಲ್ನ ಪ್ರಮುಖ ಮುಖಂಡರ ವಿರುದ್ಧ ಬಂಧನ ವಾರಂಟ್ ಜಾರಿಗೊಳಿಸಬೇಕೆಂದು ಅಂತರಾಷ್ಟ್ರೀಯ ನ್ಯಾಯಾಲಯ (ಐಸಿಸಿ)ದಲ್ಲಿ ಸಲ್ಲಿಕೆಯಾಗಿರುವ ಕೋರಿಕೆಯನ್ನು ಪ್ರಶ್ನಿಸಿ ಇಸ್ರೇಲ್ ಶುಕ್ರವಾರ ಅರ್ಜಿ ಸಲ್ಲಿಸಿದೆ ಎಂದು ಇಸ್ರೇಲ್ ವಿದೇಶಾಂಗ ಇಲಾಖೆಯನ್ನು ಉಲ್ಲೇಖಿಸಿ ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ.

ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಮತ್ತು ರಕ್ಷಣಾ ಸಚಿವ ಯೊವಾವ್ ಗ್ಯಾಲಂಟ್ ವಿರುದ್ಧ ಬಂಧನ ವಾರಂಟ್ ಜಾರಿಗೊಳಿಸಲು ಕೋರುವ ಅರ್ಜಿಯನ್ನು ಮೇ ತಿಂಗಳಿನಲ್ಲಿ ಸಲ್ಲಿಸಲಾಗಿತ್ತು. ಇದೀಗ ಅರ್ಜಿಯನ್ನು ಪ್ರಶ್ನಿಸಿ ಇಸ್ರೇಲ್ ಮೇಲ್ಮನವಿ ಸಲ್ಲಿಸಿರುವುದರಿಂದ ಅರ್ಜಿಯ ಕುರಿತ ತೀರ್ಪು ಇನ್ನಷ್ಟು ವಿಳಂಬಗೊಳ್ಳುವ ಸಾಧ್ಯತೆಯಿದೆ. ಹಮಾಸ್ ಮುಖಂಡ ಯಾಹ್ಯಾ ಸಿನ್ವರ್ ಹಾಗೂ ಇತರ ಹಮಾಸ್ ಮುಖಂಡರ ವಿರುದ್ಧವೂ ಬಂಧನ ವಾರಂಟ್ ಜಾರಿಗೊಳಿಸಬೇಕೆಂದು ಸಲ್ಲಿಸಿರುವ ಅರ್ಜಿಯ ಬಗ್ಗೆ ತ್ವರಿತ ನಿರ್ಧಾರ ಕೈಗೊಳ್ಳಬೇಕೆಂದು ಐಸಿಸಿ ಪ್ರಾಸಿಕ್ಯೂಟರ್ ಕರೀಂ ಖಾನ್ ಕಳೆದ ತಿಂಗಳು ಆಗ್ರಹಿಸಿರುವಂತೆಯೇ ಇಸ್ರೇಲ್ ಮೇಲ್ಮನವಿ ಸಲ್ಲಿಸಿದೆ. 'ಈ ಪ್ರಕರಣದಲ್ಲಿ ಐಸಿಸಿಯ ಅಧಿಕಾರದ ಕೊರತೆ ಸ್ಪಷ್ಟವಾಗಿದೆ. ಜತೆಗೆ, ಪ್ರಾಸಿಕ್ಯೂಟರ್ ಮಾಡಿರುವ ಪ್ರತಿಪಾದನೆಯ ಬಗ್ಗೆ ಸ್ವತಃ ತನಿಖೆ ನಡೆಸುವ ಅಧಿಕಾರವನ್ನು ಚಲಾಯಿಸಲು ಇಸ್ರೇಲ್ಗೆ ಅವಕಾಶ ನೀಡದೆ ಅರ್ಜಿಯನ್ನು ವಿಚಾರಣೆ ಎತ್ತಿಕೊಂಡಿರುವುದು ಸರಿಯಲ್ಲ' ಎಂದು ಮೇಲ್ಮನವಿಯಲ್ಲಿ ಉಲ್ಲೇಖಿಸಿರುವುದಾಗಿ ಇಸ್ರೇಲ್ ವಿದೇಶಾಂಗ ಸಚಿವಾಲಯ ಹೇಳಿದೆ.

# ಮಧ್ಯ ಯುರೋಪ್ ಪ್ರವಾಹಕ್ಕೆ 24 ಬಲಿ



**ವಾರ್ಸಾ:** ಮಧ್ಯ ಯುರೋಪ್ನಾದ್ಯಂತ ಭಾರೀ ಮಳೆ, ಪ್ರವಾಹದಿಂದ ಜನಜೀವನ ಅಸ್ತವ್ಯಸ್ತಗೊಂಡಿದ್ದು ವ್ಯಾಪಕ ನಾಶ-ನಷ್ಟ ಸಂಭವಿಸಿದ್ದು 24ಕ್ಕೂ ಅಧಿಕ ಮಂದಿ ಸಾವನ್ನಪ್ಪಿರುವುದಾಗಿ ವರದಿಯಾಗಿದೆ.

ಪೋಲ್ಯಾಂಡ್, ರೊಮಾನಿಯಾ, ಝೆಕ್ ಗಣರಾಜ್ಯ ಮತ್ತು ಆಸ್ಟ್ರಿಯಾಗಳಲ್ಲಿ ಬಹುತೇಕ ನದಿಗಳು ಉಕ್ಕಿ ಹರಿಯುತ್ತಿವೆ.

ಕಳೆದ ವಾರ ಆರಂಭಗೊಂಡ ಮಳೆ ಹಲವು ದಿನ ನಿರಂತರ ಸುರಿದ ಕಾರಣ ಹಲವು ಸೇತುವೆಗಳು ನಾಶಗೊಂಡಿದ್ದು ತಗ್ಗು ಪ್ರದೇಶಗಳ ಮನೆಗಳು ಜಲಾವೃತಗೊಂಡಿವೆ. ಪೋಲ್ಯಾಂಡ್ನ ಮೂರನೇ ಅತೀ ದೊಡ್ಡ ನಗರವಾದ ರೊಕ್ಲಾದಲ್ಲಿ ಪ್ರವಾಹ ಸ್ಥಿತಿ ಗಂಭೀರವಾಗಿದ್ದರೂ ಹೆಚ್ಚಿನ ನಾಶ-ನಷ್ಟ ಸಂಭವಿಸಿಲ್ಲ. ಆದರೆ ಈ ವಾರಾಂತ್ಯವೂ ಮಳೆಯಾಗುವ ಸೂಚನೆಯಿರುವುದರಿಂದ ಎಚ್ಚರ ವಹಿಸುವಂತೆ ಸ್ಥಳೀಯರಿಗೆ ಸೂಚಿಸಲಾಗಿದೆ.

ರಕ್ಷಣಾ ಕಾರ್ಯದಲ್ಲಿ ತೊಡಗಿರುವ ಪೊಲೀಸರು ಹಾಗೂ ಸ್ವಯಂಸೇವಕರಿಗೆ ನೆರವಾಗಲು 16,000 ಯೋಧರನ್ನು ನಿಯೋಜಿಸಲಾಗಿದೆ ಎಂದು ಸೇನೆ ಹೇಳಿದೆ. ಈ ಮಧ್ಯೆ, ಪೊಲೀಸರ ಸಮವಸ್ತ್ರ ಧರಿಸಿ ಪ್ರವಾಹದ ಬಗ್ಗೆ ಜನರಿಗೆ ತಪ್ಪು ಮಾಹಿತಿ ನೀಡಿ ಭೀತಿ ಮೂಡಿಸುತ್ತಿದ್ದ ವ್ಯಕ್ತಿಯನ್ನು ಬಂಧಿಸಿರುವುದಾಗಿ ಪೊಲೀಸರು ಹೇಳಿದ್ದಾರೆ. ಹಂಗರಿಯಲ್ಲಿ ಡ್ಯಾನ್ಯೂಬ್ ನದಿಯ ನೀರು ಅಪಾಯದ ಮಟ್ಟ ಮೀರಿ ಹರಿಯುತ್ತಿದ್ದು ರಾಜಧಾನಿ ಬುಡಾಪೆಸ್ಟ್ನಲ್ಲಿ ಪ್ರವಾಹದ ಅಪಾಯ ಹೆಚ್ಚಿದೆ ಎಂದು ಪ್ರಧಾನಿ ವಿಕ್ಟರ್ ಆರ್ಬನ್ ಹೇಳಿದ್ದಾರೆ.

# ಉಗ್ರರ ದಾಳಿಯಲ್ಲಿ 6 ಭದ್ರತಾ ಸಿಬ್ಬಂದಿ ಮೃತ್ಯು

**ಇಸ್ಲಮಾಬಾದ್:** ವಾಯವ್ಯ ಪಾಕಿಸ್ತಾನದ ಭದ್ರತಾ ಠಾಣೆಯ ಮೇಲೆ ಗುರುವಾರ ತಡರಾತ್ರಿ ಭಯೋತ್ಪಾದಕರು ನಡೆಸಿದ ದಾಳಿಯಲ್ಲಿ ಕನಿಷ್ಠ 6 ಭದ್ರತಾ ಸಿಬ್ಬಂದಿ ಮೃತಪಟ್ಟಿದ್ದಾರೆ. ಠಾಣೆಯೊಳಗೆ ನುಗ್ಗುವ ಉಗ್ರರ ಪ್ರಯತ್ನವನ್ನು ವಿಫಲಗೊಳಿಸಲಾಗಿದೆ ಎಂದು ಸೇನೆ ಶುಕ್ರವಾರ ಹೇಳಿದೆ.ಅಫ್ಘಾನಿಸ್ತಾನದ ಗಡಿಭಾಗದಲ್ಲಿ ಗುರುವಾರ ರಾತ್ರಿ ಮತ್ತು ಶುಕ್ರವಾರ ಎರಡು ಪ್ರತ್ಯೇಕ ಘರ್ಷಣೆ ನಡೆದಿದ್ದು ತೆಹ್ರೀಕೆ ತಾಲಿಬಾನ್ ಪಾಕಿಸ್ತಾನ್ (ಟಿಟಿಪಿ) ಹೊಣೆ ವಹಿಸಿಕೊಂಡಿದೆ. ದಕ್ಷಿಣ ವಜೀರಿಸ್ತಾನದ ಬುಡಕಟ್ಟು ಜಿಲ್ಲೆಯಲ್ಲಿ ಭದ್ರತಾ ಠಾಣೆಗೆ ನುಗ್ಗಲು ಉಗ್ರರು ನಡೆಸಿದ ಪ್ರಯತ್ನವನ್ನು ವಿಫಲಗೊಳಿಸಲಾಗಿದೆ. ಆದರೆ ಗುಂಡಿನ ಚಕಮಕಿಯಲ್ಲಿ 6 ಭದ್ರತಾ ಸಿಬ್ಬಂದಿ ಹತರಾಗಿದ್ದಾರೆ. ಭದ್ರತಾ ಪಡೆಯ ಪ್ರತಿದಾಳಿಯಲ್ಲಿ ಐವರು ಉಗ್ರರನ್ನು ಹತ್ಯೆ ಮಾಡಲಾಗಿದೆ. ಉತ್ತರ ವಜೀರಿಸ್ತಾನದಲ್ಲಿ ನಡೆದ ಪ್ರತ್ಯೇಕ ಘಟನೆಯಲ್ಲಿ ಸೇನೆಯ ಕಾರ್ಯಾಚರಣೆಯಲ್ಲಿ ಅಫ್ಘಾನಿಸ್ತಾನದಿಂದ ಪಾಕಿಸ್ತಾನ ಪ್ರವೇಶಿಸಲು ಪ್ರಯತ್ನಿಸುತ್ತಿದ್ದ 7 ಉಗ್ರರನ್ನು ಹತ್ಯೆ ಮಾಡಲಾಗಿದೆ ಎಂದು ಭದ್ರತಾ ಪಡೆಯ ಮೂಲಗಳು ಹೇಳಿವೆ.



# ಸ್ಫೋಟಕ್ಕೆ ಕೇರಳ ವ್ಯಕ್ತಿಯ ಸಂಸ್ಥೆ ನಂಟು!

**ನ್ಯೂಯಾರ್ಕ್:** ನಾಲ್ಕು ದಿನಗಳ ಹಿಂದೆ ಲೆಬನಾನ್ನಲ್ಲಿ ಸಂಭವಿಸಿದ 1 ಸಾವಿರಕ್ಕೂ ಅಧಿಕ ಪೇಜರ್ಗಳ ಸ್ಫೋಟಕ್ಕೆ ಈಗ ಕೇರಳ ನಂಟು ಪತ್ತೆಯಾಗಿದೆ!

ಲೆಬನಾನ್ ಹೆಜ್ಬುಲ್ಲಾ ಬಂಡುಕೋರರು ಖರೀದಿಸಿದ್ದ ಪೇಜರ್ಗಳನ್ನು ಬಲ್ಗೇರಿಯಾ ಮೂಲದ ಕಂಪೆನಿಯೊಂದು ತಯಾರಿಸಿದೆ. ಈ ಕಂಪೆನಿಯು ಕೇರಳ ಮೂಲದ ರಿನ್ಸನ್ ಜೋಸ್ ಅವರಿಗೆ ಸೇರಿದೆ.

ಆದರೆ ಬಲ್ಗೇರಿಯಾದ ಭದ್ರತಾ ಸಂಸ್ಥೆಯು ಈ ಆರೋಪವನ್ನು ತಳ್ಳಿ ಹಾಕಿದ್ದು, ಕಂಪೆನಿಗೆ ಕ್ಲೀನ್ಚಿಟ್ ನೀಡಿದೆ.

39 ವರ್ಷದ ರಿನ್ಸನ್ ಜೋಸ್ ಕೇರಳದ ವಯನಾಡಿನ ಮಾನಂತವಾಡಿಯವರಾಗಿದ್ದು, ನಾರ್ವೆ ದೇಶದ ಪೌರತ್ವ ಹೊಂದಿದ್ದಾರೆ. ರಿನ್ಸನ್ ಜೋಸ್ ಒಡೆತನದ ನೋರ್ಟ ಗ್ಲೋಬಲ್ ಸಂಸ್ಥೆಯು ಪೇಜರ್ಗಳ ಖರೀದಿಗಾಗಿ ಹಣ ವರ್ಗಾವಣೆ ನಡೆಸಿದೆ ಎಂಬ ಆರೋಪ ಕೇಳಿ ಬಂದಿತ್ತು.

ಲೆಬನಾನ್ನಲ್ಲಿ ಸ್ಫೋಟಗೊಂಡ ಪೇಜರ್ಗಳನ್ನು ತೈವಾನ್ ಕಂಪೆನಿ ಗೋಲ್ಡ್ ಅಪೋಲೋ ಪೂರೈಸಿತ್ತು ಎಂದು ಹೇಳಲಾಗಿತ್ತು. ಆದರೆ ಕಂಪೆನಿಯು ಈ ಸ್ಪಷ್ಟನೆ ನೀಡಿ, ಈ ಪೇಜರ್ಗಳನ್ನು ತಾನು ತಯಾರಿಸಿದ್ದಲ್ಲ. ಪೇಜರ್ಗಳಿಗೆ ನಮ್ಮ ಬ್ರ್ಯಾಂಡ್ ಬಳಸಿಕೊಳ್ಳಲಾಗಿದೆ ಎಂದು ಹೇಳಿದೆ.





Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# 'ಆಶಿಕಿ 2' ಹೀರೋಗೆ ಸಮಂತಾ ಜೋಡಿ



ಸೌತ್ ನಟಿ ಸಮಂತಾ ಮತ್ತೆ ಸಿನಿಮಾಗಳಲ್ಲಿ ಆ್ಯಕ್ಟಿವ್ ಆಗಿದ್ದಾರೆ. 'ಸಿಟಾಡೆಲ್' ಬಳಿಕ ಮತ್ತೊಂದು ಬಾಲಿವುಡ್ ಪ್ರಾಜೆಕ್ಟ್ ಅನ್ನು ಒಪ್ಪಿಕೊಂಡಿದ್ದಾರೆ. 'ಆಶಿಕಿ 2' ಆದಿತ್ಯಾ ರಾಯ್ ಕಪೂರ್ ಜೊತೆ ಸಮಂತಾ ರೊಮ್ಯಾನ್ಸ್ ಮಾಡಲು ರೆಡಿಯಾಗಿದ್ದಾರೆ. ವಿಜಯ್ ದೇವರಕೊಂಡ ಜೊತೆಗಿನ 'ಖುಷಿ' ಸಿನಿಮಾದ ರಿಲೀಸ್ ಬಳಿಕ ಸಮಂತಾ ನಟಿಸುತ್ತಿರುವ ಪ್ರಾಜೆಕ್ಟ್ ಬಗ್ಗೆ ಯಾವುದೇ ಅಪ್ಡೇಟ್ ಸಿಕ್ಕಿರಲಿಲ್ಲ. ಖುಷಿ ಸಿನಿಮಾ ನಟಿಸುತ್ತಿದ್ದ ವೇಳೆ 'ಸಿಟಾಡೆಲ್ ಹನಿ ಬನಿ' ವೆಬ್ ಸರಣಿ ಇದೇ ನವೆಂಬರ್‌ನಲ್ಲಿ ರಿಲೀಸ್ ಆಗಲಿದೆ. ಈಗ ಅಭಿಮಾನಿಗಳು ಖುಷಿಪಡುವಂತಹ ಸಿಹಿಸುದ್ದಿ ಸಿಕ್ಕಿದೆ. ರಾಜ್ ಮತ್ತು ಡಿಕೆ ನಿರ್ಮಾಣದ ಹೊಸ ವೆಬ್ ಸರಣಿ 'ರಕ್ತ ಬ್ರಹ್ಮಾಂಡ್'ದಲ್ಲಿ ಸಮಂತಾ ನಾಯಕಿಯಾಗಿ ನಟಿಸುತ್ತಿದ್ದಾರೆ. ಸೆಟ್‌ಗೆ ಎಂಟ್ರಿ ಕೊಟ್ಟಿರುವ ಬಗ್ಗೆ ನಟಿ ಬರೆದುಕೊಂಡಿದ್ದಾರೆ. ಹಲವು ತಿಂಗಳುಗಳ ನಂತರ ಸೆಟ್‌ಗೆ ಮರಳಿರೋದು ಖುಷಿ ಇದೆ ಎಂದಿದ್ದಾರೆ. ಅಂದಹಾಗೆ, ಸಮಂತಾಗೆ ರಾಹಿ ಅನಿಲ್ ಆಕ್ಷನ್ ಕಟ್ ಹೇಳುತ್ತಿದ್ದಾರೆ. ಇವತ ಜೊತೆಗೆ ಆದಿತ್ಯಾ ರಾಯ್ ಕಪೂರ್, ವಮಿಕಾ ಗಬ್ಬಿ, ಅಲಿ ಫಜಲ್ ಕೂಡ ನಟಿಸುತ್ತಿದ್ದಾರೆ. ಮೊದಲ ಬಾರಿಗೆ ಆದಿತ್ಯಾ ರಾಯ್ ಕಪೂರ್ ಮತ್ತು ಸಮಂತಾ ಜೊತೆಯಾಗಿ ಕಾಣಿಸಿಕೊಳ್ಳಿದ್ದಾರೆ. ಈ ಪ್ರಾಜೆಕ್ಟ್ ಮೇಲೆ ಫ್ಯಾನ್ಸ್‌ಗೆ ಭಾರೀ ನಿರೀಕ್ಷೆಯಿದೆ.

# ಮಾದಕ ಫೋಟೋ ಹಾಕಿ ಪಡ್ಡೆ ಹುಡುಗರ ನಿದ್ದೆ ಕದ್ದ ಪೂನಂ ಪಾಂಡೆ



ಮಾದಕ ನಟಿ ಪೂನಂ ಪಾಂಡೆಯ ಟಾಪ್‌ಲೆಸ್ ಅವತಾರಗಳು ಹೊಸದೇನಲ್ಲ. ಆಗಾಗ್ಗೆ ತನ್ನ ಮೈಮಾಟವನ್ನು ಸಾಮಾಜಿಕ ಜಾಲತಾಣದಲ್ಲಿ ನಿರಂತರವಾಗಿ ಪ್ರದರ್ಶನಕ್ಕೀಡುವ ಮೂಲಕ ಗಮನ ಸೆಳೆಯುತ್ತಿರುತ್ತಾರೆ. ಕೆಲವು ತಿಂಗಳ ಹಿಂದೆ ಗರ್ಭಕಂಠದ ಕ್ಯಾನ್ಸರ್‌ನಿಂದ ಸಾವನ್ನಪ್ಪಿರುವುದಾಗಿ ಇಡೀ ದೇಶವನ್ನೇ ನಂಬಿಸಿದ ಚಾಲಕಿ ಈಕೆ. ಇದೀಗ ಅಭಿಮಾನಿಗಳಿಗೆ ಕಚಗುಳಿ ಇಡುವ ಮೂಲಕ ಮತ್ತೆ ಸೋಷಿಯಲ್ ಮೀಡಿಯಾಗಳಲ್ಲಿ ಸುದ್ದಿಯಾಗುತ್ತಿದ್ದಾರೆ.ಅದೇ ರೀತಿ ಮಾದಕ ಫೋಟೋವೊಂದನ್ನ ಪೂನಂ ಪಾಂಡೆ ಹಂಚಿಕೊಂಡು ಅಭಿಮಾನಿಗಳ ಹೃದಯ ಕದ್ದಿದ್ದಾರೆ. ಜೀನ್ಸ್ ಪ್ಯಾಟ್ ಜೊತೆಗೆ ಎದೆ ಭಾಗ ಕಾಣಿಸುವಂತೆ ಬ್ಲೌಸ್‌ವೊಂದನ್ನ ಧರಿಸಿದ್ದಾರೆ. ಥಾಂಬ್ಡಿ ಚಾಂಬ್ಡಿ ಕಾ ಮತ್ಲಬ್ ಕ್ಯಾ ಹೇ? ಅಂತಲೂ ಬರೆದುಕೊಂಡಿದ್ದಾರೆ. ಪೂನಂ ಪಾಂಡೆ ಅವರ ಫೋಟೋಗೆ ಅಭಿಮಾನಿಗಳು ಫಿದಾ ಆಗಿದ್ದರೆ, ನಮ್ಮ ಎದೆಗೆ ಇನ್ನೆಷ್ಟು ಬಾರಿ ಬೆಂಕಿ ಹಚ್ತೀರಿ ಅಂತ ಪ್ರಶ್ನೆ ಮಾಡಿದ್ದಾರೆ. ಇನ್ನೂ ಕೆಲವರು ಫೈಯರ್ ಎಮೋಜಿ ಹಾಕಿದ್ರೆ, ಕೆಲವರು ಐ ಲವ್ ಯೂ ಪೂನಂ, ತುಂಬಾ ಸೆಕ್ಸಿ ಆಗಿದ್ದೀರಾ ಎಂದು ಸಹ ಕಾಮೆಂಟ್ ಮಾಡಿದ್ದಾರೆ. ಇತ್ತೀಚೆಗಷ್ಟೇ ಪೂನಂ ಪಾಂಡೆ ಕೋಲ್ಕತ್ತಾ ಟ್ರೈನಿ ವೈದ್ಯೆ ಅತ್ಯಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ತಮ್ಮ ಇನ್‌ಸ್ಟಾಗ್ರಾಮ್ ಪೋಸ್ಟ್ ಮೂಲಕ ಪ್ರತಿಕ್ರಿಯೆ ನೀಡಿದ್ದರು.

## ನಾಚಿಕೆಯಾಗಬೇಕು ನಮಗೆ

**ಅತ್ಯಾಚಾರಿಗಳು ಮುಕ್ತವಾಗಿ ನಡೆಯುವ, ಹಿಂಬಾಲಕರು ಕತ್ತಲಲ್ಲಿ ಅಡಗಿರುವ ಹಾಗೂ ಮಹಿಳೆಯರು ನಿರಂತರವಾಗಿ ಅಸುರಕ್ಷಿತರಾಗಿರುವ ಈ ಜಗತ್ತಿನಲ್ಲಿ ನಾವು ಏಕೆ ವಾಸಿಸುತ್ತಿದ್ದೇವೆ? ನಾವು ಇದನ್ನ ಪ್ರತಿದಿನ ಸಹಿಸಿಕೊಳ್ಳಲು ಏಕೆ ಒತ್ತಾಯಿಸಲ್ಪಡುತ್ತೇವೆ? ಅಸುರಕ್ಷತೆ ನಮಗೆ ಸಂಭವಿಸುತ್ತಿದೆ ಅದಕ್ಕೆ ನಾವು ದೂಷಿಸುತ್ತೇವೆ? ನಾವು ಹೇಗೆ ಬಟ್ಟೆ ಧರಿಸುತ್ತೇವೆ? ಹೇಗೆ ನಡೆಯುತ್ತೇವೆ? ಹೇಗೆ ಮಾತನಾಡುತ್ತೇವೆ ಎಂಬುದನ್ನು ಕೇಳುತ್ತಾರೆ? ಏನು ಮಾಡಬೇಕು ಎಂಬುದನ್ನು ಹೇಳುತ್ತಾರೆ? ಆದ್ರೆ, ನಾವು ಭಯವಿಲ್ಲದೇ ಬದುಕುವುದಕ್ಕೆ ಏಕೆ ಸಾಧ್ಯವಿಲ್ಲ? ಕಿರುಕುಳ ಅನುಭವಿಸದೇ ಏಕೆ ಅಸ್ತಿತ್ವದಲ್ಲಿರಲು ಧ್ಯವಿಲ್ಲ? ನಾವು ಸುರಕ್ಷತೆ, ಘನತೆ ಮತ್ತು ಗೌರವ ಬಯಸಿದಾಗ ನಮ್ಮ ಧ್ವನಿಯನ್ನು ಏಕೆ ಮೌನಗೊಳಿಸುತ್ತಾರೆ? ಅಂತಲೂ ಪ್ರಶ್ನೆ ಮಾಡಿದ್ದರು.**

### ಹಾಲಿವುಡ್‌ನತ್ತ ರಕ್ಕಮ್ಮ

# ಆಕ್ಷನ್ ಅವತಾರ ತಾಳಿದ ಜಾಕ್ವೆಲಿನ್



ಕನ್ನಡದ 'ವಿಕ್ರಾಂತ್ ರೋಣ' ಸಿನಿಮಾದಲ್ಲಿ ರಾರಾ ರಕ್ಕಮ್ಮ ಎಂದು ಪಡ್ಡೆಹುಡುಗುರ ನಿದ್ದೆಗೆಡಿಸಿದ ಬಾಲಿವುಡ್ ನಟಿ ಜಾಕ್ವೆಲಿನ್ ಇದೀಗ ಹಾಲಿವುಡ್‌ನತ್ತ ಮುಖ ಮಾಡಿದ್ದಾರೆ. 'ಕಿಲ್ ದೆಮ್ ಆಲ್ 2' ಎನ್ನುತ್ತಾ ನಟಿ ಆ್ಯಕ್ಷನ್ ಅವತಾರ ತಾಳಿದ್ದಾರೆ.

ಜಾಕ್ವೆಲಿನ್ ನಟಿಸಿದ ಮೊದಲ ಹಾಲಿವುಡ್ ಸಿನಿಮಾ 'ಕಿಲ್ ದೆಮ್ ಆಲ್ 2' ಚಿತ್ರದ ಟ್ರೈಲರ್ ಗೆ ರಿಲೀಸ್ ಆಗಿ ಸಿನಿ ಪ್ರೇಕ್ಷಕರ ಮೆಚ್ಚುಗೆ ಗಳಿಸಿದೆ. ಹೀರೋ ಜೀನ್ ಕ್ಲೌಡ್ ವ್ಯಾನ್ ಡೆಮೆಗೆ ನಾಯಕಿಯಾಗಿ ಜಾಕ್ವೆಲಿನ್ ಕಾಣಿಸಿಕೊಂಡಿದ್ದಾರೆ. ಗನ್ ಹಿಡಿದು ನಟಿ ಅಖಾಡಕ್ಕೆ ಕೂಡ ಇಳಿದಿದ್ದಾರೆ. ಈ ಸಿನಿಮಾದ ಮೊದಲ ಸರಣಿ 2017ರಲ್ಲಿ ಸೂಪರ್ ಹಿಟ್ ಆಗಿತ್ತು. ನಟಿಯ ಮೊದಲ ಹಾಲಿವುಡ್ ಚಿತ್ರವಾಗಿದ್ರೂ, ಆತ್ಮವಿಶ್ವಾಸದಿಂದ ನಟಿಸಿದ್ದಾರೆ. ಬಿಟ್ಟಿರುವ ಟ್ರೈಲರ್ ನೋಡುಗರಿಗೆ ಇಂಟರೆಸ್ಟಿಂಗ್ ಎನಿಸಿದೆ. ಎಂದೂ ನಟಿಸಿರದ ವಿಭಿನ್ನ ಗೆಟಪ್‌ನಲ್ಲಿ ನಟಿ ಕಾಣಿಸಿಕೊಂಡಿದ್ದಾರೆ. ಅಂದಹಾಗೆ, ಶ್ರೀಲಂಕಾ ಸುಂದರಿಗೆ ಬಾಲಿವುಡ್‌ನಲ್ಲಿ ಗುರುತಿಸಿಕೊಂಡಿದ್ದಾರೆ. ಗಟ್ಟಿ ನೆಲೆ ಗಿಟ್ಟಿಸಿಕೊಳ್ಳುತ್ತಿರುವ ವೇಳೆಯಲ್ಲಿ ಹಾಲಿವುಡ್ ಗೆ ನಟಿ ಹಾರಿದ್ದಾರೆ. ಮೊದಲ ಸಿನಿಮಾದಲ್ಲೇ ಯಶಸ್ಸು ಸಿಗುತ್ತಾ? ಕಾಯಬೇಕಿದೆ.

# 'ಮಲಯಾಳಂ ಸಿನಿಮಾಗಳ ತಾಯಿ' ಕವಿಯೂರ್ ಪೊನ್ನಮ್ಮ ನಿಧನ

**ಕೊಚ್ಚಿ:** 'ಮಲಯಾಳಂ ಸಿನಿಮಾಗಳ ತಾಯಿ' ಎಂದೇ ಖ್ಯಾತಿ ಪಡೆದಿದ್ದ ಹಿರಿಯ ನಟಿ ಕವಿಯೂರ್ ಪೊನ್ನಮ್ಮ(79) ಅವರು ಶುಕ್ರವಾರ ಕೊಚ್ಚಿಯಲ್ಲಿ ನಿಧನರಾಗಿದ್ದಾರೆ.

**» ವಯೋಸಹಜ ಕಾಯಿಲೆ ಮತ್ತು ಬಹು ಅಂಗಾಂಗ ವೈಫಲ್ಯದಿಂದ ಬಳಲುತ್ತಿದ್ದ ಕವಿಯೂರ್ ಪೊನ್ನಮ್ಮ**

ವಯೋಸಹಜ ಕಾಯಿಲೆ ಮತ್ತು ಬಹು ಅಂಗಾಂಗ ವೈಫಲ್ಯದಿಂದ ಬಳಲುತ್ತಿದ್ದ ಕವಿಯೂರ್ ಪೊನ್ನಮ್ಮ ಅವರು ಕಳೆದ ವಾರ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದರು. ಆದರೆ ಚಿಕಿತ್ಸೆ ಫಲಕಾರಿಯಾಗದೆ ಇಂದು ನಿಧನರಾಗಿದ್ದಾರೆ ಎಂದು ಆಸ್ಪತ್ರೆಯ ಮೂಲಗಳು ತಿಳಿಸಿವೆ.



1945 ರಲ್ಲಿ ಪತ್ತನಂತಿಟ್ಟದ ಕವಿಯೂರ್ ಎಂಬ ಹಳ್ಳಿಯಲ್ಲಿ ಜನಿಸಿದ ಪೊನ್ನಮ್ಮ ಅವರು ತರಬೇತಿ ಪಡೆದ ಗಾಯಕಿಯಾಗಿ ತಮ್ಮ ಕಲಾ ಪಯಣವನ್ನು ಆರಂಭಿಸಿದರು. ನಂತರ ರಂಗಭೂಮಿಯಲ್ಲಿ ನಟಿಸುವ ಮೂಲಕ ನಟನಾ ವೃತ್ತಿಜೀವನಕ್ಕೆ ಕಾಲಿಟ್ಟರು. ಕಳೆದ 60 ವರ್ಷಗಳಿಂದ 700ಕ್ಕೂ ಹೆಚ್ಚು ಮಲಯಾಳಂ ಸಿನಿಮಾಗಳಲ್ಲಿ ನಟಿಸಿದ್ದಾರೆ.

ಕವಿಯೂರ್ ಪೊನ್ನಮ್ಮ ಅವರು ಮಲಯಾಳಂ ಚಿತ್ರ, 1964 ರಲ್ಲಿ ಸಸಿ ಕುಮಾರ್ ನಿರ್ದೇಶಿಸಿದ ಕುಟುಂಬಿನಿಯಲ್ಲಿ ತಾಯಿಯ ಪಾತ್ರ ಮಾಡಿದ್ದರು. ಈ ಪಾತ್ರವು ಅವರ ಆರು ದಶಕಗಳ ವೃತ್ತಿಜೀವನದ ನಿರ್ಣಾಯಕ ಪಾತ್ರವಾಗಿದೆ.

ನಂತರ ಅಮ್ಮ ಅಮ್ಮಯ್ಯಮ್ಮ(1998) ಚಿತ್ರದಲ್ಲಿ ಶಾರದ ಟೀಚರ್, ನಂದನಂ(2002) ನಲ್ಲಿ ಉಣ್ಣಿ ಅಮ್ಮ ಮತ್ತು ಬಾಬಾ ಕಲ್ಯಾಣಿ(2006)ಯಲ್ಲಿ ಮೀನಾಕ್ಷಿಯಮ್ಮ ಮುಂತಾದ ಅಪ್ರತಿಮ ಪಾತ್ರಗಳ ಮೂಲಕ ಪೊನ್ನಮ್ಮ ತಾಯಂದಿರ ನಿಸ್ವಾರ್ಥ ಪ್ರೀತಿ ಮತ್ತು ಕ್ಷಮೆಯನ್ನು ಪ್ರದರ್ಶಿಸಿದರು.

ಕವಿಯೂರ್ ಪೊನ್ನಮ್ಮ ಅವರು ನಾಲ್ಕು ಬಾರಿ ಕೇರಳ ರಾಜ್ಯ ಪ್ರಶಸ್ತಿಯನ್ನೂ ಪಡೆದಿದ್ದಾರೆ.

### 6 ರನ್ ಹೊಡೆದು ಭಾರತದ ಪರ ವಿಶಿಷ್ಟ ಸಾಧನೆ ನಿರ್ಮಿಸಿ

# ಸಚಿನ್, ಪಾಂಟಿಂಗ್ ಕ್ಲಬ್ ಸೇರಿದ ಕೊಹ್ಲಿ



**ಚೆನ್ನೈ:** ಮಾಜಿ ನಾಯಕ ವಿರಾಟ್ ಕೊಹ್ಲಿ ಟೀಂ ಇಂಡಿಯಾ ಪರ ಮೈಲಿಗಲ್ಲು ಬರೆದಿದ್ದಾರೆ. ತವರು ನೆಲದಲ್ಲಿ 12 ಸಾವಿರ ರನ್ ಹೊಡೆಯುವ ಮೂಲಕ ತೆಂಡೂಲ್ಕರ್, ಪಾಂಟಿಂಗ್, ಕ್ಯಾಲಿಸ್ ಅವರ ಪಟ್ಟಿ ಸೇರಿದ್ದಾರೆ.

ಬಾಂಗ್ಲಾ ವಿರುದ್ಧ ನಡೆಯುತ್ತಿರುವ ಮೊದಲ ಟೆಸ್ಟ್‌ನ ಎರಡನೇ ಇನ್ನಿಂಗ್ಸ್‌ನಲ್ಲಿ 6 ರನ್ ಗಳಿಸಿದಾಗ ಈ ಸಾಧನೆ ನಿರ್ಮಿಸಿದರು. ಈ ಮೂಲಕ ತವರು ನೆಲದಲ್ಲಿ 12 ಸಾವಿರ ರನ್ ಗಳಿಸಿದ ಭಾರತದ ಎರಡನೇಯ ವಿಶ್ವದ ಐದನೇ ಬ್ಯಾಟರ್ ಎಂಬ ಹೆಗ್ಗಳಿಕೆಗೆ ಪಾತ್ರರಾದರು.

219 ಪಂದ್ಯಗಳ (ಟೆಸ್ಟ್/ಏಕದಿನ/ ಟಿ20 ಸೇರಿ) 243 ಇನ್ನಿಂಗ್ಸ್ ಆಡಿ ಕೊಹ್ಲಿ ಈಗ ಒಟ್ಟು 12,012 ರನ್ ಹೊಡೆದಿದ್ದಾರೆ.

ಯಾರು ಎಷ್ಟು ರನ್ ಹೊಡೆದಿದ್ದಾರೆ?: ತವರಿನಲ್ಲಿ ಸಚಿನ್ ತೆಂಡೂಲ್ಕರ್ 258 ಪಂದ್ಯಗಳ 313 ಇನ್ನಿಂಗ್ಸ್ ಆಡಿ 14,192 ರನ್ ಹೊಡೆಯುವ ಮೂಲಕ ಪಟ್ಟಿಯಲ್ಲಿ ಮೊದಲ ಸ್ಥಾನ ಪಡೆದಿದ್ದಾರೆ.

ಆಸ್ಟ್ರೇಲಿಯಾದ ರಿಕ್ಕಿ ಪಾಟಿಂಗ್ 249 ಪಂದ್ಯಗಳ 308 ಇನ್ನಿಂಗ್ಸ್‌ಗಳಿಂದ 13,117 ರನ್ ಚಚ್ಚಿ ಎರಡನೇ ಸ್ಥಾನ ಪಡೆದಿದ್ದಾರೆ. ದಕ್ಷಿಣ ಆಫ್ರಿಕಾದ ಜಾಕ್ ಕ್ಯಾಲಿಸ್ 234 ಪಂದ್ಯವಾಡಿ 282 ಇನ್ನಿಂಗ್ಸ್‌ಗಳಿಂದ 12,305 ರನ್ ಹೊಡೆದಿದ್ದಾರೆ. ಶ್ರೀಲಂಕಾದ ಮಾಜಿ ನಾಯಕ ಕುಮಾರ ಸಂಗಕ್ಕಾರ 235 ಪಂದ್ಯ, 270 ಇನ್ನಿಂಗ್ಸ್‌ಗಳಿಂದ 12,043 ರನ್ ಬಾರಿಸಿ ಪಟ್ಟಿಯಲ್ಲಿ ನಾಲ್ಕನೇ ಸ್ಥಾನ ಪಡೆದಿದ್ದಾರೆ.

ಬಾಂಗ್ಲಾ ವಿರುದ್ಧ ನಡೆಯುತ್ತಿರುವ ಮೊದಲ ಟೆಸ್ಟ್ ಪಂದ್ಯದ ಮೊದಲ ಇನ್ನಿಂಗ್ಸ್‌ನಲ್ಲಿ ಕೊಹ್ಲಿ 6 ರನ್ ಹೊಡೆದರೆ ಎರಡನೇ ಇನ್ನಿಂಗ್ಸ್‌ನಲ್ಲಿ 17 ರನ್ ಹೊಡೆದು ಔಟಾಗಿದ್ದಾರೆ.

### ಹೆಚ್‌ಡಿಕೆ, ಬಿಎಸ್‌ವೈಯಿಂದ ಜಂಟಿ ಡಿನೋಟಿಫೈ

# ಮೀಸಲಾತಿ ಸಿಗೋವರೆಗೂ ಹೋರಾಟ ನಿಲ್ಲಿಸಲ್ಲ

ಬಾಗಲಕೋಟೆ: ಪಂಚಮಸಾಲಿ ಸಮಾಜಕ್ಕೆ 2ಎ ಮೀಸಲಾತಿ ಪಡೆಯುವ ವಿಚಾರವಾಗಿ ಮತ್ತೆ ಹೋರಾಟ ಮಾಡುವ ಮುನ್ಸೂಚನೆಯನ್ನು ಬಸವ ಜಯಮೃತ್ಯುಂಜಯ ಸ್ವಾಮೀಜಿ ನೀಡಿದ್ದಾರೆ.

ಬಾಗಲಕೋಟೆಯಲ್ಲಿ ಸುದ್ದಿಗಾರರ ಜೊತೆ ಮಾತನಾಡಿದ ಅವರು, ಸಿದ್ದರಾಮಯ್ಯ ಸಿಎಂ ಆದ ಮೇಲೆ ಹೋರಾಟ ಶಾಂತಸ್ವರೂಪ ಪಡೆದಿದೆ ಎಂಬ ಪ್ರಶ್ನೆಗೆ ಉತ್ತರಿಸಿ, ಬೊಮ್ಮಾಯಿ ಅವರಿಗೆ ನಮ್ಮ ಸಮಾಜದ ಬಗ್ಗೆ ಗೌರವ ಇತ್ತು. ಭಯವೂ ಇತ್ತು. ಆದರೆ ಇವರಿಗೆ (ಸಿದ್ದರಾಮಯ್ಯ) ಏನು ಇಲ್ಲ. ಇವರನ್ನು ಕಂಡರೆ ನಾವು ಭಯ ಪಡುವಂತಹ ಪರಿಸ್ಥಿತಿ ಬಂದಿದೆ ಎಂದು ಅಚ್ಚರಿಯ ಹೇಳಿಕೆ ನೀಡಿದರು.



ಅವತ್ತಿನ ಸಂದರ್ಭವೇ ಬೇರೆ. ಬೊಮ್ಮಾಯಿ ಅವರಿಗೆ ನಮ್ಮ ಜನಾಂಗದ ಮತದ ಬಗ್ಗೆ ಗೌರವ ಇತ್ತು. ಹಾಗಾಗಿ ನಾವು ಎಲ್ಲೇ ಕರೆದರೂ ಬರುತ್ತಿದ್ದರು ಮತ್ತು ಮಾತನಾಡುತ್ತಿದ್ದರು. ಈಗ ನಾನು ಸಿಎಂ ಅವರ ಮನೆ ಬಾಗಿಲಿಗೆ ಹೋಗುವ ಪರಿಸ್ಥಿತಿ ಬಂದಿದೆ. ಅದು ಅನಿವಾರ್ಯವೂ ಆಗಿದೆ. ಆದರೆ ನಾವು ಹೋರಾಟದಲ್ಲಿ ಇರುವುದರಿಂದ ಎಷ್ಟೇ ಕಷ್ಟ ಆದರೂ ಹೋರಾಟ ಕೈ ಬಿಡಲ್ಲ. ನಮ್ಮ ಸಮಾಜದ ಶಾಸಕರ ಮೂಲಕವೂ ಸಿಎಂಗೆ ಒತ್ತಡ ಹಾಕಿಸುತ್ತೇವೆ. ಸಮಾಜದ ವಕೀಲರ ಮೂಲಕವೂ ಒತ್ತಡ ಹಾಕುತ್ತೇನೆ. ಯಾವುದೇ ಮುಖ್ಯಮಂತ್ರಿ ಇರಲಿ ಸ್ಪಂದನೆ ಮಾಡಲೇಬೇಕು ಎಂದರು.

ಯಾರೂ ಖಾಯಂ ಆಗಿ ಸಿಎಂ ಆಗಿರುವುದಿಲ್ಲ. ಈಗ ಇಲ್ಲದಿದ್ದರೂ ಮುಂದೆ ದೇವರು ಮೀಸಲಾತಿಗೆ ಸ್ಪಂದನೆ ಮಾಡುವಂತಹ ಒಳ್ಳೆಯ ಸಿಎಂ ರನ್ನು ಕೊಟ್ಟೇ ಕೊಡುತ್ತಾನೆ. ವಕೀಲರನ್ನು ನೋಡಿಯಾದರೂ ಸಿದ್ದರಾಮಯ್ಯ ಅವರ ಮನಸ್ಸು ಕರಗಿ ಮೀಸಲಾತಿ ಘೋಷಣೆ ಮಾಡಬಹುದು ಎಂದು ಅಂದುಕೊಂಡಿದ್ದೇವೆ. ಇದು ನಮ್ಮ ಏಳನೇ ಹಂತದ ಹೋರಾಟ. ಈ ಬಾರಿ ವಕೀಲರ ಮೂಲಕ ಪ್ರಯತ್ನ ಮಾಡುತ್ತಿದ್ದೇವೆ. ವಕೀಲರು ಪಂಚಮಸಾಲಿ ಮೀಸಲಾತಿ ಹೋರಾಟಕ್ಕೆ ಧ್ವನಿ ಜೋಡಿಸಿದರೆ ನಮಗೆ ಆನೆಬಲ ಬರುತ್ತದೆ. ಆಗಲಾದರೂ ಮುಖ್ಯಮಂತ್ರಿಗಳು ವಕೀಲರ ಮಾತಿಗೆ ಬೆಲೆ ಕೊಟ್ಟು ನಮಗೆ ನ್ಯಾಯ ಕೊಡಬಹುದು ಎನ್ನುವ ನಿರೀಕ್ಷೆ ಇದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ರಾಜ್ಯಾದ್ಯಂತ ನಮ್ಮ ಸಮಾಜದ ವಕೀಲರು ಬೆಂಬಲ ಕೊಟ್ಟಿದ್ದಾರೆ. ಹೀಗಾಗಿ ಬೆಳಗಾವಿಯಲ್ಲಿ ಸೆ.22ರಂದು ವಕೀಲರ ಮೂಲಕ ಹೋರಾಟ ಪ್ರಾರಂಭಿಸಿತ್ತೇವೆ. ಮೊದಲು ಬೆಳಗಾವಿಯ ಗಾಂಧಿ ಭವನದಲ್ಲಿ ಹೋರಾಟ ಮಾಡುತ್ತೇವೆ. ಸಿಎಂ ಕಾನೂನು ತಜ್ಞರ ಸಭೆ ಕರೆಯಲು ಅವರೇ ದಿನಾಂಕ ಘೋಷಣೆ ಮಾಡಬೇಕು. ಘೋಷಣೆ ಮಾಡಿದರೆ ಹೋರಾಟ ಕೈ ಬಿಡುತ್ತೇವೆ. ಇಲ್ಲದಿದ್ದರೆ ಘೋಷಣೆ ಮಾಡುವವರೆಗೂ ಹೋರಾಟ ಮುಂದುವರೆಸುತ್ತೇವೆ ಎಂದು ಸರ್ಕಾರಕ್ಕೆ ಹಾಗೂ ಸಿದ್ದರಾಮಯ್ಯ ಅವರಿಗೆ ಸೂಕ್ಷ್ಮ ಎಚ್ಚರಿಕೆ ನೀಡಿದರು.

### 308 ರನ್‌ಗಳ ಭರ್ಜರಿ ಮುನ್ನಡೆಯಲ್ಲಿ ಭಾರತ

# ಒಂದೇ ದಿನ 17 ವಿಕೆಟ್ ಪತನ

**ಚೆನ್ನೈ:** ಟೀಂ ಇಂಡಿಯಾ, ಬಾಂಗ್ಲಾದೇಶದ ನಡುವಿನ ಮೊದಲ ಟೆಸ್ಟ್ ಪಂದ್ಯದ ಎರಡನೇ ದಿನ ಒಟ್ಟು 17 ವಿಕೆಟ್ ಪತನಗೊಂಡಿದೆ. ಎರಡನೇ ಇನ್ನಿಂಗ್ಸ್‌ನಲ್ಲಿ 3 ವಿಕೆಟ್ ಕಳೆದುಕೊಂಡರೂ ಭಾರತ 308 ರನ್‌ಗಳ ಭರ್ಜರಿ ಮುನ್ನಡೆ ಸಾಧಿಸಿದೆ.

ಮೊದಲ ದಿನ 339 ರನ್‌ಗಳಿಗೆ 6 ವಿಕೆಟ್ ಕಳೆದುಕೊಂಡಿದ್ದ ಭಾರತ ಇಂದು ಆ ಮೊತ್ತಕ್ಕೆ 37 ರನ್ ಸೇರಿಸಿ ಅಂತಿಮವಾಗಿ 91.2 ಓವರ್‌ಗಳಲ್ಲಿ 376 ರನ್‌ಗಳಿಗೆ ಆಲೌಟ್ ಆಯ್ತು.

ಮೊದಲ ಇನ್ನಿಂಗ್ಸ್ ಆರಂಭಿಸಿದ ಬಾಂಗ್ಲಾಗೆ ಭಾರತದ ಬೌಲರ್ ಗಳು ಆರಂಭದಿಂದಲೇ ಕಾಡಲು ಆರಂಭಿಸಿದರು. ಅಂತಿಮವಾಗಿ 47.1 ಓವರ್‌ಗಳಲ್ಲಿ 149 ರನ್ ಗಳಿಗೆ ಬಾಂಗ್ಲಾ ಸರ್ವಪತನ ಕಂಡಿತು. ಎರಡನೇ ಇನ್ನಿಂಗ್ಸ್ ಆರಂಭಿಸಿದ ಭಾರತ 23 ಓವರ್ ಗಳಲ್ಲಿ 3 ವಿಕೆಟ್ ಕಳೆದುಕೊಂಡು 81 ರನ್‌ಗಳಿಸಿತು.ಗುರುವಾರ ಔಟಾಗದೇ ಉಳಿದಿದ್ದ ಜಡೇಜಾ 86 ರನ್, ಅಶ್ವಿನ್ 113 ರನ್, ಆಕಾಶ್ ದೀಪ್ 17 ರನ್‌ಗಳಿಸಿ ವಿಕೆಟ್ ಒಪ್ಪಿಸಿದರು.



## ಆರಂಭದಿಂದಲೇ ಕುಸಿತ

**ಮೊದಲ ಓವರ್‌ನಿಂದಲೇ ಬಾಂಗ್ಲಾದ ವಿಕೆಟ್ ಪತನ ಆರಂಭವಾಯಿತು. ಆರಂಭಿಕ ಆಟಗಾರ ಶಾದಂ ಇಸ್ಲಾಂ 2 ರನ್ ಹೊಡೆದು ಬುಮ್ರಾಗೆ ಬೌಲ್ಡ್ ಆದರು. ಬಾಂಗ್ಲಾ ಪರ ಶಕೀಬ್ ಅಲ್ ಹಸನ್ 32 ರನ್ , ಮೆಹ್ದಿ ಹಸನ್ 27 ರನ್, ಲಿಟ್ಟನ್ ದಾಸ್ 22 ರನ್ ಹೊಡೆದು ಔಟಾದರು. ಬುಮ್ರಾ 4 ವಿಕೆಟ್ ಕಿತ್ತರೆ, ಸಿರಾಜ್, ಆಕಾಶ್ ದೀಪ್, ರವೀಂದ್ರ ಜಡೇಜಾ ತಲಾ 2 ವಿಕೆಟ್ ಪಡೆದರು.**

## ಮೂರು ವಿಕೆಟ್ ಪತನ

**ಎರಡನೇ ಇನ್ನಿಂಗ್ಸ್ ಆರಂಭಿಸಿದ ಭಾರತದ ಮೂವರು ಬ್ಯಾಟ್ಸ್‌ಮನ್‌ಗಳು ಪೆವಿಲಿಯನ್ ಸೇರಿದ್ದಾರೆ. ಯಶಸ್ವಿ ಜೈಸ್ವಾಲ್ 10 ರನ್, ರೋಹಿತ್ ಶರ್ಮಾ 5 ರನ್, ವಿರಾಟ್ ಕೊಹ್ಲಿ 17 ರನ್ ಹೊಡೆದು ಔಟಾಗಿದ್ದಾರೆ. ಶುಭಮನ್ ಗಿಲ್ ಔಟಾಗದೇ 33 ರನ್, ರಿಷಭ್ ಪಂತ್ ಔಟಾಗದೇ 12 ರನ್ ಹೊಡೆದು ಬ್ಯಾಟಿಂಗ್ ಕಾಯ್ದುಕೊಂಡಿದ್ದಾರೆ. 17 ವಿಕಟ್ ಪತನ: ಇದೇ ಮೊದಲ ಬಾರಿಗೆ ಚೇಪಾಕ್ ಮೈದಾನದಲ್ಲಿ 17 ವಿಕೆಟ್ ಪತನವಾಗಿದೆ. ಮೊದಲ ಅವಧಿಯಲ್ಲಿ 7, ಎರಡನೇ ಅವಧಿಯಲ್ಲಿ 5, ಮೂರನೇ ಅವಧಿಯಲ್ಲಿ 5 ವಿಕೆಟ್ ಪತನಗೊಂಡಿದೆ.**

# ರಾಜ್ಯದ ಎಲ್ಲಾ ದೇವಾಲಯಗಳಲ್ಲಿ ನಂದಿನಿ ತುಪ್ಪ ಕಡ್ಡಾಯ

**ಬೆಂಗಳೂರು:** ತಿರುಪತಿ ಲಡ್ಡು ವಿವಾದ ಜೋರಾಗುತ್ತಿದ್ದಂತೆ ಕರ್ನಾಟಕ ಸರ್ಕಾರ ಎಚ್ಚೆತ್ತುಕೊಂಡಿದೆ. ರಾಜ್ಯದ ಎಲ್ಲಾ ದೇಗುಲಗಳಲ್ಲಿ ಪ್ರಸಾದ ತಯಾರಿಸಲು ನಂದಿನಿ ತುಪ್ಪವನ್ನೇ ಬಳಸುವಂತೆ ಮುಜುರಾಯಿ ಇಲಾಖೆ ಆದೇಶ ಹೊರಡಿಸಿದೆ.

ಕರ್ನಾಟಕ ರಾಜ್ಯ ಧಾರ್ಮಿಕ ದತ್ತಿ ಇಲಾಖೆಯ ಅಡಿ ಬರುವ ಎಲ್ಲಾ ಅಧಿಸೂಚಿತ ದೇವಾಲಯಗಳಲ್ಲಿ ಸೇವೆಗಳಿಗೆ, ದೀಪಗಳಿಗೆ ಮತ್ತು ಎಲ್ಲಾ ವಿಧದ ಪ್ರಸಾದ ತಯಾರಿಕೆಗೆ ಹಾಗೂ ದಾಸೋಹ ಭವನದಲ್ಲಿ ಕಡ್ಡಾಯವಾಗಿ ನಂದಿನಿ ತುಪ್ಪವನ್ನು ಮಾತ್ರ ಬಳಸಬೇಕು. ದೇವಾಲಯಗಳಲ್ಲಿ ತಯಾರಿಸಲಾಗುವ ಪ್ರಸಾದಗಳಲ್ಲಿ ಗುಣಮಟ್ಟವನ್ನು ಕಾಯ್ದುಕೊಳ್ಳಬೇಕೆಂದು ಧಾರ್ಮಿಕ ದತ್ತಿ ಇಲಾಖೆ ಆಯುಕ್ತರು ಆದೇಶದಲ್ಲಿ ಸೂಚಿಸಿದ್ದಾರೆ. ಕೆಎಂಎಫ್ ಉತ್ಪನ್ನ ನಂದಿನಿ ತುಪ್ಪದ ಗುಣಮಟ್ಟಕ್ಕೆ ಎಲ್ಲರೂ ಉಘೇ ಉಘೇ ಎನ್ನುತ್ತಿದ್ದಾರೆ. ಬಿಡ್ ವೇಳೆ ಕಡಿಮೆ ದರಕ್ಕೆ ಗುಣಮಟ್ಟದ ನಂದಿನಿ ತುಪ್ಪ ಪೂರೈಸಲಾಗುವುದಿಲ್ಲ ಎಂದು ಹಿಂದೆ ಸರಿದಿದ್ದನ್ನು ತೆಲುಗುದೇಶಂ ಎಂಎಲ್‌ಸಿ ದೀಪಕ್ ರೆಡ್ಡಿ ನೆನಪಿಸಿಕೊಂಡಿದ್ದಾರೆ. ತಿರುಮಲ ದೇವಸ್ಥಾನದ ಮಾಜಿ ಪ್ರಧಾನ ಅರ್ಚಕ ರಮಣ ದೀಕ್ಷಿತುಲು ಕೂಡ, ನಂದಿನಿ ತುಪ್ಪದ ಗುಣಮಟ್ಟವನ್ನು ಹೊಗಳಿದ್ದಾರೆ. ಕರ್ನಾಟಕದ ನಂದಿನಿ ತುಪ್ಪವನ್ನು ಲಡ್ಡು ತಯಾರಿಯಲ್ಲಿ ಬಳಸಲು ಮತ್ತೆ ನಿರ್ಧರಿಸಿರುವುದು ಒಳ್ಳೆಯ ಸಂಗತಿ ಎಂದಿದ್ದಾರೆ.



# ನೇಣು ಬಿಗಿದುಕೊಂಡು ದಂಪತಿ ಆತ್ಮಹತ್ಯೆ



**ಮಂಗಳೂರು:** ದಂಪತಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲೂಕಿನ ಕಾಶಿಪಟ್ನ ಬಳಿ ನಡೆದಿದೆ.

ಕಾಶಿಪಟ್ನದ ಉರ್ದುಗುಡ್ಡೆ ನಿವಾಸಿಗಳಾದ ನೋಣಯ್ಯ ಪೂಜಾರಿ (63) ಹಾಗೂ ಪತ್ನಿ ಬೇಬಿ (46) ಆತ್ಮಹತ್ಯೆ ಮಾಡಿಕೊಂಡವರು. ನಿನ್ನೆ ತಡರಾತ್ರಿ ಮನೆ ಸಮೀಪದ ಗುಡ್ಡದಲ್ಲಿ ಮರಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ನೋಣಯ್ಯ ಪೂಜಾರಿಯ ಮೊದಲ ಪತ್ನಿ ಹತ್ತು ವರ್ಷದ ಹಿಂದೆ ಸಾವನ್ನಪ್ಪಿದ್ದರು. ಬಳಿಕ ಬೇಬಿ ಅವರನ್ನ ಎರಡನೇ ಮದುವೆಯಾಗಿದ್ದರು. ಕಳೆದ ಐದು ವರ್ಷದಿಂದ ನೋಣಯ್ಯ ಪೂಜಾರಿ ತಲೆನೋವಿನಿಂದ ಬಳಲುತ್ತಿದ್ದು ಇದರಿಂದ ನೊಂದಿದ್ದರು. ಇತ್ತ ಪತ್ನಿ ಬೇಬಿಯೂ ಮಕ್ಕಳಾಗಿರಲಿಲ್ಲ ಅನ್ನೋ ಕೊರಗಿನಲ್ಲಿದ್ದರು. ಇದೇ ಕಾರಣಕ್ಕೆ ಆತ್ಮಹತ್ಯೆ ಮಾಡಿಕೊಂಡಿರುವ ಶಂಕೆ ವ್ಯಕ್ತವಾಗಿದೆ. ವೇಣೂರು ಪೊಲೀಸ್ ಠಾಣೆಯಲ್ಲಿ ಆತ್ಮಹತ್ಯೆ ಪ್ರಕರಣ ದಾಖಲಾಗಿದೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com